ಸಂಪುಟ: 14 Volume | ಸಂಚಿಕೆ: 33 Issue | ಪುಟಗಳು 08 Pages | ಶುಕ್ರವಾರ 08 ಮೇ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ


Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**
ವಿವೇಕವೆಂದರೆ ಬಿಡಿಸಿ ನೋಡುವುದು, ವಿಶ್ಲೇಷಿಸುವುದು, ತೂಗುವುದು, ಅಳೆಯುವುದು.
–ಗೋಪಾಲಕೃಷ್ಣ ಅಡಿಗ

## ಸಿಎಂ ಸಿದ್ದರಾಮಯ್ಯಗೆ ಅಗ್ರಸ್ಥಾನ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ಕೇರಳ ವಿಧಾನಸಭಾ ಚುನಾವಣೆಯಲ್ಲಿ ಎಲ್‌ಡಿಎಫ್ ಸೋತ ಹಿನ್ನೆಲೆಯಲ್ಲಿ 80 ವರ್ಷದ ಪಿಣರಾಯಿ ವಿಜಯನ್ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರಿಂದ, ಕರ್ನಾಟಕದ 78 ವರ್ಷದ ಸಿದ್ದರಾಮಯ್ಯ ಅವರು ಈಗ ದೇಶದ ಅತ್ಯಂತ ಹಿರಿಯ ಮುಖ್ಯಮಂತ್ರಿಯಾಗಿದ್ದಾರೆ.

ಆಂಧ್ರಪ್ರದೇಶದ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು (75), ಮಿಜೋರಾಂ ಮುಖ್ಯಮಂತ್ರಿ ಲಾಲ್ದುಹೋಮ ಮತ್ತು ನಾಗಾಲ್ಯಾಂಡ್ ಮುಖ್ಯಮಂತ್ರಿ ನೀಫಿಯು ರಿಯೊ (74) ಪಟ್ಟಿಯಲ್ಲಿದ್ದಾರೆ. ಅರುಣಾಚಲ ಪ್ರದೇಶದ ಮುಖ್ಯಮಂತ್ರಿ ಪೆಮಾ ಖಂಡು ದೇಶದ ಅತ್ಯಂತ ಕಿರಿಯ ಮುಖ್ಯಮಂತ್ರಿಯಾಗಿದ್ದಾರೆ ಅವರಿಗೆ 46 ವರ್ಷ ವಯಸ್ಸಾಗಿದೆ.

ಸಿದ್ದರಾಮಯ್ಯ 1983 ರಲ್ಲಿ ಮೊದಲು ಶಾಸಕರಾದರು, ಆ ವೇಳೆ ಅವರಿಗೆ 36 ವರ್ಷ. ಅಂದಿನಿಂದ ಅವರು ಸಚಿವ, ವಿರೋಧ ಪಕ್ಷದ ನಾಯಕ ಮತ್ತು ಈಗ ಎರಡು ಬಾರಿ ಸಿಎಂ ಸೇರಿದಂತೆ ಹಲವು ಹುದ್ದೆಗಳನ್ನು ಅಲಂಕರಿಸಿದ್ದಾರೆ. ಅವರು 17 ರಾಜ್ಯ ಬಜೆಟ್‌ಗಳನ್ನು ಮಂಡಿಸಿದ ದಾಖಲೆಯನ್ನು ಹೊಂದಿದ್ದಾರೆ.

ಸಿದ್ದರಾಮಯ್ಯ ಈಗ ಕರ್ನಾಟಕದ ಅತಿ ಹೆಚ್ಚು ಕಾಲ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿ, ಡಿ. ದೇವರಾಜ್ ಅರಸು ದಾಖಲೆಯನ್ನು ಮೀರಿಸಿದ್ದಾರೆ. ಅರಸು ಎರಡು ಅವಧಿಗೆ ಈ ಹುದ್ದೆಯನ್ನು ಅಲಂಕರಿಸಿ 7 ವರ್ಷ 239 ದಿನಗಳ ಕಾಲ ಅಧಿಕಾರದಲ್ಲಿದ್ದರು. 2013 ರಿಂದ 2018 ರವರೆಗೆ ಪೂರ್ಣ ಅವಧಿಯನ್ನು ಪೂರೈಸಿದ ನಂತರ, ಸಿದ್ದರಾಮಯ್ಯ ಅವರು ಮೇ 2023 ರಿಂದ ಈ ಹುದ್ದೆಯನ್ನು ಅಲಂಕರಿಸಿದ್ದಾರೆ.

ಸಿದ್ದರಾಮಯ್ಯ ಅವರಿಗೆ ಈಗ 78 ವರ್ಷ ಒಂಬತ್ತು ತಿಂಗಳು. ಕರ್ನಾಟಕದಲ್ಲಿ ಈ ವಯಸ್ಸಿನಲ್ಲಿ ಬೇರೆ ಯಾವ ರಾಜಕಾರಣಿಯೀ ಈ ಉನ್ನತ ಹುದ್ದೆಯನ್ನು ಅಲಂಕರಿಸಿಲ್ಲ. ಬಿಜೆಪಿಯ ಪ್ರಬಲ ನಾಯಕ ಬಿಎಸ್ ಯಡಿಯೂರಪ್ಪ ಜುಲೈ 2021 ರಲ್ಲಿ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಿದಾಗ ಅವರಿಗೆ 78 ವರ್ಷ ಐದು ತಿಂಗಳು ವಯಸ್ಸಾಗಿತ್ತು.

2004 ರಲ್ಲಿ ಎಸ್‌ಎಂ ಕೃಷ್ಣ ಅವರು ರಾಜೀನಾಮೆ ನೀಡಿದಾಗ 72 ವರ್ಷ ವಯಸ್ಸು. ಜೆಹೆಚ್ ಪಟೇಲ್ ಮತ್ತು ಧರಂ ಸಿಂಗ್ 69 ವರ್ಷ ವಯಸ್ಸಿನವರಾಗಿದ್ದರು.

1980 ರಲ್ಲಿ ಪ್ರಮಾಣವಚನ ಸ್ವೀಕರಿಸಿದಾಗ ಆರ್ ಗುಂಡೂರಾವ್ ಅವರು 43 ನೇ ವಯಸ್ಸಿನಲ್ಲಿ ರಾಜ್ಯದ ಅತ್ಯಂತ ಕಿರಿಯ ಮುಖ್ಯಮಂತ್ರಿ ಎಂಬ ಖ್ಯಾತಿಗೆ ಪಾತ್ರರಾಗಿದ್ದರು.

## ಗುರುಗಳಿಗೆ ಗೌರವ ಶ್ಲಾಘನೀಯ: ಖಂಡ್ರೆ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ವಿದ್ಯಾರ್ಥಿಗಳು ತಮ್ಮ ಗುರುಗಳಿಗೆ ನಿತ್ಯವೂ ಗೌರವ, ವಿಧೇಯತೆ ಮತ್ತು ಕೃತಜ್ಞತೆಯನ್ನು ಸಲ್ಲಿಸಬೇಕು. ಜ್ಞಾನದಾನ ಮಾಡುವ ಶಿಕ್ಷಕರ ಬಗ್ಗೆ ಭಕ್ತಿ, ನಮ್ರತೆ ಇಟ್ಟುಕೊಂಡು ಅವರ ಆದರ್ಶಗಳನ್ನು ಪಾಲಿಸುವುದೇ ವಿದ್ಯಾರ್ಥಿಗಳು ಗುರುವಿಗೆ ನೀಡುವ ಅತ್ಯುತ್ತಮ ಕಾಣಿಕೆಯಾಗಿದೆ ಎಂದು ಸಂಸದ ಸಾಗರ ಖಂಡ್ರೆ ಅಭಿಪ್ರಾಯ ಪಟ್ಟರು.

ನಗರದ ಶಾಂತಿವರ್ಧಕ ಶಿಕ್ಷಣ ಸಂಸ್ಥೆಯ ಕೈಗಾರಿಕೆ ತರಬೇತಿ ಕೇಂದ್ರದಲ್ಲಿ ಹಳೆಯ ವಿದ್ಯಾರ್ಥಿಗಳ ವತಿಯಿಂದ ಆಯೋಜಿಸಿದ್ದ ಗುರುವಂದನಾ ಮತ್ತು ಹಳೆಯ ವಿದ್ಯಾರ್ಥಿಗಳ ಪನರ್ಮಿಲನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಸಂಸ್ಥೆಯ ಹಳೆಯ ವಿದ್ಯಾರ್ಥಿಗಳು ಸೇರಿ ಗುರುವಂದನ ಕಾರ್ಯಕ್ರಮದ ಮೂಲಕ ತಮ್ಮ ಗುರುಗಳಿಗೆ ಗೌರವ ನೀಡುತ್ತಿರುವುದು ಮಾದರಿ ಎನಸಿದೆ.

ಈ ಸಂಸ್ಥೆಯಲ್ಲಿ ಇದು ವರೆಗೂ ಸಾವಿರಾರೂ ವಿದ್ಯಾರ್ಥಿಗಳು ಐಟಿಐ ಕೋರ್ಸ್ ಪೂರ್ಣಗೊಳಿಸಿ ವಿವಿಧ ಪ್ರತಿಷ್ಠಿತ ಕಂಪನಿಗಳಲ್ಲಿ ಉದ್ಯೋಗಿಗಳಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಇನ್ನೂ ಕೆಲ ವಿದ್ಯಾರ್ಥಿಗಳು ಸ್ವಂತ ಕಂಪನಿ ಆರಂಭಿಸಿ ನೂರಾರೂ ಯುವಕರಿಗೆ





ಉದ್ಯೋಗ ಕಲ್ಪಿಸಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಸಂಸ್ಥೆಯ ಪ್ರಧಾನ ವ್ಯವಸ್ಥಾಪಕ ಸುರೇಂದ್ರನ್ ಆರ್ ಮಾತನಾಡಿದರು. ಹಳೆಯ ವಿದ್ಯಾರ್ಥಿಗಳು ತಮ್ಮ ಅನುಭವ ಹಂಚಿಕೊಂಡರು. ಐಟಿಐ ಪ್ರಾಚಾರ್ಯ ಸಂಗಪ್ಪ ಹುಲಸೂರೆ, ಶಿವರಾಜ ತಡೋಳಗೆ, ವಾಮನರಾವ ಬಿರಾದಾರ್ ಮಾತನಾಡಿದರು. ಈ ಸಂದರ್ಭದಲ್ಲಿ ಅಕ್ಕಮಹಾದೇವಿ ಕಾಲೇಜಿನ ಪ್ರಾಚಾರ್ಯ ಭೀಮರಾವ ಗಿರಿ ಸೇರಿದಂತೆ ಹಲವರು ಇದ್ದರು. ಮಲ್ಲಿಕಾರ್ಜುನ ಮೇತ್ರೆ ಸ್ವಾಗತಿಸಿದರು. ದೀಪಕ ಠಮಕೆ ನಿರೂಪಿಸಿ, ವಂದಿಸಿದರು.

## ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

**ಭಾಲ್ಕಿ:** 2026ನೇ ಸಾಲಿನ ರಾಜ್ಯ ಸರಕಾರಿ ನೌಕರರ ಮಕ್ಕಳ ಪ್ರತಿಭಾ ಪುರಸ್ಕಾರಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. 2026ನೇ ಸಾಲಿನ ಎಸ್ಸೆಸ್ಸೆಲ್ಸಿ ಮತ್ತು ದ್ವಿತೀಯ ಪಿಯುಸಿಯಲ್ಲಿ ಶೇ.90ಕ್ಕಿಂತ ಹೆಚ್ಚು ಅಂಕ ಗಳಿಸಿರುವ ಸರಕಾರಿ ನೌಕರರ ಮಕ್ಕಳು ಅರ್ಜಿ ಸಲ್ಲಿಸಬಹುದಾಗಿದೆ. ಮೊದಲ ಪ್ರಯತ್ನದಲ್ಲಿ ಪಾಸಾದ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳ ತಂದೆ–ತಾಯಿ ರಾಜ್ಯ ಸರಕಾರದ ಕಾಯಂ ನೌಕರರಾಗಿರಬೇಕು. https://powermedia.info ಲಿಂಕ್ ಮೂಲಕ ಅರ್ಜಿ ಸಲ್ಲಿಸಬೇಕು.



ಸಂಘ ನಿಗದಿಪಡಿಸಿದ ನಮೂನೆಯಲ್ಲಿ ಸರಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷರು/ತಾಲೂಕು ಅಧ್ಯಕ್ಷರಿಂದ ದೃಢೀಕರಿಸಿ ಆನ್‌ಲೈನ್‌ನಲ್ಲಿ ಅಪ್ಲೋಡ್ ಮಾಡಬೇಕು. ನಿಗಮ, ಮಂಡಳಿ, ಪ್ರಾಧಿಕಾರ, ವಿಶ್ವವಿದ್ಯಾಲಯ, ಖಾಸಗಿ ಹಾಗೂ ಅನುದಾನಿತ ವಿದ್ಯಾ ಸಂಸ್ಥೆಯ ನೌಕರರು ಅರ್ಜಿ ಸಲ್ಲಿಸುವಂತಿಲ್ಲ. ಅರ್ಜಿ ಸಲ್ಲಿಸಲು ಇದೇ ಮೇ.25 ಕೊನೆಯ ದಿನವಾಗಿದೆ ಎಂದು ತಾಲೂಕು ಸರಕಾರಿ ನೌಕರರ ಸಂಘದ ಅಧ್ಯಕ್ಷ ಚಂದ್ರಶೇಖರ ಬನ್ನಾಳೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೇಮರೆಡ್ಡಿ ಮಲ್ಲಮ್ಮ ಜನ್ಮೋತ್ಸವ

• ಮಲ್ಲಮ್ಮ ನುಡಿ ವಾರ್ತೆ ಬೀದರ

ನಗರದಲ್ಲಿ ಶ್ರೀ ಹೇಮರೆಡ್ಡಿ ಮಲ್ಲಮ್ಮ ವಿಚಾರ ವೇದಿಕೆ ಚಾರಿಟೇಬಲ್ ಟ್ರಸ್ಟ್ , ಜಿಲ್ಲಾ ರೆಡ್ಡಿ ಸಮಾಜ ಮತ್ತು ಜಿಲ್ಲಾಡಳಿತದ ವತಿಯಿಂದ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮನವರ 604ನೇ ಜನ್ಮೋತ್ಸವ ಹಮ್ಮಿಕೊಳ್ಳಲಾಗಿದೆ.

ಮೇ 9 ರಂದು ಸಾಯಂಕಾಲ 5.45 ಕ್ಕೆ ಹೇಮರೆಡ್ಡಿ ಮಲ್ಲಮ್ಮನವರ ಮಂದಿರದಲ್ಲಿ ಕಳಸ ಹೊತ್ತ ಮಹಿಳೆಯರಿಂದ ಮೆರವಣಿಗೆ, ನಂತರ ಸಂಜೆ 7.15ಕ್ಕೆ ದೀಪೋತ್ಸವ ಕಾರ್ಯಕ್ರಮ ನಡೆಯಲಿದೆ.

ಮೇ 10 ರಂದು ಮುಂಜಾನೆ 6 ಗಂಟೆಗೆ ಅಭಿಷೇಕ ಪೂಜೆ ನಡೆಯುವದು. ಬೆಳಿಗ್ಗೆ 9.30 ಗಂಟೆಗೆ ಜಿಲ್ಲಾಧಿಕಾರಿ ಕಛೇರಿಯಲ್ಲಿ ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಜನ್ಮೋತ್ಸವ ಆಚರಿಸಲಾಗುವದು. ನಂತರ ಮುಂದಿನ ಕಾರ್ಯಕ್ರಮ ಹೇಮರೆಡ್ಡಿ ಮಲ್ಲಮ್ಮ ಮಂದಿರದಲ್ಲಿ ನಡೆಯುವವು. ಮುಂಜಾನೆ 11.15 ಕ್ಕೆ ಹೇಮರೆಡ್ಡಿ ಮಲ್ಲಮ್ಮನವರ ತೊಟ್ಟಿಲು ಕಾರ್ಯಕ್ರಮ, ಮಧ್ಯಾಹ್ನ 1 ಗಂಟೆ ನಂತರ ಮಹಾ ಪ್ರಸಾದ ವಿತರಣೆ ನಡೆಯಲಿದೆ. ಎಸ್.ಎಸ್.ಎಲ್.ಸಿ. ಮತ್ತು ದ್ವಿತೀಯ ಪಿಯುಸಿಯಲ್ಲಿ



ಶೇ 90 ಮೇಲ್ಪಟ್ಟು ಅಂಕ ಪಡೆದು ಪಾಸಾದ ವಿದ್ಯಾರ್ಥಿಗಳಿಗೆ ಮೇ.10 ರಂದು ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಮಾಹಿತಿಗೆ 9632885559 ಸಂಖ್ಯೆಯನ್ನು ಸಂಪರ್ಕಿಸುವಂತೆ ಶ್ರೀ ಹೇಮರೆಡ್ಡಿ ಮಲ್ಲಮ್ಮ ವಿಚಾರ ವೇದಿಕೆ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ಶಂಕರ ರೆಡ್ಡಿ ಚಿಟ್ಟಾ ಕೋರಿದ್ದಾರೆ.

## ಅಧಿಕಾರಿಗಳು ಲೋಕಾ ಬಲೆಗೆ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಗ್ರಾಮ ಪಂಚಾಯತಿಯ ನಿವೃತ್ತ ಕಾರ್ಯದರ್ಶಿಯೊಬ್ಬರು ಗ್ರಾಮ ಪಂಚಾಯತಿಯ ಹಾಲಿ ಕಾರ್ಯದರ್ಶಿ ಸೇರಿದಂತೆ ಮೂವರನ್ನು ಲೋಕಾಯುಕ್ತ ಬಲೆಗೆ ಬೀಳುವಂತೆ ಮಾಡಿದ್ದಾರೆ.

ವಸತಿ ಉದ್ದೇಶಕ್ಕೆ ಭೂ ಪರಿವರ್ತನೆಯಾದ ಆಸ್ತಿಗೆ ಫಾರಂ 9–11 ಮಾಡಿಕೊಡಲು ₹75 ಸಾವಿರಕ್ಕೆ ಬೇಡಿಕೆ ಇಟ್ಟಿದ್ದ ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಬಿಲ್ ಕಲೆಕ್ಟರ್ ಮತ್ತು ದಿನಗೂಲಿ ನೌಕರ ಇಂದು ರೆಡ್ ಹ್ಯಾಂಡ್ ಲೋಕಾಯುಕ್ತರ ಬಲೆಗೆ ಬಿದ್ದಿದ್ದಾರೆ.

ಲೋಕಾಯುಕ್ತರ ಬಲೆಗೆ ಬಿದ್ದಿರುವ ಮೂವರು ಕೊಪ್ಪಳ ಹತ್ತಿರದ ಕೋಳೂರು ಗ್ರಾಮ ಪಂಚಾಯಿತಿಯ ಕಾರ್ಯದರ್ಶಿ ಮರಿಯಪ್ಪ ಮಡಿವಾಳರ, ಬಿಲ್ ಕಲೆಕ್ಟರ್ ನಾಗರಾಜ ಬಡಿಗೇರ್ ಹಾಗೂ ದಿನಗೂಲಿ ನೌಕರ ಮಾರುತಿ ಮೈನಹಳ್ಳಿ.

ಸುಮಂಗಲಾ ಎಂಬುವರ ಹೆಸರಿನಲ್ಲಿ ಕೋಳೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗದಗಲ್ ಗ್ರಾಮದಲ್ಲಿ ಎಂಟು ಗಂಟೆ ಕೃಷಿ ಜಮೀನು ಇತ್ತು. ಅದು 2024ರಲ್ಲಿ ಭೂ ಪರಿವರ್ತನೆ ಆಗಿದೆ. 2025 ರಲ್ಲಿ ನಗರಾಭಿವೃದ್ಧಿ ಪ್ರಾಧಿಕಾರ ಕೂಡ ಲೇಔಟ್ ಅನುಮೋದನೆ ನೀಡಿದೆ.




ಈಗ ಈ ಆಸ್ತಿಗೆ ಗ್ರಾಮ ಪಂಚಾಯಿತಿಯಲ್ಲಿ ಖಾತಾ ದಾಖಲಾತಿ ಮಾಡಿ ಫಾರಂ 9–11 ಮಾಡಿ ಕೊಡಲು ₹75 ಸಾವಿರ ಲಂಚಕ್ಕೆ ಮೂವರೂ ಬೇಡಿಕೆ ಇಟ್ಟಿದ್ದರು. ಈ ಬಗ್ಗೆ ಸುಮಂಗಲಾ ಅವರ ಪತಿ ಜ್ಞಾನೇಶ್ವರ ನಿವೃತ್ತ ಗ್ರಾಮ ಪಂಚಾಯತ್ ಕಾರ್ಯದರ್ಶಿ ಹಗರಿಬೊಮ್ಮನಹಳ್ಳಿಯವರು. ಇವರು ಲೋಕಾಯುಕ್ತರಿಗೆ ದೂರು ನೀಡಿದ್ದರು. ಅದರಂತೆ ಇಂದು ನಡೆದ ಕಾರ್ಯಾಚರಣೆಯಲ್ಲಿ ಮೂವರು ಲೋಕಾಯುಕ್ತರು ಬಲೆಗೆ ಬಿದ್ದಿದ್ದಾರೆ.

ಇಂದಿನ ಕಾರ್ಯಚರಣೆಯಲ್ಲಿ ಲೋಕಾಯುಕ್ತ ಡಿಎಸ್ಪಿ ಲೋಕೇಶ್, ಪಿ ಐ ಚಂದ್ರಪ್ಪ , ಇನ್ಸ್ ಪೆಕ್ಟರ್ ಗಳಾದ ಸುನಿಲ್, ಶೈಲಾ ಪ್ಯಾಟಿ ಶೆಟ್ಟರ್ ಹಾಗೂ ಸಿಬ್ಬಂದಿ ಇದ್ದರು.

## 785 ಮೊಬೈಲ್ ಪತ್ತೆ ಹಚ್ಚಿ ವಾರಸುದಾರರಿಗೆ ಹಸ್ತಾಂತರ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಕಳೆದ ಎರಡು ತಿಂಗಳ ಆಪರೇಷನ್ ಭರವಸೆ ವಿಶೇಷ ಕಾರ್ಯಾಚರಣೆ ಮೂಲಕ ಸುಮಾರು 1.44 ಕೋಟಿ 90,000 ರೂ.ಗಳ ಮೌಲ್ಯದ 785 ಮೊಬೈಲ್‌ಗಳನ್ನು ಪತ್ತೆ ಹಚ್ಚಿ ವಾರಸುದಾರರಿಗೆ ಹಸ್ತಾಂತರಿಸಲಾಗಿದೆ ಎಂದು ನಗರ ಪೋಲಿಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ., ಅವರು ಹೇಳಿದರು.

ಗುರುವಾರ ತಮ್ಮ ಕಚೇರಿಯಲ್ಲಿ ಪತ್ತೆಹಚ್ಚಲಾದ ಬೃಹತ್ ಪ್ರಮಾಣದ ಮೊಬೈಲ್‌ಗಳನ್ನು ಪ್ರದರ್ಶಿಸಿ



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿಇಐಆರ್ ಪೋರ್ಟಲ್ ಬಳಸಿಕೊಂಡು ವಿವಿಧ ಠಾಣಾ ವ್ಯಾಪ್ತಿಯಲ್ಲಿ ಕಳೆದುಹೋಗಿದ್ದ ವಿವಿಧ ಕಂಪೆನಿಗಳ ಬೆಲೆಬಾಳುವ ಮೊಬೈಲ್‌ಗಳನ್ನು ಪತ್ತೆ ಹಚ್ಚಲಾಗಿದೆ ಎಂದರು.

ಮೊಬೈಲ್ ಮಾಡೆಲ್‌ಗಳಲ್ಲಿ ರೆಡ್ ಮಿ ಕಂಪೆನಿಯ 96 ಮೊಬೈಲ್‌ಗಳು, ಓಪ್ಪೋ ಕಂಪೆನಿಯ 96 ಮೊಬೈಲ್‌ಗಳು, ರಿಯಲ್‌ಮಿ ಕಂಪೆನಿಯ 93 ಮೊಬೈಲ್‌ಗಳು, ವಿವೋ ಕಂಪೆನಿಯ 89 ಮೊಬೈಲ್‌ಗಳು, ಒನ್ ಪ್ಲಸ್ ಕಂಪೆನಿಯ 79 ಮೊಬೈಲ್‌ಗಳು, ಇನ್ ಫೀಕ್ಸ್ ಕಂಪೆನಿಯ 75 ಮೊಬೈಲ್‌ಗಳು, ಪೋಕೋ ಕಂಪೆನಿಯ 50 ಮೊಬೈಲ್‌ಗಳು, ಸ್ಯಾಮ್ ಸಂಗ್ ಕಂಪೆನಿಯ 47 ಮೊಬೈಲ್‌ಗಳು, ಮೊಟೊರೋಲಾ ಕಂಪೆನಿಯ 45 ಮೊಬೈಲ್‌ಗಳು, ಕ್ಷೀಯೋಮಿ ಕಂಪೆನಿಯ 36 ಮೊಬೈಲ್‌ಗಳು, ಟೆಕ್ನೋ ಸ್ಪಾರ್ಕ್ ಕಂಪೆನಿಯ 25 ಮೊಬೈಲ್‌ಗಳು, ಹಾನರ್ ಕಂಪೆನಿಯ 19 ಮೊಬೈಲ್‌ಗಳು, ಐಕ್ಯೋ ಕಂಪೆನಿಯ 14 ಮೊಬೈಲ್‌ಗಳು, ಐಟೆಲ್ ಕಂಪೆನಿಯ 10 ಮೊಬೈಲ್‌ಗಳು,



ನೋಕಿಯಾ ಕಂಪೆನಿಯ 9 ಮೊಬೈಲ್‌ಗಳು, ಆಪಲ್ ಕಂಪೆನಿಯ ಎರಡು ಮೊಬೈಲ್‌ಗಳು ಸೇರಿ ವಿವಿಧ ಕಂಪೆನಿಯ 785 ಮೊಬೈಲ್‌ಗಳನ್ನು ಪತ್ತೆ ಹಚ್ಚಲಾಗಿದೆ ಎಂದು ಅವರು ವಿವರಿಸಿದರು.

ನಗರ ಪೊಲೀಸ್ ಆಯುಕ್ತಾಲಯ ವ್ಯಾಪ್ತಿಯ ಎಲ್ಲ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿನ ಸಾರ್ವಜನಿಕರು ತಮ್ಮ ಮೊಬೈಲ್ ಫೋನ್‌ಗಳನ್ನು ಕಳೆದುಕೊಂಡ ಬಗ್ಗೆ ಇ–ಲಾಸ್ಟ್ ಮತ್ತು ಸಿಇಐಆರ್ ಪೋರ್ಟನ್‌ಲಲಿ ತಮ್ಮ ದೂರುಗಳನ್ನು ದಾಖಲಿಸಿದ್ದರು. ಸದರಿ ಮೊಬೈಲ್‌ಗಳ ಪತ್ತೆ ಕುರಿತು ನಗರದ ಎಲ್ಲ ಸಹಾಯಕ ಪೊಲೀಸ್ ಆಯುಕ್ತರ ನೇತೃತ್ವದಲ್ಲಿ ನಗರ ವ್ಯಾಪ್ತಿಯ ಎಲ್ಲ ಪೊಲೀಸ್ ಠಾಣೆಗಳ ಪೊಲೀಸ್ ಇನ್ಸಪೆಕ್ಟರ್ ಅವರ ಮುಂದಾಳತ್ವದಲ್ಲಿ ಎಲ್ಲ ಪೊಲೀಸ್ ಠಾಣೆಗಳಲ್ಲಿನ ಸಿಇಐಆರ್ ಪೋರ್ಟಲ್ ಕರ್ತವ್ಯ ನಿರ್ವಹಿಸುವ ತಾಂತ್ರಿಕ ಸಿಬ್ಬಂದಿಗಳ ಕಾರ್ಯಕ್ಷಮತೆಯಿಂದ ಹಾಗೂ ಸೆನ್ ಪೊಲೀಸ್ ಠಾಣೆಯ ಅಧಿಕಾರಿ ಸಿಬ್ಬಂದಿಯವರ ಸಹಾಯದಿಂದ ಇಲ್ಲಿಯವರೆಗೆ ಒಟ್ಟು 1648 ಮೊಬೈಲ್ ಫೋನ್‌ಗಳನ್ನು ವಾರಸುದಾರರಿಗೆ ಹಿಂದಿರುಗಿಸಲಾಗಿದೆ ಎಂದು ಅವರು ಹೇಳಿದರು.

## ಲಿಂಗ ಪತ್ತೆ ಹಚ್ಚುವುದು ಶಿಕ್ಷಾರ್ಹ ಅಪರಾಧ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜಿಲ್ಲೆಯಲ್ಲಿ ಹೆಣ್ಣು ಭ್ರೂಣ ಹತ್ಯೆ ತಡೆಗಟ್ಟಲು ಮತ್ತು ಲಿಂಗಾನುಪಾತವನ್ನು ಸುಧಾರಿಸಲು ಆರೋಗ್ಯ ಇಲಾಖೆಯು ಕಟ್ಟುನಿಟ್ಟಿನ ಕ್ರಮಕ್ಕೆ ಮುಂದಾಗಿದ್ದು, ಲಿಂಗ ನಿರ್ಣಯ ಮತ್ತು ಲಿಂಗ–ಆಯ್ಕೆ ಪದ್ಧತಿಗಳನ್ನು ನಿಷೇಧಿಸುವ ಗರ್ಭಧಾರಣೆ ಪೂರ್ವ ಮತ್ತು ಪ್ರಸವ ಪೂರ್ವ ಲಿಂಗ ಪತ್ತೆ ಹಚ್ಚುವ ಕಾರ್ಯದಲ್ಲಿ ತೊಡಗುವುದು ಅಥವಾ ಅಂತಹ ಚಟುವಟಿಕೆಗಳಿಗೆ ಬೆಂಬಲ ನೀಡುವುದು ಕಾನೂನುಬಾಹಿರವಾಗಿದ್ದು, ಇದನ್ನು ಉಲ್ಲಂಘಿಸುವವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಶರಣಬಸಪ್ಪ ಕ್ಯಾತನಾಳ ಎಚ್ಚರಿಸಿದ್ದಾರೆ.

ನಾಗರಿಕರು ಇಂತಹ ಕಾನೂನುಬಾಹಿರ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬಾರದು ಅಥವಾ ಬೆಂಬಲಿಸಬಾರದು ಎಂದು ಮನವಿ ಮಾಡಿರುವ ಅವರು, ಲಿಂಗ ಪತ್ತೆ ಮಾಡುವ ಕೇಂದ್ರಗಳ ಬಗ್ಗೆ ಅಥವಾ ಚಟುವಟಿಕೆಗಳ ಬಗ್ಗೆ ಖಚಿತ ಮಾಹಿತಿ ನೀಡುವಂತೆ ಸಾರ್ವಜನಿಕರಿಗೆ ಕರೆ ನೀಡಿದ್ದಾರೆ.

ಪಿ.ಸಿ.ಪಿ.ಎನ್.ಡಿ.ಟಿ ಕಾಯ್ದೆ–1994ರ ನಿಬಂಧನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಮತ್ತು ಕಾಯ್ದೆಯ ಯಾವುದೇ ಉಲ್ಲಂಘನೆಯು ಜೈಲು ಶಿಕ್ಷೆ, ದಂಡ ವಿಧಿಸುವ ಮತ್ತು ವೈದ್ಯಕೀಯ ಸಂಸ್ಥೆಯ ಪರವಾನಿಗೆ ರದ್ದುಗೊಳಿಸುವ ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ



ಶಂಕಿತ ಉಲ್ಲಂಘನೆಗಳನ್ನು ವರದಿ ಮಾಡಲು ಸಾರ್ವಜನಿಕರನ್ನು ಪ್ರೋತ್ಸಾಹಿಸಲಾಗುತ್ತದೆ. ವಿಶ್ವಾಸಾರ್ಹ ಮಾಹಿತಿಯನ್ನು ಒದಗಿಸುವ ಮಾಹಿತಿದಾರರಿಗೆ ಬಹುಮಾನ ನೀಡಲಾಗುವುದು ಮತ್ತು ಅವರ ಗುರುತನ್ನು ಕಟ್ಟುನಿಟ್ಟಾಗಿ ಗೌಪ್ಯವಾಗಿಡಲಾಗುತ್ತದೆ ಎಂದಿದ್ದಾರೆ.

"ಅವಳನ್ನು ಬದುಕಲು ಬಿಡಿ" ಸಮಾಜವನ್ನು ಅಭಿವೃದ್ಧಿ ಹೊಂದಲು ಬಿಡಿ ಎಂಬ ಜಾಗೃತಿ ಅಭಿಯಾನಗಳು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಜಾಗೃತಿ ಮೂಡಿಸುವ ಕಾರ್ಯಕ್ರಮಗಳು ನಿರಂತರವಾಗಿ ಮಾಡಲಾಗುತ್ತಿದೆ. ಜೊತೆಗೆ ಆರೋಗ್ಯ ಸಂಸ್ಥೆಗಳ ಮೇಲೆ ನಿಗಾ ಸಹ ಇಡಲಾಗಿದೆ ಎಂದಿದ್ದಾರೆ.

## ರಾಜ್ಯ ಪತ್ರಕರ್ತರ ಅರ್ಥಪೂರ್ಣ ಸಮ್ಮೇಳನ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಬಸವನ ನಾಡು, ಸೂಫಿ ಸಂತರ ಬೀಡು ಬೀದರನಲ್ಲಿ ಎರಡು ದಿನಗಳು ನಡೆದ 40ನೇ ರಾಜ್ಯ ಪತ್ರಕರ್ತರ ಸಮ್ಮೇಳನವನ್ನು ಅಚ್ಚುಕಟ್ಟಾಗಿ ಸಂಘಟಿಸಿ, ಯಶಸ್ವಿಗೊಳಿಸಿದ ಹಿನ್ನೆಲೆಯಲ್ಲಿ ಸಮ್ಮೇಳನದ ಯಶಸ್ವಿಗಾಗಿ ಶ್ರಮಿಸಿದವರು ಮತ್ತು ಸಹಕರಿಸಿದವರನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಸನ್ಮಾನಿಸಿದರು.

ಬೀದರ ಎಸ್‌ಪಿ ಗೆಸ್ಟ್ ಹೌಸ್ ಆವರಣದಲ್ಲಿ ನಡೆದ ಸಮಾರಂಭದಲ್ಲಿ ವಸತಿ, ಆಹಾರ, ಸಾರಿಗೆ, ಪ್ರಚಾರ, ಮೆರವಣಿಗೆ, ನೋಂದಣಿ, ಅತಿಥಿ ಸತ್ಕಾರ, ಮಹಿಳಾ ಸಮಿತಿಯಿಂದ ಹಿಡಿದು ವಸ್ತು ಪ್ರದರ್ಶನ, ಛಾಯಾಚಿತ್ರ ಪ್ರದರ್ಶನ ಸಮಿತಿ ತನಕ ಎಲ್ಲಾ ಉಪ ಸಮಿತಿಗಳ ಪ್ರಧಾನ ಸಂಚಾಲಕರು, ಸಂಚಾಲಕರು, ಸಹ ಸಂಚಾಲಕರ ಸೇವೆಯನ್ನು ಸ್ಮರಿಸಿ ಸನ್ಮಾನಿಸಲಾಯಿತು. ಸಮ್ಮೇಳನಕ್ಕೆ ಒಂದೊಂದು ಜವಬ್ದಾರಿ ವಹಿಸಿಕೊಂಡು ಸಹಕಾರ ನೀಡಿದವರನ್ನು ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಕರ್ನಾಟಕ




ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಕಡಿಮೆ ಅವಧಿಯಲ್ಲಿ ಸಮ್ಮೇಳನವನ್ನು ವ್ಯವಸ್ಥಿತವಾಗಿ ಸಂಘಟಿಸಿದ ಬೀದರ್ ಜಿಲ್ಲಾ ಘಟಕ, ಬೀದರ್ ಪತ್ರಕರ್ತರು, ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲಾಡಳಿತ ಮತ್ತು ನಾಗರೀಕರಿಗೆ ಧನ್ಯವಾದ ತಿಳಿಸಿದರು.

ಸಮ್ಮೇಳನದ ಮೆರವಣಿಗೆಯಿಂದ ಹಿಡಿದು ಊಟೋಪಚಾರ ತನಕ, ಸಮ್ಮೇಳನದ ಉದ್ಘಾಟನೆಯಿಂದ ಹಿಡಿದು ಹಲವು ವಿಚಾರ ಗೋಷ್ಠಿಗಳು, ಪ್ರಶಸ್ತಿ ಪ್ರದಾನ ಸಮಾರಂಭ ಮತ್ತು ಸಮಾರೋಪ ತನಕ ಎಲ್ಲವೂ ವ್ಯವಸ್ಥಿತವಾಗಿ, ಅರ್ಥಪೂರ್ಣವಾಗಿ ನಡೆದಿವೆ ಎಂದು ತಿಳಿಸಿದರು.

ಸಮ್ಮೇಳನ ಎನ್ನುವುದು ಒಂದು ಮೆರಗು, ಸೊಬಗು. ಸಮ್ಮೇಳನದ ಆತಿಥ್ಯ ವಹಿಸಿಕೊಂಡಿದ್ದ ಬೀದರ್ ಘಟಕ ಸಮ್ಮೇಳನದ ದಿಬ್ಬಣವನ್ನು ಅಚ್ಚುಕಟ್ಟಾಗಿ, ಹಬ್ಬದ ರೂಪದಲ್ಲಿ ಸ್ವಾಗತಿಸಿ, ಸತ್ಕರಿಸಿ ಬೀಳ್ಕೊಟ್ಟಿರುವುದಕ್ಕೆ ಕೆಯುಡಬ್ಲೂಜೆ ಅಭಾರಿಯಾಗಿದೆ ಎಂದು ತಗಡೂರು ಹೇಳಿದರು.

ಬೀದರ್ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ, ಸಚಿವ ರಹೀಂ ಖಾನ್ ಸೇರಿದಂತೆ ಎಲ್ಲಾ ಶಾಸಕರು ಮತ್ತು ಜನಪ್ರತಿನಿಧಿಗಳು ಮತ್ತು ಜಿಲ್ಲಾಧ್ಯಕ್ಷ ಆನಂದ ದೇವಪ್ಪ ಸೇರಿದಂತೆ ಎಲ್ಲ ತಾಲೂಕು ಸಂಘಗಳಿಗೂ ರಾಜ್ಯ ಸಂಘ ಅಭಾರಿಯಾಗಿದೆ ಎಂದು ಶಿವಾನಂದ್ ಹೇಳಿದರು.

## ಸಿಎಂ ಬದಲಾವಣೆ ಗೊಂದಲವನ್ನು ಹೈಕಮಾಂಡ್ ಬೇಗ ಬಗೆಹರಿಸಲಿ: ಕೆ.ಎನ್.ರಾಜಣ್ಣ

# ಸಂಪಾದಕೀಯ




ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕರು
ಮೊ: 9845028349


## ತ್ಯಾಗ, ಸಹನೆ ಮತ್ತು ಸೇವೆಯ ಪ್ರತಿರೂಪ ಮಲ್ಲಮ್ಮ ತಾಯಿ



ಹೇಮರೆಡ್ಡಿ ಮಲ್ಲಮ್ಮ ಅವರು ಕನ್ನಡ ನಾಡಿನ ಮಹಾನ್ ಶಿವಶರಣೆಯರಲ್ಲಿ ಒಬ್ಬರು. ಭಕ್ತಿ, ತ್ಯಾಗ, ಸಹನೆ ಮತ್ತು ಸೇವೆಯ ಪ್ರತಿರೂಪವಾಗಿ ಮಲ್ಲಮ್ಮ ತಾಯಿ ಜನಮಾನಸದಲ್ಲಿ ಅಚ್ಚಳಿಯದ ಸ್ಥಾನ ಪಡೆದಿದ್ದಾರೆ. ಅವರು ಬಸವಣ್ಣನವರ ಕಾಲಘಟ್ಟದ ಶರಣರ ಪರಂಪರೆಯಲ್ಲಿ ಬೆಳಗಿದ ಮಹಾನ್ ಮಹಿಳೆ ಎಂದು ಗೌರವಿಸಲ್ಪಡುತ್ತಾರೆ. ಮಲ್ಲಮ್ಮ ತಾಯಿ ಶ್ರೀಮಂತ ಕುಟುಂಬದಲ್ಲಿ ಜನಿಸಿದರೂ ಸರಳ ಜೀವನವನ್ನು ಅನುಸರಿಸುತ್ತಿದ್ದರು. ಬಾಲ್ಯದಿಂದಲೇ ಶಿವಭಕ್ತಿ, ದಾನಧರ್ಮ ಮತ್ತು ಪರೋಪಕಾರದ ಗುಣಗಳನ್ನು ಬೆಳೆಸಿಕೊಂಡಿದ್ದರು. ವಿವಾಹವಾದ ನಂತರವೂ ಅವರು ಕುಟುಂಬ ಜೀವನದ ಜೊತೆಗೆ ಸಮಾಜ ಸೇವೆ ಮತ್ತು ಭಕ್ತಿಮಾರ್ಗವನ್ನು ಮುಂದುವರಿಸಿದರು. ಮಲ್ಲಮ್ಮ ತಾಯಿಯ ಜೀವನದಲ್ಲಿ ಅನೇಕ ಸಂಕಷ್ಟಗಳು ಬಂದರೂ, ಅವರು ಧೈರ್ಯ ಮತ್ತು ಭಕ್ತಿಯಿಂದ ಎಲ್ಲವನ್ನೂ ಎದುರಿಸಿದರು. ಗಂಡನಿಂದ ಬಂದ ಕಷ್ಟಗಳು, ಕುಟುಂಬದ ಸಮಸ್ಯೆಗಳು ಮತ್ತು ಸಮಾಜದ ಪರೀಕ್ಷೆಗಳ ನಡುವೆಯೂ ಅವರು ಶಿವನ ಮೇಲಿನ ನಂಬಿಕೆಯನ್ನು ಕಳೆದುಕೊಳ್ಳಲಿಲ್ಲ. "ಸಹನೆ ಮತ್ತು ಸತ್ಯವೇ ಜೀವನದ ಶಕ್ತಿ" ಎಂಬ ಸಂದೇಶವನ್ನು ತಮ್ಮ ಜೀವನದ ಮೂಲಕ ಸಾರಿದರು. ಅವರ ಜೀವನದಲ್ಲಿ ನಡೆದ ಅನೇಕ ಅದ್ಭುತ ಘಟನೆಗಳು ಜನಪದ ಕಥೆಗಳಾಗಿ ಪ್ರಸಿದ್ಧಿಯಾಗಿವೆ. ಭಕ್ತಿಯಿಂದ ದೇವರನ್ನು ಆರಾಧಿಸಿದರೆ ಜೀವನದಲ್ಲಿ ಶಾಂತಿ ಮತ್ತು ಯಶಸ್ಸು ಸಿಗುತ್ತದೆ ಎಂಬ ನಂಬಿಕೆಯನ್ನು ಅವರು ಜನರಲ್ಲಿ ಮೂಡಿಸಿದರು. ಬಡವರ ನೆರವಿಗೆ ಧಾವಿಸುವುದು, ಅನ್ನದಾನ ಮಾಡುವುದು ಮತ್ತು ಎಲ್ಲರನ್ನು ಸಮಾನವಾಗಿ ಕಾಣುವುದು ಮಲ್ಲಮ್ಮ ತಾಯಿಯ ಮಹತ್ವದ ಗುಣಗಳಾಗಿದ್ದವು. ಇಂದಿಗೂ ಹೇಮರೆಡ್ಡಿ ಮಲ್ಲಮ್ಮ ಅವರ ಹೆಸರು ಕರ್ನಾಟಕದಲ್ಲಿ ಭಕ್ತಿ ಮತ್ತು ತ್ಯಾಗದ ಪ್ರತೀಕವಾಗಿ ಉಳಿದಿದೆ. ಅವರ ಜೀವನ ಚರಿತ್ರೆ ಮಹಿಳೆಯರಿಗೆ ಧೈರ್ಯ, ಸಹನೆ ಮತ್ತು ಆತ್ಮವಿಶ್ವಾಸದ ಪ್ರೇರಣೆಯಾಗಿದೆ. ಶಿವಭಕ್ತಿಯ ಮೂಲಕ ಮಾನವ ಜೀವನವನ್ನು ಶ್ರೇಷ್ಠಗೊಳಿಸಬಹುದು ಎಂಬ ಸಂದೇಶವನ್ನು ಮಲ್ಲಮ್ಮ ತಾಯಿ ಜಗತ್ತಿಗೆ ನೀಡಿದ್ದಾರೆ.

## ಕೇಳುಕಥೆ ಸಾಹಿತ್ಯ ಸಂಭ್ರಮ 9ಕ್ಕೆ

**ಕಲಬುರಗಿ:** ಕೇಂದ್ರ ಸಾಹಿತ್ಯ ಅಕಾಡೆಮಿ ಮತ್ತು ಕಲಬುರಗಿ ಆಕಾಶವಾಣಿ ಸಹಯೋಗದಲ್ಲಿ ಇದೇ ಮೇ 9 (ಶನಿವಾರ ):ಬೆಳಿಗ್ಗೆ 11 ಗಂಟೆಗೆ ಆಕಾಶವಾಣಿ ಕಲಬುರ್ಗಿ ಕೇಂದ್ರದ ಸ್ಟುಡಿಯೋದಲ್ಲಿ 'ಕೇಳುಕಥೆ' ಸಾಹಿತ್ಯ ಕಾರ್ಯಕ್ರಮ ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ಸಾಹಿತಿಗಳಾದ ಎಚ್. ಟಿ. ಪೋತೆ, ಸಿದ್ಧರಾಮ ಹೊನ್ಕಲ್, ಸಂಧ್ಯಾ ಹೊನಗುಂಟಿಕರ ಮತ್ತು ಮಹಾಂತೇಶ್ ನವಲಕಲ್ ಅವರುಗಳು 'ಕೇಳುಕಥೆ' ಪ್ರಸ್ತುತಪಡಿಸಲಿದ್ದಾರೆ. ಸಾಹಿತ್ಯ ಅಕಾಡೆಮಿಯ ಸಾಮಾನ್ಯ ಸಲಹಾ ಸಮಿತಿ ಸದಸ್ಯ ಬಸವರಾಜ ಸಾದರ ಪ್ರಾಸ್ತಾವಿಕ ಹಾಗೂ ಸಮಾರೋಪ ನುಡಿಗಳನ್ನಾಡಲಿದ್ದಾರೆ.

ಆಕಾಶವಾಣಿ ಕಲಬುರಗಿ ಕೇಂದ್ರದ ತಾಂತ್ರಿಕ ವಿಭಾಗದ ಮುಖ್ಯಸ್ಥ ಬಿ. ಗೋಪಾಲ ನಾಯಕ ಸ್ವಾಗತಿಸಲಿದ್ದು, ಕಾರ್ಯಕ್ರಮ ಮುಖ್ಯಸ್ಥ ಬಿ. ಸಿದ್ದಣ್ಣ ವಂದಿಸಲಿದ್ದಾರೆ. ಸಾಹಿತ್ಯಾಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಕೋರಲಾಗಿದೆ.

## ಕಂದಾಯ ಇಲಾಖೆಯ ಪ್ರಗತಿ ಪರ್ವ ಕಾರ್ಯಕ್ರಮ

**ಕಲಬುರಗಿ:** ಕಂದಾಯ ಇಲಾಖೆಯ ಪ್ರಗತಿ ಪರ್ವ ವಿವಿಧ ಯೋಜನೆಗಳ ಸೌಲಭ್ಯ ವಿತರಣಾ ಕಾರ್ಯಕ್ರಮ ಇದೇ ಮೇ 8 ರಂದು ಶುಕ್ರವಾರ ಮಧ್ಯಾಹ್ನ 3 ಗಂಟೆಗೆ ಕಲಬುರಗಿ ನಗರದ ಡಾ.ಎಸ್. ಎಮ್. ಪಂಡಿತ್ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ.

ರಾಜ್ಯಸಭೆಯ ವಿರೋಧ ಪಕ್ಷದ ನಾಯಕರಾದ ಡಾ. ಮಲ್ಲಿಕಾರ್ಜುನ ಖರ್ಗೆ ಅವರು ಘನ ಉಪಸ್ಥಿತಿಯಲ್ಲಿ ನಡೆಯುವ ಕಾರ್ಯಕ್ರಮವನ್ನು ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು.

ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವ ಡಾ. ಶರಣಪ್ರಕಾಶ ಪಾಟೀಲ, ಕಂದಾಯ ಸಚಿವ ಕೃಷ್ಣ ಭೈರೇಗೌಡ, ಆಳಂದ ಶಾಸಕರು ಹಾಗೂ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಬಿ.ಆರ್. ಪಾಟೀಲ, ಕರ್ನಾಟಕ ರೇಷ್ಮೆ ಉದ್ದಿಮೆಗಳ ನಿಗಮದ ನಿಯಮಿತದ ಅಧ್ಯಕ್ಷರು ಹಾಗೂ ಕಲಬುರಗಿ ಉತ್ತರ ಶಾಸಕಿ ಕನೀಜ್ ಫಾತೀಮಾ, ಜೇವರ್ಗಿ ಶಾಸಕರು ಮತ್ತು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯಸಿಂಗ್ ಅವರು ಆಗಮಿಸುವರು.

ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ ಅವರ ಅಧ್ಯಕ್ಷತೆಯಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಜಿಲ್ಲೆಯ ಸಂಸದರು, ವಿಧಾನಸಭೆ ಮತ್ತು ವಿಧಾನ ಪರಿಷತ್ ಶಾಸಕರು, ನಿಗಮ ಮಂಡಳಿಗಳ ಅಧ್ಯಕ್ಷರು ಹಾಗೂ ಇತರೆ ಚುನಾಯಿತ ಜನಪ್ರತಿನಿಧಿಗಳು, ಕಂದಾಯ ಇಲಾಖೆಯ ಹಿರಿಯ ಅಧಿಕಾರಿಗಳು ಭಾಗವಹಿಸಲಿದ್ದಾರೆ.

ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಸಹಾಯಕ ಆಯುಕ್ತರಾದ ಸಾಹಿತ್ಯ ಎಮ್. ಆಲದಕಟ್ಟಿ, ಪ್ರಭು ರೆಡ್ಡಿ, ಜಿಲ್ಲೆಯ ಸಮಸ್ತ ಕಂದಾಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಭಾಗವಹಿಸುವರು.

# ನಿಸ್ವಾರ್ಥ ಸಮಾಜ ಸೇವಕರೇ ಲೋಕಮಿತ್ರರು

• ಮಲ್ಲಮ್ಮ ನುಡಿ ವಾರ್ತೆ ಬೀದರ



ನಿಸ್ವಾರ್ಥ ಸಮಾಜ ಸೇವೆ. ಜನರೊಂದಿಗೆ ಉತ್ತಮ ಒಡನಾಟ ಹೊಂದಿದವರೇ ನಿಜವಾದ ಲೋಕಮಿತ್ರರು. ಅಂತಹ ಸುಂದರ ವ್ಯಕ್ತಿತ್ವ ಹೊಂದಿರುವ ನಿವೃತ್ತ ಪ್ರಾಚಾರ್ಯರಾದ ವೆಂಕಟರಾವ ಖರಾತ್ ಅವರ ಜೀವನ ಮತ್ತು ಸಾಧನೆ ಕುರಿತು ರಚಿಸಿದ ಲೋಕಮಿತ್ರ ಅಭಿನಂದನಾ ಗ್ರಂಥ ವಿದ್ಯಾರ್ಥಿಗಳಿಗೆ ಮಾರ್ಗದರ್ಶಿಯಾಗಿದೆ ಎಂದು ಬೀದರ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಿ.ಎಸ್. ಬಿರಾದಾರ ತಿಳಿಸಿದರು.

ಕರ್ನಾಟಕ ಸಾಹಿತ್ಯ ಸಂಘ ಹಾಗೂ ಶ್ರದ್ಧಾ ಪ್ರಕಾಶನ ಕಲಬುರಗಿ ಅವರ ಸಂಯುಕ್ತಾಶ್ರಯದಲ್ಲಿ ಸಂಘದ ಸಾಂಸ್ಕೃತಿಕ ಭವನದಲ್ಲಿ ಜರುಗಿದ ನಿವೃತ್ತ ಪ್ರಾಚಾರ್ಯರಾದ ವೆಂಕಟರಾವ ಖರಾತ್ ಅವರ ಲೋಕಮಿತ್ರ ಅಭಿನಂದನಾ ಗ್ರಂಥ ಬಿಡುಗಡೆಗೊಳಿಸಿ, ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಲೋಕಮಿತ್ರ ಎಂದರೆ ಅವರಿಗೆ ಯಾರೂ ಶತ್ರುಗಳೇ ಇಲ್ಲ ಎಂಬರ್ಥವಾಗಿದೆ. ತಮ್ಮ ಕರ್ತವ್ಯದ ಸಂದರ್ಭದಲ್ಲಿ ಸದಾ ಹಸನ್ಮುಖರಾಗಿ, ಸರಳ ಸಜ್ಜನಿಕೆಯಿಂದ ಸೇವೆ ಸಲ್ಲಿಸಿ, ವಿದ್ಯಾರ್ಥಿಗಳ ಅತ್ಯುತ್ತಮ ಗುರುವಾಗಿ ಹೊರಹೊಮ್ಮಿದ ವೆಂಕಟರಾವ ಖರಾತ್ ಅವರು ತಮಗೆ ನೀಡಿದ ಕಾರ್ಯ ನಿಷ್ಠೆಯಿಂದ, ಶ್ರದ್ಧೆಯಿಂದ ಮಾಡಿದ್ದಾರೆ. ಬೀದರ ವಿಶ್ವವಿದ್ಯಾಲಯದ ಬೆಳವಣಿಗೆಗೆ ಅವರ ಅದಮ್ಯ ಸೇವೆ ಮರೆಯಲಸಾಧ್ಯವಾದುದು. ದಕ್ಷ ಮತ್ತು ಪ್ರಾಮಾಣಿಕತೆಗೆ ಖರಾತ್ ಅವರ ನಿವೃತ್ತಿ ಜೀವನ ಸುಖಮಯವಾಗಿರಲಿ ಎಂದರು.

ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಸಾಹಿತ್ಯ ಸಂಘದ ಅಧ್ಯಕ್ಷ ಪ್ರೊ. ಜಗನ್ನಾಥ ಹೆಬ್ಬಾಳೆ ಮಾತನಾಡಿ ಲೋಕಮಿತ್ರ ಎಂಬ ಅಭಿನಂದನಾ ಗ್ರಂಥಕ್ಕೆ ಹೇಳಿ ಮಾಡಿಸಿದಂತೆ ಅರ್ಹರಾಗಿದ್ದಾರೆ ವೆಂಕಟರಾವ ಖರಾತ ಅವರು. ಈ ಗ್ರಂಥವನ್ನು ಪ್ರಧಾನ ಸಂಪಾದಕರಾಗಿ ಡಾ. ಸಂಜೀವಕುಮಾರ ತಾಂದಳೆ, ಸಂಪಾದಕರಾಗಿ ಡಾ. ಅಶೋಕ ಕೋರೆ, ವ್ಯವಸ್ಥಾಪಕ ಸಂಚಾಲಕರಾಗಿ ಪ್ರೊ. ಸಚ್ಚಿದಾನಂದ ರುಮ್ಮಾ ರಚಿಸಿದ್ದಾರೆ. ಇದರಲ್ಲಿ 16 ಗಣ್ಯರು, ಪೂಜ್ಯರ ಶುಭ ಹಾರೈಕೆಗಳಿವೆ. ವಿಮರ್ಶಾತ್ಮಕ ಸಂಶೋಧನಾ ಲೇಖನಗಳಿವೆ. ವಿದ್ಯಾರ್ಥಿಗಳ ವ್ಯಕ್ತಿತ್ವ ರೂಪಿಸುವ ಅದ್ಭುತ ಲೇಖನಗಳು ಮತ್ತು ಖರಾತ್ ಅವರ ಉತ್ತಮ ವ್ಯಕ್ತಿತ್ವ ಈ ಕೃತಿಯಲ್ಲಿ ಬಿಂಬಿತವಾಗಿದೆ. ಇದು ಅವರ ಮಾದರಿ ಜೀವನಕ್ಕೆ ಹಿಡಿದ ಕೈಗನ್ನಡಿಯಾಗಿದೆ ಎಂದರು.

ಕರ್ನಾಟಕ ಜಾನಪದ ಪರಿಷತ್ತಿನ ಕಾರ್ಯದರ್ಶಿ ಡಾ. ಸುನಿತಾ ಕೂಡ್ಲಿಕರ್ ವಿಶೇಷ ಉಪನ್ಯಾಸ ನೀಡುತ್ತ ನಿವೃತ್ತ ಪ್ರಾಚಾರ್ಯರಾದ ವೆಂಕಟರಾವ ಖರಾತ್ ಅವರು ಶಿಸ್ತಿನ ಸಿಪಾಯಿಯಾಗಿ, ವಿದ್ಯಾರ್ಥಿಗಳ ನೆಚ್ಚಿನ ಗುರುವಾಗಿ ಸಮಾಜಶಾಸ್ತ್ರ ವಿಷಯ ಬೋಧನೆ ಮಾಡಿದ್ದಾರೆ. ಹುಮನಾಬಾದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸೇವೆ ಸಲ್ಲಿಸಿ ನಿವೃತ್ತಿ ಪಡೆದುಕೊಂಡ ಅವರ ಮೇಲೆ ಬಸವ, ಬುದ್ಧ ಮತ್ತು ಶಿವಾಜಿ ಮಹಾರಾಜರ ಪ್ರಭಾವ ಸಾಕಷ್ಟಾಗಿದೆ. ಸಹನಶೀಲತೆ, ಗರ್ವರಹಿತ ಬದುಕು ರೂಪಿಸಿಕೊಂಡ ಅವರು ಸ್ನೇಹಜೀವಿ, ಬಿಚ್ಚುಮನಸ್ಸಿನ ಸಹೃದಯವಂತರಾಗಿದ್ದಾರೆ. ಈ ಲೋಕಮಿತ್ರ ಅಭಿನಂದನಾ ಗ್ರಂಥ ಅವರ ಹೆಜ್ಜೆಗುರುತಾಗಿದೆ ಎಂದರು. ಅಭಿನಂದನೆಗೆ ಪಾತ್ರರಾದ ವೆಂಕಟರಾವ ಖರಾತ್ ಮಾತನಾಡಿ ಜೀವನದಲ್ಲಿ ನಾನು ಅಪಾರ ವಿದ್ಯಾರ್ಥಿ ಬಳಗ ಹಾಗೂ ಸ್ನೇಹ ಬಳಗ ಸಂಪಾದಿಸಿದ್ದೇನೆ ಎಂದು ನುಡಿದರು.

ಲೋಕಮಿತ್ರ ಅಭಿನಂದನಾ ಗ್ರಂಥದ ಪ್ರಧಾನ ಸಂಪಾದಕ ಡಾ.ಸಂಜೀವಕುಮಾರ ತಾಂದಳೆ, ಸಂಪಾದಕ ಡಾ. ಅಶೋಕ ಕೋರೆ,ಸ.ಪ್ರ.ದ.ಮಹಿಳಾ ಕಾಲೇಜಿನ ಪ್ರಾಂಶುಪಾಲರಾದ ಪ್ರೊ.ಮನೋಜಕುಮಾರ ಕುಲಕರ್ಣಿ ಮಾತನಾಡಿದರು.ಇದೇ ವೇಳೆ ಲೋಕಮಿತ್ರ ಅಭಿನಂದನಾ ಗ್ರಂಥ ಬಿಡುಗಡೆ ಮಾಡಲಾಯಿತು. ಜೊತೆಗೆ ಬಿಎ ನಾಲ್ಕನೇ ಸೆಮಿಸ್ಟರ್‌ನ ಸಾಮಾನ್ಯ ಕನ್ನಡ ಪಠ್ಯಪುಸ್ತಕವಾದ ವ್ಯಕ್ತಿತ್ವ ವಿಕಸನ ಗ್ರಂಥವನ್ನು ಡಾ. ರೂಟಾ ತಾಳಮಡಗಿ ಮತ್ತು ಡಾ. ಅಶೋಕ ಕೋರೆ ರಚಿಸಿದ್ದಾರೆ. ಈ ಪುಸ್ತಕ ಕೂಡ ಬಿಡುಗಡೆ ಮಾಡಲಾಯಿತು.

ಘೋಡಂಪಳ್ಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಡಾ.ಸಂತೋಷಕುಮಾರ ಬಡಿಗೇರ ಸ್ವಾಗತಿಸಿದರು.ಮನ್ನಳ್ಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹ ಪ್ರಾಧ್ಯಾಪಕಿ ಡಾ.ಜೈಶೀಲಾ ಬಿ. ನಿರೂಪಿಸಿದರು.ವೈಜಿನಾಥ ಪಾಟೀಲ ವಂದಿಸಿದರು.

## ಧರ್ಮಸ್ಥಳ ಸಂಸ್ಥೆಯಿಂದ ರೂ.1.50 ಲಕ್ಷ ಅನುದಾನ

• ಮಲ್ಲಮ್ಮ ನುಡಿ ವಾರ್ತೆ ಬೀದರ



ತಾಲೂಕಿನ ಕಂಗನಕೋಟ ಗ್ರಾಮದ ಶ್ರೀ ಸಿದ್ದೇಶ್ವರ ದೇವಾಲಯದ ಜೀರ್ಣೋದ್ಧಾರ ಕಾಮಗಾರಿಗಾಗಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ರೂ.1 ಲಕ್ಷ 50 ಸಾವಿರ ಅನುದಾನ ಮಂಜೂರಾಗಿದ್ದು, ಅದರ ಚೆಕ್ ವಿತರಣೆ ಕಾರ್ಯಕ್ರಮ ನಡೆಯಿತು.


ಬೀದರ ಜಿಲ್ಲೆಯ ಧರ್ಮಸ್ಥಳ ಯೋಜನಾ ನಿರ್ದೇಶಕರಾದ ಶ್ರೀ ಮುರಳಿಧರ ಎಚ್.ಎಲ್. ಅವರು ದೇವಾಲಯದ ಟ್ರಸ್ಟ್ ಅಧ್ಯಕ್ಷರಾದ ಕೇದಾರನಾಥ ಶಂಭು ಅವರಿಗೆ ದೇವಾಲಯದ ಸಮಿತಿಯ ಸಮ್ಮುಖದಲ್ಲಿ ಚೆಕ್ ಹಸ್ತಾಂತರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಕೇದಾರನಾಥ ಶಂಭು ಅವರು, ಗ್ರಾಮೀಣ ಭಾಗಗಳಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಸಂಸ್ಥೆ ಕೈಗೊಂಡಿರುವ ಜನಸಹಕಾರಿ ಹಾಗೂ ಧಾರ್ಮಿಕ ಸೇವಾ ಕಾರ್ಯಕ್ರಮಗಳ ಬಗ್ಗೆ ಸಂತೋಷ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಶಾಂತಕುಮಾರ ಶಂಭು, ಗಣಪತಿ ಶಂಭು, ಪಾರ್ವತಿ ಭುಳ್ಳ, ಓಂಕಾರ ಪಾಟೀಲ, ಕಂಟೆಪ್ಪ ಓತಿ, ಸಂತೋಷ ಓತಿ, ಪ್ರೇಮಲತಾ ಉಪ್ಪೆ, ನಿರ್ಮಲ ಶಂಭು, ಅರವಿಂದ ಬುಳ್ಳಾ ಸೇರಿದಂತೆ ಸಿದ್ದೇಶ್ವರ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಉಪಸ್ಥಿತರಿದ್ದರು.

ಅಭಿ ಶಂಭು ಸ್ವಾಗತಿಸಿದರು. ನಿಜಗುಣ ಶಂಭು ಕಾರ್ಯಕ್ರಮ ನಿರೂಪಿಸಿದರು. ಕೊನೆಯಲ್ಲಿ ಸೋಮನಾಥ ಶಂಭು ವಂದನಾರ್ಪಣೆ ಸಲ್ಲಿಸಿದರು.

## ಮಾನವನ ದುರಾಸೆಗಾಗಿ ಬತ್ತಿಹೋದ ರಾಮತೀರ್ಥ

• ಮಲ್ಲಮ್ಮ ನುಡಿ ವಾರ್ತೆ ಗೋಕರ್ಣ



ತಾಪಮಾನ ಏರಿಕೆ ಹಾಗೂ ಅನಧಿಕೃತ ಬೋರ್‌ವೆಲ್‌ನಿಂದಾಗಿ ಕಳೆದ ಕೆಲವು ವರ್ಷಗಳಿಂದ ಎಪ್ರಿಲ್, ಮೇ ತಿಂಗಳಿನಲ್ಲಿಯೇ ಇಲ್ಲಿಯ ರಾಮತೀರ್ಥ ಬತ್ತಿಹೋಗುತ್ತದೆ. ಇದರಿಂದಾಗಿ ರಾಮಮಂದಿರಕ್ಕೆ ಬರುವ ಭಕ್ತರು ಇಲ್ಲಿ ಸ್ನಾನ ಮಾಡಲಾಗದೇ ಹಿಂದಿರುಗುವಂತಾಗಿದೆ.

ಮುಖ್ಯ ಕಡಲತೀರಕ್ಕೆ ಹೊಂದಿಕೊಂಡಿರುವ ರಾಮ ಮಂದಿರದ ಎದುರಿನಲ್ಲಿಯೇ ರಾಮತೀರ್ಥವಿದೆ. ಇಲ್ಲಿ ನಂದಿಯ ಬಾಯಲ್ಲಿಯೂ ಕುಡ ನೀರು ಹರಿಯುತ್ತಿತ್ತು. ಆದರೆ 2 ವರ್ಷಗಳ ಹಿಂದೆ ನಡೆದ ಗುಡ್ಡ ಕುಸಿತದಲ್ಲಿ ಅದು ಕೂಡ ಹಾನಿಗೆ ಒಳಗಾಗಿದೆ. ಇಷ್ಟಾದರೂ ನಂದಿಯ ಬಾಯಲ್ಲಿ ಸಣ್ಣ ಪ್ರಮಾಣದ ಝರಿ ಬರುತ್ತಿದೆ. ಆದರೆ ರಾಮತೀರ್ಥದ ಮೂರು ನೀರು ಹರಿಯುವ ದ್ವಾರವು ಬತ್ತಿ ಹೋಗಿದೆ.

ಸಮುದ್ರ ಸ್ನಾನ ಮಾಡಿಕೊಂಡು ಬಂದ ನಂತರ ಭಕ್ತರು ಇಲ್ಲಿಯ ಸಿಹಿ ನೀರಿನಲ್ಲಿ ಸ್ನಾನ ಮಾಡುತ್ತಿದ್ದರು. ಇನ್ನು ಕೆಲವರು ರಾಮತೀರ್ಥದಲ್ಲಿಯೇ ಸ್ನಾನ ಮಾಡಲೆಂದು ಬರುತ್ತಿದ್ದರು. ಹಾಗೇ ಸುತ್ತಮುತ್ತಲಿನ ಅಂಗಡಿಯವರು, ಮನೆಯವರು ಕೂಡ ರಾಮತೀರ್ಥದ ನೀರನ್ನು ತೆಗೆದುಕೊಂಡು ಹೋಗುತ್ತಿದ್ದರು. ಆದರೆ ಈಗ ರಾಮತೀರ್ಥ ಸಂಪೂರ್ಣವಾಗಿ ಬತ್ತಿದ್ದರಿಂದಾಗಿ ಸಹಜವಾಗಿಯೇ ಇಲ್ಲಿಂದ ನೀರನ್ನು ಸಾಗಿಸಲು ಸಾಧ್ಯವಾಗುತ್ತಿಲ್ಲ.

# ದಸರಾ ಖ್ಯಾತಿಯ ಅರ್ಜುನ ಆನೆಯ ಸ್ಮಾರಕ ಲೋಕಾರ್ಪಣೆ!

• ಮಲ್ಲಮ್ಮ ನುಡಿ ವಾರ್ತೆ ಹಾಸನ



ದಸರಾ ಸಂದರ್ಭದಲ್ಲಿ ನಾಡದೇವತೆ ಚಾಮುಂಡೇಶ್ವರಿ ದೇವಿಯನ್ನು ಹೊತ್ತು ಮೆರೆಸುತ್ತಿದ್ದ ಹೆಮ್ಮೆಯ ಅರ್ಜುನ ಆನೆಯ ಸ್ಮಾರಕವನ್ನು ಹಾಸನ ಜಿಲ್ಲೆಯ ಸಕಲೇಶಪುರ ತಾಲ್ಲೂಕಿನ ದಬ್ಬಳ್ಳಿಕಟ್ಟೆ ಮೀಸಲು ಅರಣ್ಯ ಪ್ರದೇಶದಲ್ಲಿ ಇಂದು ಅರಣ್ಯ ಸಚಿವ ಈಶ್ವರ್ ಖಂಡ್ರೆ ಲೋಕರ್ಪಣೆಗೊಳಿಸಿದರು.

ಡಿ.4 ರ 2023 ರಂದು ಕಾಡಾನೆ ಸೆರೆ ಹಿಡಿಯುವ ಕಾರ್ಯಾಚರಣೆ ವೇಳೆ ಮದಗಜದೊಂದಿಗೆ ಕಾದಾಡಿ ವೀರ ಮರಣವನ್ನಪ್ಪಿದ್ದ ಅರ್ಜುನ ಆನೆಯ ಮೃತದೇಹವನ್ನು ಅದೇ ಸ್ಥಳದಲ್ಲಿ ಅಂತ್ಯ ಕ್ರಿಯೆ ನೆರವೇರಿಸಲಾಗಿತ್ತು.

ಎರಡೂವರೆ. ವರ್ಷಗಳ ನಂತರ ಇಂದು ಅರ್ಜುನ ಆನೆಯ ಸ್ಮಾರಕ ಲೋಕರ್ಪನೆಗೊಂಡಿದ್ದು ಈ ವೇಳೆ ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಭೈರೇಗೌಡ, ಸಂಸದ ಶ್ರೇಯಸ್‌ಪಟೇಲ್, ಶಾಸಕರುಗಳಾದ ಕೆ.ಎಂ.ಶಿವಲಿಂಗೇಗೌಡ, ಸಿಮೆಂಟ್‌ಮಂಜು, ಸಿಸಿಎಫ್ ಏಡುಕುಂಡಲ, ಡಿಸಿಎಫ್ ಸೌರಭ್‌ಕುಮಾರ್, ಡಿಸಿ ಕೆ.ಎಸ್.ಲತಾಕುಮಾರಿ, ಎಸ್ಪಿ ಶುಭನ್ವಿತಾ ಸೇರಿದಂತೆ ಇತರರು ಭಾಗವಹಿಸಿದ್ದರು.

ಸುಮಾರು 10 ಅಡಿ ಎತ್ತರ, 13 ಅಡಿ ಉದ್ದದ ಅರ್ಜುನ ಆನೆಯ ಸ್ಮಾರಕವನ್ನು ಮೂಲಸ್ವರೂಪದಂತೆ ಪ್ರತಿಕೃತಿ ನಿರ್ಮಿಸಲಾಗಿದೆ, ಇಂದಿನಿಂದ ಈ ಪ್ರದೇಶ ಪ್ರವಾಸಿ ತಾಣವಾಗಿ ಮಾರ್ಪಟ್ಟಿದ್ದು ಪ್ರವಾಸಿಗರಿಗೆ ಅನುಕೂಲಕರ ವಾತಾವರಣ ನಿರ್ಮಿಸುವಲ್ಲಿ ಅರಣ್ಯ ಇಲಾಖೆ ಯಶಸ್ವಿಯಾಗಿದೆ.

ಇದರ ಜೊತೆಗೆ ಅರ್ಜುನ ಆನೆಯು ಪಾಲ್ಗೊಂಡ ಹುಲಿ, ಕಾಡಾನೆ, ಚಿರತೆ ಸೇರಿದಂತೆ ಇತರ ವನ್ಯ ಪ್ರಾಣಿಗಳ ಯಶಸ್ವಿ ಸೆರೆ ಕಾರ್ಯಾಚರಣೆಯ ಭಾವಚಿತ್ರಗಳನ್ನು ಪ್ರದರ್ಶಿಸುವ ಮೂಲಕ ಅರ್ಜುನನ ಸಾಧನೆ ಹಾಗೂ ಪರಾಕ್ರಮದ ಸಾರವನ್ನು ವರ್ಣಿಸಲಾಗಿದೆ.

# ಜೇನುಕುರುಬ ಮೂಲನಿವಾಸಿಗಳ ವಿಶೇಷ ಸಭೆ





• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ಉಪವಿಭಾಗದ ಜೇನುಕುರುಬ ಮೂಲನಿವಾಸಿಗಳ ಪ್ರಮುಖರು ಎಚ್ ಡಿ ಕೋಟೆ ತಾಲೂಕಿನ ಪ್ರಭಾನಗರದ ಶನಿದೇವರ ಗುಡಿಯ ಆವರಣದಲ್ಲಿ ಮುಖಂಡ ರವಿಯವರ ಅಧ್ಯಕ್ಷತೆ ಯಲ್ಲಿ ವೀರನ ಹೊಸಹಳ್ಳಿವಲಯದ ಮಂಟಳ್ಳಿ ಕಾಡು ಮೇಟಿಕುಪ್ಪೆ ಕಾಡುಗಳಿಗೆ ಹೊಂದಿಕೊಂಡಂತಿರುವ ಜೇನುಕುರುಬರ ಅರಣ್ಯ ಹಕ್ಕುಗಳನ್ನು ಕುರಿತು ಚರ್ಚಿಸಿದರು.

ಹಾಡಿ ಅರಣ್ಯ ಹಕ್ಕು ಸಮಿತಿಗಳಿಂದ ವೈಯಕ್ತಿಕ ಅರಣ್ಯ ಭೂಮಿ ಹಕ್ಕು, ಸಾಮೂಹಿಕ ಅರಣ್ಯ ಹಕ್ಕು,ಕಾಡಿನ ಕಿರುದಿನಸಿ ಹಕ್ಕು ಹಾಗುಕಾಡಿನ ನೆಲಸುಗಳ ಮೇಲಿನ ಹಕ್ಕುಮಾನ್ಯ ಮಾಡುವ ಕುರಿತಾಗಿ ಎಸ್ ಡಿ ಎಲ್ ಸಿ ಅಥವಾ ಡಿ ಎಲ್ ಸಿ ಗಳು ನ್ಯಾಯಬದ್ದ ತೀರ್ಮಾನ ತೆಗೆದುಕೊಳ್ಳದ ಕಾರಣ ಹಕ್ಕು ಮಾನ್ಯ ಮಾಡುವಲ್ಲಿ ಅನ್ಯಾಯವಾಗಿದೆ. ಕೊರೋನ ಸಂದರ್ಭದಲ್ಲಿ ಒಂದೇ ದಿನ ಎಸ್ ಡಿ ಎಲ್ ಸಿ ಅಧ್ಯಕ್ಷರು ಎ ಸಿ ಯವರು 1300 ಪ್ರಸ್ತಾವನೆ ತಿರಸ್ಕರಿಸಿದ್ದಾರೆ.

ಸುಪ್ರೀಂ ಕೋರ್ಟ್ ಆದೇಶದ ಅನ್ವಯ ತಿರಸ್ಕರಿದ ಈ ಎಲ್ಲಾ ಪ್ರಸ್ತಾವನೆಗಳನ್ನು ಮರು ಪರಿಶೀಲನೆ ಮಾಡಬೇಕಿತ್ತು, ಮಾಡಿಲ್ಲ. ಅರಣ್ಯ ನೆಲಸುಗಳ ಮೇಲಿನ ಜೇನುಕುರುಬ ಮೂಲನಿವಾಸಿಗಳ ಹಕ್ಕನ್ನು ಮಾನ್ಯ ಮಾಡುವ ಪ್ರಕ್ರಿಯೆಗೆ ಸರಿಯಾಗಿ ಚಾಲನೆಯನ್ನೇ ನೀಡಿಲ್ಲಾ ಎಂದು ಸಭೆ ಆರೋಪಿಸಿದೆ.

ಈ ಸಂಬಂಧ ಡಿ ಸಿ ಹಾಗು ಮುಖ್ಯ ಕಾರ್ಯದರ್ಶಿಗಳಿಗೆ ಹಾಡಿ ಅರಣ್ಯ ಹಕ್ಕು ಸಮಿತಿಗಳಿಂದ ಪತ್ರ ಬರೆಯಲು ನಿರ್ಧರಿಸಿದ್ದಾರೆ. ಕಾಡಲ್ಲಿನ ಶ್ರದ್ದಾ ಕೇಂದ್ರಗಳಿಗೆ, ಸ್ಮಶಾನಗಳಿಗೆ, ಗಿಡಮೂಲಿಕೆ ಔಷಧಿಗೆ, ಕಿರುದಿನಿಸಿ ಸಂಗ್ರಹಕ್ಕೆ ಮಂಟಳ್ಳಿ ಕಾಡು, ಚಾಮಳ್ಳಿ ಕಾಡು,ಚೌಡಮ್ಮ ಕಾಡು ಮೇಟಿಕುಪ್ಪೆ ಕಾಡುಗಳಿಗೆ ಅರಣ್ಯ ಇಲಾಖೆ ರಕ್ಷಣೆ ಪಡೆದು ಹೋಗುತ್ತಿರಬೇಕು.

ಅಲ್ಲದೆ ಮೋದಲೇ ವನ್ಯ ಜೀವಿ ಹೆಸರಲ್ಲಿ ಕಾಡಿಂದ ಹೊರಹಾಕಿರುವ ಕುಟುಂಬಗಳನ್ನು ಹೈಕೋರ್ಟ್ ಆದೇಶದಂತೆ ಪುನರ್ ವಸತಿ ಕಾರ್ಯ ಕೂಡಲೇ ಸರ್ಕಾರ ಅರಣ್ಯ ಕೈಗೊಳ್ಳಲು ಸಭೆ ಆಗ್ರಹಿಸಿ, ಜೇನುಕುರುಬರೇ ಹೆಚ್ಚು ಹೊರಹಕಲ್ಪಟ್ಟಿರುವುದರಿಂದ ಪಿ ವಿ ಟಿ ಜಿ ಯೋಜನೆಗೆ ಜೋಡಿಸಿ ಕೂಡಲೇ ಪುನರ್ವಸತಿ ಕೈಗೊಳ್ಳಲು ಸಭೆ ಆಗ್ರಿಹಿಸಿದೆ. ಅಲ್ಲದೆ ಕುಡಿವ ನೀರಿನ ಸಮಸ್ಯೆ ಬಗೆಹರಿಸುವುದು, ಹಾಡಿಗಳನ್ನು ಕಂದಾಯ ಗ್ರಾಮ ಗಳಾಗಿ ಘೋಷಣೆ ಮಾಡುವುದು, ಅನುಭವಿಸುತ್ತಿರುವವರಿಗೆ ಅವರ ಭೂಮಿಗೆ ಹಕ್ಕು ಪತ್ರಕ್ಕೆ ಒತ್ತಾಯಿಸುವುದು, ಸಾಗುವಳಿ ಸಿಕ್ಕಿರುವ ಭೂಮಿಗೆ ಪೋಡು ಮಾಡಿಸುವುದು, ಮೂಲನಿವಾಸಿ ಜೇನುಕರುಬರಿಗೆ ಒಲಮೀಸಲು ಘೋಷಣೆಗೆ ಒತ್ತಾಯಿಸುವುದು ಮುಂತಾದ ಪ್ರಮುಖ ತೀರ್ಮಾನ ಸಭೆ ಕೈಗೊಂಡಿದೆ. ಜೇನುಕುರುಬ ಮೂಲನಿವಾಸಿಗಳ ಬವಣೆ ಕೇಳಲು ಹಿಂದೆ ಇದ್ದಂತೆ ಪ್ರತ್ಯೇಕ ಕಛೇರಿ ತೆರೆಯುವಂತೆ ಸಭೆ ಸರ್ಕಾರ ವನ್ನು ಆಗ್ರಹಿಸಿದೆ. ಸಂಘದ ಮಾಜಿ ಅಧ್ಯಕ್ಷ ಭೀಮನಹಳ್ಳಿ ರಾಜಣ್ಣ, ಬಸವರಾಜನ ಕಟ್ಟೆ ಜೆ ಟಿ ರಾಜಪ್ಪ ಮಾತನಾಡಿದರು. ಡೀಡ್ ಶ್ರೀಕಾಂತ್ ಅರಣ್ಯ ಹಕ್ಕು ಕಾಯ್ದೆ, ಪೆಸಾ ಕಾಯ್ದೆ, ಹೈ ಕೋರ್ಟ್ ಆದೇಶದ ಮಹತ್ವ, ಒಳ ಮೀಸಲಾತಿಯ ಮಹತ್ವ ಕುರಿತು ಸಭೆಗೆ ಮಾಹಿತಿ ನೀಡಿದರು.

ಈ ಅರಣ್ಯಗಳ ಭಾಗದ 10 ಹಾಡಿಗಳಿಂದ 35 ಜೇನುಕುರುಬ ಪ್ರತಿನಿಧಿಗಳು ಪಾಲ್ಗೊಂಡಿದ್ದರು. ಹಾಡಿಹಾಡಿ ಗಳಲ್ಲಿ ಸಭೆ ನಡೆಸಿ ಜೇನುಕುರುಬ ಮೂಲನಿವಾಸಿಗಳ ಹಕ್ಕು ರಕ್ಷಣೆಗೆ ಹೋರಾಟ ಬಲ ಪಡಿಸಲು ಸಭೆ ತೀರ್ಮಾನ ಕೈಗೊಂಡಿದೆ.

# ಬಿರುಗಾಳಿ ಹೊಡೆತಕ್ಕೆ ಸಿಲುಕಿ ಮನೆಗೆ ಹಾನಿ

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು



ಕಳೆದ ದಿನಗಳ ಹಿಂದೆ ಬಾರಿ ಬೀಸಿದ ಬಿರುಗಾಳಿಗೆ ವದ್ಲಿಮನಗನಹಳ್ಳಿ ಗ್ರಾಮದ ನಾಯಕ ಸಮಾಜದ ಬುದ್ಧಿಮಾಂದ್ಯತೆಯ

ಪುಟ್ಟಸ್ವಾಮಿನಾಯಕ ಹಾಗೂ ಪತ್ನಿ ಪುಷ್ಪಲತಾ ರವರು ತಮ್ಮ ಜಮೀನಿನಲ್ಲಿ ನಿರ್ಮಾಣ ಮಾಡಿದ್ದು ವಾಸದ ಮನೆಯು ಬಿರುಗಾಳಿ ಹೊಡೆತಕ್ಕೆ ಸಿಲುಕಿ ಮನೆಗೆ ಹಾಕಿದ್ದ ಮೇಲ್ಚಾವಣಿಯ ಶೀಟುಗಳು ಹಾಗೂ ಕಬ್ಬಿಣದ ಸಾಮಾಗ್ರಿಗಳು ಸಂಪೂರ್ಣ ಹಾನಿಯಾಗಿ ಬಡ ಕುಟುಂಬ ಸಂಕಷ್ಟಕ್ಕೀಡಾಗಿದ್ದು, ಮಾಜಿ ಶಾಸಕ ಸ್ನೇಹಜೀವಿ ಎಚ್ ಪಿ ಮಂಜುನಾಥ್ ರವರು ಭೇಟಿ ನೀಡಿ ಮನೆ ಹಾನಿಯಾಗಿರುವುದನ್ನು ಪರಿಶೀಲನೆ ನಡೆಸಿ

ಸಂಕಷ್ಟದ್ದಲ್ಲಿರುವ ಕುಟುಂಬಕ್ಕೆ ಆತ್ಮಸ್ಥೈರ್ಯ ತುಂಬಿ ವೈಯಕ್ತಿಕ ಸಹಾಯ ಮಾಡಿ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಬೇಕೆಂದು ಸಲಹೆ ಸೂಚನೆ ನೀಡಿದ್ದಾರೆ ಈ ಸಂದರ್ಭದಲ್ಲಿ ಗ್ರಾಮಸ್ಥರು ಹಾಜರಿ ಹಾಜರಿದ್ದರು

# ಪಕ್ಷದ ನಿರ್ಧಾರಕ್ಕೆ ಭದ್ದ, ಸೂಕ್ತ ಸ್ಥಾನಮಾನ ನೀಡುವ ಭರವಸೆ :ಶಾಮಿದ್ ಮನಿಯಾರ್

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ




ಮೇ 7 ಕಳೆದ ಎಂಟು ವರ್ಷಗಳಿಂದ ಗಂಗಾವತಿ ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾಗಿ ಒಂದು ನಗರಸಭೆ ಚುನಾವಣೆಯನ್ನು ಎದುರಿಸಿ ನಗರಸಭೆಯ ಆಡಳಿತವನ್ನು ಕಾಂಗ್ರೆಸ್ ತೆಕ್ಕೆಗೆ ಬರುವಂತೆ ಶ್ರಮಿಸಿದ್ದೇನೆ, ಡಿಜಿಟಲ್ ಮೆಂಬರ್‌ಶಿಪ್ ನಲ್ಲಿ ನಮ್ಮ ಕ್ಷೇತ್ರ ರಾಜ್ಯದಲ್ಲಿ ನಂಬರ್ ಒನ್ ಆಗಿದ್ದು ಆ ಸಮಯದಲ್ಲಿ ರಾಜ್ಯಾಧ್ಯಕ್ಷರಾದ ಡಿಕೆ ಶಿವಕುಮಾರ್ ರವರು ನಮ್ಮಿಂದ ವೇದಿಕೆಯ ಜ್ಯೋತಿ ಬೆಳಗಿಸಿ ಸನ್ಮಾನಿಸಿದ್ದನ್ನು ಮನಿಯಾರ್ ಸ್ಮರಿಸಿದರು, ಪಕ್ಷ ನೀಡಿದ್ದ ಜವಾಬ್ದಾರಿಯನ್ನು ನಿಷ್ಠೆಯಿಂದ ಸೇವೆ ಮಾಡಿದ್ದು ಮುಂದೆ ಪಕ್ಷದಲ್ಲಿ ಜಿಲ್ಲಾ ಮಟ್ಟದ ಅಥವಾ ರಾಜ್ಯ ಮಟ್ಟದಲ್ಲಿ ಸ್ಥಾನಮಾನ ನೀಡುವ ಭರವಸೆಯನ್ನು ಪಕ್ಷದ ಮುಖಂಡರು ನೀಡಿದ್ದಾರೆ ಎಂದು ಶಾಮಿದ್ ಮನಿಯಾರ್ ಹೇಳಿದರು,

ನಗರದ ಯುವ ಕಾಂಗ್ರೆಸ್ ಕಛೇರಿಯಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಮನಿಯಾರ್, ನಾಗರಾಜ ನಂದಾಪುರ ರವರನ್ನು ನಾವೇ ನಗರ ಪ್ರದೇಶ ಪ್ರಾಧಿಕಾರದ ಅಧ್ಯಕ್ಷರನ್ನಾಗಿ ನೇಮಕ ಮಾಡಿದ್ದೆವು, ನಂತರದಲ್ಲಿ ಅವರು ನಮ್ಮ ಜೊತೆ ಸಂಪರ್ಕದಲ್ಲಿ ಇದ್ದಿಲ್ಲ, ಆದರೆ ರಾಜ್ಯ ನಾಯಕರ ತೀರ್ಮಾನಕ್ಕೆ ನಾವು ಬದ್ಧರಾಗಿದ್ದು ಪಕ್ಷ ನೀಡಿರುವ ಜವಾಬ್ದಾರಿಯನ್ನು ಅವರು ಚನ್ನಾಗಿ ನಿಭಾಯಿಸಿಲಿ ಎಂದು ಆಶಿಸುತ್ತೇನೆ, ನನಗೆ ನಿನ್ನೆಯ ದಿನ ಪಕ್ಷದ ಮುಖಂಡರು ಕರೆಮಾಡಿ ಸೂಕ್ತ ಸ್ಥಾನಮಾನದ ಭರವಸೆ ನೀಡಿದ್ದು, ಪಕ್ಷ ನೀಡುವ ಯಾವುದೇ ಜವಾಬ್ದಾರಿಯನ್ನು ನಿಭಾಯಿಸಲು ಸಿದ್ದನಿದ್ದೇನೆ ಎಂದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ರಾಜ್ಯ ಯುವ ಕಾರ್ಯದರ್ಶಿ ಆಶಿಫ್ ಹುಸೇನ್, ನಗರಸಭೆ ಮಾಜಿ ಸದಸ್ಯ ಸೋಮನಾಥ ಭಂಡಾರಿ, ಮುಖಂಡರಾದ ಮಹೆಬೂಬ. ಮತ್ತು ಇತರರು ಇದ್ದರು.

# ಯೋಗದಿಂದ ರೋಗ ಮುಕ್ತರಾಗಿ: ಶಂಕರಗೌಡ

• ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ



ಯೋಗಕ್ಕೆ ಜಗತ್ತೆ ಮನ್ನಣೆ ನೀಡಿದೆ. ಯೋಗದಿಂದ ರೋಗ ಮುಕ್ತರಾಗಿ ಬದುಕುವ ಜೀವನ ಶೈಲಿಯನ್ನು ಪ್ರತಿಯೊಬ್ಬರು ಅಳವಡಿಸಿಕೊಳ್ಳಬೇಕು ಎಂದು ನೀಲಗಂಗಾ ಎಜ್ಯೂಕೇಷನಲ್ ಟ್ರಸ್ಟ್ ಕಾರ್ಯದರ್ಶಿ ಶಂಕರಗೌಡ ಹೇಳಿದರು.

ತಾಲೂಕಿನ ಯರಬಾಗ ಗ್ರಾಮದಲ್ಲಿ ನೀಲಗಂಗಾ ಆಯುರ್ವೇದಿಕ್ ಮೆಡಿಕಲ್ ಕಾಲೇಜ್ ಆಶ್ರಯದಲ್ಲಿ ನಡೆದ ಯೋಗ ಮತ್ತು ಧ್ಯಾನ ತರಬೇತಿ ಶಿಬಿರದಲ್ಲಿ ಮಾತನಾಡಿ

ಇಂದು ಪ್ರತಿಯೊಬ್ಬರು ಸ್ವಸ್ಥ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕಿದೆ. ಸ್ವಸ್ಥ ಆರೋಗ್ಯದಿಂದ ಮಾತ್ರ ಸ್ವಸ್ಥ ಸಮಾಜ ನಿರ್ಮಾಣ ಸಾಧ್ಯವಾಗಲಿದೆ. ಈ ನಿಟ್ಟಿನಲ್ಲಿ ನಾವೆಲ್ಲ ಸ್ವಸ್ಥ ಆರೋಗ್ಯದಿಂದ ಸ್ವಸ್ಥ ಸಮಾಜ ನಿರ್ಮಿಸಿ, ಸದೃಢ ಭಾರತ ಕಟ್ಟಲು ಮುಂದಾಗೋಣ ಎಂದರು. ಟ್ರಸ್ಟ್ ಅಧ್ಯಕ್ಷರಾದ ಡಾ. ಅನೀತಾ ಮಹಾಜನ್ ಮಾತನಾಡಿ ಆಯುರ್ವೇದ ವಿದ್ಯಾರ್ಥಿಗಳು ಯೋಗ ಹಾಗೂ ಧ್ಯಾನದ ಬಗ್ಗೆ ಆಸಕ್ತಿ ಹೊಂದಬೇಕು. ಧ್ಯಾನದ ಮೂಲಕ ಸಮಾಧಾನ ಕಂಡುಕೊಳ್ಳಬೇಕು, ಮಾನಸಿಕ ಹಾಗೂ ದೈಹಿಕ ಆರೋಗ್ಯಕ್ಕೆ ಧ್ಯಾನವು ಕೂಡ ಮಹತ್ವದ್ದಾಗಿದೆ ಎಂದರು. ಚಿಕ್ಕಬಳ್ಳಾಪುರ ಓಂಕಾರ ಜ್ಯೋತಿ ಮಠದ ಪೂಜ್ಯ ಕಾಳಿತನಯ ಸ್ವಾಮೀಜಿ ಸಾನಿಧ್ಯ ವಹಿಸಿ, ಆಶೀರ್ವಚನ ನೀಡಿ, ಸಂಗೀತ ಭಜನೆ ಕಾರ್ಯಕ್ರಮ ನೀಡಿದರು. ಈ ವೇಳೆ ಸಾಂಸ್ಕೃತಿಕ ಚಿಂತಕ ಸುಬ್ರಹ್ಮಣ್ಯ ಭಾರತಿ ಕೊಣಾಲೆ, ಮೀನಾಕ್ಷಿ ಸಿ.ಎಮ್, ಯೋಗಾಚಾರ್ಯ ಚಂದ್ರಶೇಖರ ಮಡಿವಾಳರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಬಿಎಸ್ವೈ ಅಭಿಮಾನೋತ್ಸವದಲ್ಲಿ ಭಾಗವಹಿಸಿ: ಶಾಸಕ ಪ್ರಭು ಚವ್ಹಾಣ

• ಮಲ್ಲಮ್ಮ ನುಡಿ ವಾರ್ತೆ ಔರಾದ



ಮೇ.7:ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್ ಯಡಿಯೂರಪ್ಪ ಅವರ 50 ವರ್ಷಗಳ ಸಾರ್ಥಕ ರಾಜಕೀಯ ಬದುಕಿನ ಗೌರವಾರ್ಥವಾಗಿ ಮೇ 9ರಂದು ಚಿತ್ರದುರ್ಗದಲ್ಲಿ ಏರ್ಪಡಿಸಲಾಗಿರುವ ಅಭಿಮಾನೋತ್ಸವ ಕಾರ್ಯಕ್ರಮದಲ್ಲಿ ಅಭಿಮಾನಿಗಳು, ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಮಾಜಿ ಸಚಿವರು, ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಮನವಿ ಮಾಡಿದ್ದಾರೆ

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಬಿ.ಎಸ್ ಯಡಿಯೂರಪ್ಪ ಅವರು ನಾಡು ಕಂಡ ಅಪರೂಪದ ರಾಜಕಾರಣಿ. ಸಮಾಜಮುಖಿ ಹೋರಾಟಗಳ ಮುಖಾಂತರ ರಾಜಕೀಯಕ್ಕೆ ಬಂದ ಇವರು, ಮುಖ್ಯಮಂತ್ರಿಯಾಗಿ ಸಲ್ಲಿಸಿದ ಸೇವೆ ಅವಿಸ್ಮರಣೀಯ. ದಕ್ಷಿಣ ಭಾರತದಲ್ಲಿ ಮೊದಲ ಬಾರಿಗೆ ಬಿಜೆಪಿ ಸರ್ಕಾರವನ್ನು ಅಧಿಕಾರಕ್ಕೆ ತಂದು ಪಕ್ಷ ಸಂಘಟನೆಯನ್ನು ರಾಜ್ಯದ ಮೂಲೆ ಮೂಲೆಗೂ ವಿಸ್ತರಿಸಿದ ಶ್ರೇಯಸ್ಸು ಅವರದ್ದಾಗಿದೆ ಎಂದು ಬಣ್ಣಿಸಿದ್ದಾರೆ.

ರೈತರಿಗಾಗಿ ಪ್ರತ್ಯೇಕ ಕೃಷಿ ಬಜೆಟ್ ಮಂಡಿಸಿದ ದೇಶದ ಮೊದಲ ಮುಖ್ಯಮಂತ್ರಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ರೈತರಿಗೆ ಶೂನ್ಯ ಬಡ್ಡಿದರ ಸಾಲ, ನೀರಾವರಿ ಯೋಜನೆಗಳಿಗೆ ವೇಗ, ಬೆಳೆ ಪರಿಹಾರ ವಿತರಣೆಯಲ್ಲಿ ಪಾರದರ್ಶಕತೆ ಸೇರಿದಂತೆ ಹಲವು ರೈತಪರ ಕಾರ್ಯಕ್ರಮಗಳನ್ನು ಜಾರಿಗೊಳಿಸಿದ್ದರು. ಬಡ ಹೆಣ್ಣು ಮಕ್ಕಳಿಗಾಗಿ ಭಾಗ್ಯಲಕ್ಷ್ಮೀ ಯೋಜನೆ, ಸೈಕಲ್ ವಿತರಣೆಯಂತಹ ಅನೇಕ ಜನಪರ ಯೋಜನೆಗಳ ಮೂಲಕ ಜನಮನ ಗೆದ್ದಿದ್ದಾರೆ ಎಂದು ತಿಳಿಸಿದ್ದಾರೆ.

ಔರಾದ(ಬಿ) ವಿಧಾನಸಭಾ ಕ್ಷೇತ್ರದ ಅಭಿವೃದ್ಧಿಗೂ ಯಡಿಯೂರಪ್ಪ ಅವರು ವಿಶೇಷ ಕೊಡುಗೆ ನೀಡಿದ್ದಾರೆ. ಸಾಕಷ್ಟು ಬಾರಿ ಕ್ಷೇತ್ರಕ್ಕೆ ಭೇಟಿ ನೀಡಿರುವ ಅವರು, ನಾನು ಸಚಿವನಾಗಿದ್ದಾಗ ಕ್ಷೇತ್ರದ ಅಭಿವೃದ್ಧಿಗೆ ಸಲ್ಲಿಸಿದ ಎಲ್ಲ ಬೇಡಿಕೆಗಳನ್ನು ಈಡೇರಿಸಿದ್ದಾರೆ. ರಸ್ತೆ, ಕುಡಿಯುವ ನೀರಿನ ಯೋಜನೆಗಳು, ಶಾಲಾ-ಕಾಲೇಜುಗಳ ಅಭಿವೃದ್ಧಿ, ಗ್ರಾಮೀಣ ಮೂಲಸೌಕರ್ಯ ಹಾಗೂ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ವಿಶೇಷ ಅನುದಾನ ಮಂಜೂರು ಮಾಡುವ ಮೂಲಕ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ನೆರವಾಗಿದ್ದಾರೆ ಎಂದು ತಿಳಿಸಿದ್ದಾರೆಅವರ ಸಾರ್ಥಕ 50 ವರ್ಷಗಳ ರಾಜಕೀಯ ಜೀವನ ಪೂರೈಸಿದ ಹಿನ್ನೆಲೆ ಗೌರವಾರ್ಥವಾಗಿ ನಡೆಯಲಿರುವ ಕಾರ್ಯಕ್ರಮದಲ್ಲಿ ತಾವು ಕೂಡ ಭಾಗವಹಿಸುತ್ತಿದ್ದು, ಔರಾದ(ಬಿ) ಕ್ಷೇತ್ರದಿಂದ ಸಾವಿರಾರು ಜನ ಅಭಿಮಾನಿಗಳು, ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಲಿದ್ದಾರೆ. ಲಕ್ಷಾಂತರ ಕಾರ್ಯಕರ್ತರ ಸಮ್ಮುಖದಲ್ಲಿ ಐತಿಹಾಸಿಕವಾಗಿ ಕಾರ್ಯಕ್ರಮ ನಡೆಯಲಿದ್ದು, ಯಡಿಯೂರಪ್ಪ ಅಭಿಮಾನಿಗಳು, ಮುಖಂಡರು, ಪಕ್ಷದ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮದ ಯಶಸ್ಸಿಗೆ ಕೈಜೋಡಿಸಬೇಕೆಂದು ಶಾಸಕರು ಮನವಿ ಮಾಡಿದ್ದಾರೆ.

# ಎಸ್.ಕೆ.ಎನ್.ಜಿ ಕಾಲೇಜಿನಲ್ಲಿ ಯಶಸ್ವಿಯಾಗಿ ನಡೆದ ಆರೋಗ್ಯ ಜಾಗೃತಿ ಕಾರ್ಯಕ್ರಮ



• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ನಗರದ ಶ್ರೀ ಕೊಲ್ಲಿ ನಾಗೇಶ್ವರರಾವ್ ಗಂಗಯ್ಯ ಸರಕಾರಿ ಪ್ರಥಮ ದರ್ಜೆ ಕಾಲೇಜು, ಯುವ ರೆಡ್ ಕ್ರಾಸ್ ಘಟಕ ಹಾಗೂ ಆಂತರಿಕ ಗುಣಮಟ್ಟ ಭರವಸೆ ಕೋಶ ಇವುಗಳ ಸಹಯೋಗದಲ್ಲಿ ಬುಧವಾರ 'ಹದಿಹರೆಯದವರ ಆರೋಗ್ಯ - ಸಮಸ್ಯೆ ಮತ್ತು ಪರಿಹಾರ' ಕುರಿತ ಆರೋಗ್ಯ ಜಾಗೃತಿ ವಿಶೇಷ ಉಪನ್ಯಾಸ, ವೈದ್ಯರೊಂದಿಗೆ ಮುಖಾಮುಖಿ ಕಾರ್ಯಕ್ರಮ ಯಶಸ್ವಿಯಾಗಿ ಜರುಗಿತು. ಕಾಲೇಜಿನ ಡಾ. ಬಿ.ಆರ್ ಅಂಬೇಡ್ಕರ್ ಸಭಾಂಗಣದಲ್ಲಿ ನಡೆದ ಸಮಾರಂಭವನ್ನು ಆರಂಭದಲ್ಲಿ ಕಾಲೇಜು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷರಾದ ವೀರೇಶ ಬಲಕುಂದಿಯವರು ಸಸಿಗೆ ನೀರುಣಿಸುವ ಮೂಲಕ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು ಹದಿಹರೆಯದ ದಿನಗಳಲ್ಲಿ ಆರೋಗ್ಯ ಬಹಳ ಮುಖ್ಯ. ಆದ್ದರಿಂದ ವಿದ್ಯಾರ್ಥಿಗಳು ವಿದ್ಯಾರ್ಜನೆಯ ಜೊತೆಗೆ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು. ದೇಶದ ಭವಿಷ್ಯ ತರುಣ- ತರುಣಿಯರ ಮೇಲೆ ನಿಂತಿದೆ. ಸುಭದ್ರ ಸಮಾಜ, ರಾಷ್ಟ್ರ ನಿರ್ಮಾಣಕ್ಕಾಗಿ ಯುವಕ ಯುವತಿಯರು ಮಾನಸಿಕ

ಹಾಗೂ ದೈಹಿಕ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು, ಸಮಸ್ಯೆ ಸವಾಲುಗಳನ್ನು ಆತ್ಮ ವಿಶ್ವಾಸದಿಂದ ಎದುರಿಸಿ ಧೈರ್ಯದಿಂದ ಬದುಕು ಕಟ್ಟಿಕೊಳ್ಳಬೇಕೆಂದು ತಿಳಿಸಿದರು. ಕಾರ್ಯಕ್ರಮದ ವಿಶೇಷ ಉಪನ್ಯಾಸಕರಾಗಿದ್ದ ಬೆಂಗಳೂರು ಸೇಂಟ್ ಜಾನ್ಸ್ ಆಸ್ಪತ್ರೆಯ ತಜ್ಞ ವೈದ್ಯರಾದ ಡಾ. ಸುರೇಶ ಬಿರಾದಾರ, ಹಾಗೂ ಹಾಸನದ ಮಹಿಳಾ ವೈದ್ಯರಾದ ಡಾ. ಶಿಫಾಲಿಯವರು ವಿಶೇಷ ಉಪನ್ಯಾಸ ನೀಡಿ ಆರೋಗ್ಯ, ಶುಚಿತ್ವದ ಮಹತ್ವ, ವಹಿಸಬೇಕಾದ ಕಾಳಜಿ, ಯೋಗ, ನಡಿಗೆ, ಒಳ್ಳೆಯ ಆಹಾರ ಕ್ರಮ, ಸೇವಿಸುವ ಆಹಾರದಲ್ಲಿರಬೇಕಾದ ಪೌಷ್ಠಿಕತೆ , ದೇಹಾರೋಗ್ಯ ಕಾಪಾಡಿಕೊಳ್ಳುವದರಿಂದಾಗುವ ಪ್ರಯೋಜನಗಳು ಕುರಿತು ವಿದ್ಯಾರ್ಥಿಗಳಿಗೆ ಮಹತ್ವದ ಸಲಹೆಗಳನ್ನು ನೀಡಿದರು. ವಿದ್ಯಾರ್ಥಿಗಳ ಆರೋಗ್ಯ ಸಮಸ್ಯೆಗಳನ್ನು ಆಲಿಸಿ ಪರಿಹಾರ ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯರಾದ ಡಾ. ಶಿವರಾಜ ಗುರಿಕಾರ ಅವರು ಮಾತನಾಡಿ, ಆರೋಗ್ಯದ ಮಹತ್ವ ವಿದ್ಯಾರ್ಥಿ ಜೀವನದಲ್ಲಿ ವಹಿಸಬೇಕಾದ ಕಾಳಜಿ ಕುರಿತು ತಿಳಿಸಿದರು.

ಈ ನೂರಾರು ವಿದ್ಯಾರ್ಥಿಗಳು ವೈದ್ಯರೊಂದಿಗೆ ವಾರೋಗ್ಯ ಸಮಸ್ಯೆಗಳ ಬಗ್ಗೆ ಸಲಹೆ , ಚಿಕಿತ್ಸೆ ಪಡೆದರು. ಈ ವೇಳೆ ವಿಶೇಷ ಉಪನ್ಯಾಸ ನೀಡಿದ ಡಾ. ಸುರೇಶ ಬಿರಾದಾರ, ಡಾ. ಶಿಫಾಲಿ ಇವರಿಗೆ ಸನ್ಮಾನಿಸಲಾಯಿತು.

ವೇದಿಕೆಯಲ್ಲಿ ಆಂತರಿಕ ಗುಣಮಟ್ಟ ಕೋಶದ ಸಂಯೋಜಕರಾದ ಮಂಜುನಾಥ್ ಕೆ.ಎಚ್, ಸಖಿ ಮಹಿಳಾ ಘಟಕದ ಸಂಯೋಜ- ಕರಾದ ಮೆಹ್ತಾಬ್ ಅಂಜುಮ್, ಅತಿಥಿ ಉಪನ್ಯಾಸಕರ ಸಂಘದ ಅಧ್ಯಕ್ಷರಾದ ಪವನ ಗುಂಡೂರ ಉಪಸ್ಥಿತರಿದ್ದರು.

ಈ ವೇಳೆ ಯುವ ರೆಡ್ ಕ್ರಾಸ್ ಘಟಕದ ಸಂಯೋಜ- ಕರಾದ ಅಕ್ಕಿ ಮಾರುತಿಯವರು ಸಂಸ್ಕೃತ ಶ್ಲೋಕದ ಮೂಲಕ ಪ್ರಾರ್ಥಿಸಿ, ಪ್ರಸ್ತಾವಿಕವಾಗಿ ಮಾತನಾಡಿದರು. ಉಪನ್ಯಾಸಕರಾದ ಡಾ. ಬಸವರಾಜ್ ಎಸ್.ಗಡಾದ ಕಾರ್ಯಕ್ರಮ ನಿರೂಪಿಸಿದರು ಭೀಮಪ್ಪ ಸ್ವಾಗತಿಸಿದರು, ಡಾ. ಮೆಹ್ತಾಬ್ ಅಂಜುಮ್ ರವರು ವಂದಿಸಿದರು.

ಈ ವೇಳೆ ವಿವಿಧ ವಿಭಾಗದ ಬೋಧಕ ಸಿಬ್ಬಂಧಿ, ನೂರಾರು ವಿದ್ಯಾರ್ಥಿನಿಯರು ಈ ಸಮಾರಂಭದಲ್ಲಿ ಪಾಲ್ಗೊಂಡಿದ್ದರು.

# ಲಿಂಗ ಪತ್ತೆ ಹಚ್ಚುವುದು ಶಿಕ್ಷಾರ್ಹ ಅಪರಾಧ: ಜಿಲ್ಲಾ ಆರೋಗ್ಯ ಇಲಾಖೆ ಕಟ್ಟುನಿಟ್ಟಿನ ಎಚ್ಚರಿಕೆ

ಮೇ.7- ಕಲಬುರಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಜಿಲ್ಲೆಯಲ್ಲಿ ಹೆಣ್ಣು ಭ್ರೂಣ ಹತ್ಯೆ ತಡೆಗಟ್ಟಲು ಮತ್ತು ಲಿಂಗಾನುಪಾತವನ್ನು ಸುಧಾರಿಸಲು ಆರೋಗ್ಯ ಇಲಾಖೆಯು ಕಟ್ಟುನಿಟ್ಟಿನ ಕ್ರಮಕ್ಕೆ ಮುಂದಾಗಿದ್ದು, ಲಿಂಗ ನಿರ್ಣಯ ಮತ್ತು ಲಿಂಗ-ಆಯ್ಕೆ ಪದ್ಧತಿಗಳನ್ನು ನಿಷೇಧಿಸುವ ಗರ್ಭಧಾರಣೆಪೂರ್ವ ಮತ್ತು ಪ್ರಸವಪೂರ್ವ ಲಿಂಗ ಪತ್ತೆ ಹಚ್ಚುವ ಕಾರ್ಯದಲ್ಲಿ ತೊಡಗುವುದು ಅಥವಾ ಅಂತಹ ಚಟುವಟಿಕೆಗಳಿಗೆ ಬೆಂಬಲ ನೀಡುವುದು ಕಾನೂನುಬಾಹಿರವಾಗಿದ್ದು, ಇದನ್ನು ಉಲ್ಲಂಘಿಸುವವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಲಾಗುವುವುದು.

ನಾಗರಿಕರು ಅಂತಹ ಕಾನೂನುಬಾಹಿರ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬಾರದು ಅಥವಾ ಬೆಂಬಲಿಸಬಾರದು. ಲಿಂಗ ಪತ್ತೆ ಮಾಡುವ ಕೇಂದ್ರಗಳ ಬಗ್ಗೆ ಅಥವಾ ಚಟುವಟಿಕೆಗಳ ಬಗ್ಗೆ ಖಚಿತ ಮಾಹಿತಿ ನೀಡುವಂತೆ ಸಾರ್ವಜನಿಕರಿಗೆ ಕರೆ ನೀಡಿದ್ದಾರೆ. ರೋಗನಿರ್ಣಯ ತಂತ್ರಗಳ (ಪಿ.ಸಿ.ಪಿ.ಎನ್.ಡಿ.ಟಿ) ಕಾಯ್ದೆ, 1994 ರ ನಿಬಂಧನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಈ ಕಾಯ್ದೆಯ ಯಾವುದೇ ಉಲ್ಲಂಘನೆಯು ಜೈಲು ಶಿಕ್ಷೆ, ದಂಡ ಮತ್ತು ವೈದ್ಯಕೀಯ ಪರವಾನಗಿಗಳನ್ನು ರದ್ದುಗೊಳಿಸುವ ಮೂಲಕ ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ಶಂಕಿತ ಉಲ್ಲಂಘನೆಗಳನ್ನು ವರದಿ ಮಾಡಲು ಸಾರ್ವಜನಿಕರನ್ನು ಪ್ರೋತ್ಸಾಹಿಸಲಾಗುತ್ತದೆ. ವಿಶ್ವಾಸಾರ್ಹ ಮಾಹಿತಿಯನ್ನು ಒದಗಿಸುವ ಮಾಹಿತಿದಾರರಿಗೆ ಬಹುಮಾನ ನೀಡಲಾಗುವುದು ಮತ್ತು ಅವರ ಗುರುತನ್ನು ಕಟ್ಟುನಿಟ್ಟಾಗಿ ಗೌಪ್ಯವಾಗಿಡಲಾಗುತ್ತದೆ ಎಂದು ತಿಳಿಸಿದ್ದಾರೆ."ಅವಳನ್ನು ಬದುಕಲು ಬಿಡಿ, ಸಮಾಜವನ್ನು ಅಭಿವೃದ್ಧಿ ಹೊಂದಲು ಬಿಡಿ." ಎಂಬ ಜಾಗೃತಿ ಅಭಿಯಾನಗಳು, ರೋಗನಿರ್ಣಯ ಕೇಂದ್ರಗಳ ಕಟ್ಟುನಿಟ್ಟಿನ ಮೇಲ್ವಿಚಾರಣೆ ಮತ್ತು ಅಪರಾಧಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವ ಮೂಲಕ ಲಿಂಗ ಅನುಪಾತವನ್ನು ಸುಧಾರಿಸಲು ಜಿಲ್ಲಾಡಳಿತವು ಸಕ್ರಿಯ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು ಎಂದು ಕಲಬುರಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡೊನೇಷನ್ ಹಾವಳಿ ವಿರೋಧಿಸಿ ಎಸ್‌ಎಫ್‌ಐ ಪ್ರತಿಭಟನೆ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ




ಜಿಲ್ಲಾ ಕಾರ್ಯದರ್ಶಿ ಬಾಲಾಜಿ ಚಳ್ಳಾರಿ ಮಾತನಾಡಿ ಡೊನೇಷನ್ ಹಾವಳಿ ವಿರೋಧಿಸಿ, 'ಜಿಲ್ಲಾ ಶಿಕ್ಷಣ ರೆಗ್ಯುಲೇಟಿಂಗ ಪ್ರಾಧಿಕಾರ'ವನ್ನು ರಚಿಸುವಂತೆ, ವಂತಿಗೆ ವಸೂಲಿ ಮಾಡುತ್ತಿರುವ ಶಿಕ್ಷಣ ಸಂಸ್ಥೆಗಳ ಮೇಲೆ ಕ್ರಮಕೈಗೊಳ್ಳಲು ಆಗ್ರಹಿಸಿ ರಾಜ್ಯಾದ್ಯಂತ ನೀಡಿರುವ ಹೋರಾಟದ ಭಾಗವಾಗಿ ತಮ್ಮಗೆ ಸಲ್ಲಿಸುವ ಮನವಿ ಏನೆಂದರೆ, 2026-27ನೇ ಸಾಲಿನಲ್ಲಿ ರಾಜ್ಯಾದ್ಯಂತ ಕೆಲವು ಖಾಸಗಿ ಶಿಕ್ಷಣ ಸಂಸ್ಥೆಗಳು ಈಗಾಗಲೇ ಪ್ರವೇಶಾತಿ ಪ್ರಕ್ರಿಯೆಯನ್ನು ಮುಕ್ತಾಯಗೊಳಿಸಿದ್ದು, ಈ ಸಂದರ್ಭದಲ್ಲಿ ಜಿಲ್ಲಾ ಶಿಕ್ಷಣ ಪ್ರಾಧಿಕಾರ ಸಭೆ ಸೇರಿ, ಖಾಸಗಿ ಶಾಲೆಗಳ ಡೊನೇಷನ್ ಹಾವಳಿ ಕುರಿತು ಪಾಲಕರಿಗೆ ಮಾಹಿತಿ ನೀಡಬೇಕಾಗಿತ್ತು. ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿರುವಂತಹ ಸಮಿತಿಯು ಸಭೆ ಸೇರಿ ಖಾಸಗಿ ಶಾಲೆಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡದಿರುವ ಕಾರಣ 1983ರ ಶಿಕ್ಷಣ ಕಾಯ್ದೆ ಮತ್ತು 2009ರ ಆರ್.ಟಿ.ಇ ಕಾಯ್ದೆಯನ್ನು ಸಂಪೂರ್ಣವಾಗಿ ಉಲ್ಲಂಘನೆ ಮಾಡುವುದರ ಮೂಲಕ ಹಗಲು ದರೋಡೆ ಮಾಡಿರುತ್ತಾರೆ.

ಒಂದೆಡೆ ರಾಜ್ಯಾದ್ಯಂತ ಅಣಬೆಗಳಂತೆ ಖಾಸಗಿ ಶಾಲೆಗಳು ತಲೆ ಎತ್ತುತ್ತಿವೆ ಮತ್ತೊಂದೆಡೆ ರಾಜ್ಯದಲ್ಲಿ ಸರ್ಕಾರಿ ಕನ್ನಡ ಮಾಧ್ಯಮ ಶಾಲೆಗಳು ಮುಚ್ಚುತ್ತಿವೆ. ಈಗಾಗಲೆ ಖಾಸಗಿ ಶಾಲೆಗಳಲ್ಲಿ ದಾಖಲಾತಿ ಹೆಸರಲ್ಲಿ ಡೊನೇಷನ್ ಹಣವನ್ನು ಮನಬಂದತೆ ವಸೂಲಿ ಮಾಡಲು ಮುಂದಾಗಿದ್ದಾರೆ. ಬಡ ಹಿಂದುಳಿದ, ದಲಿತ ಅಲ್ಪಸಂಖ್ಯಾತರ ಮಕ್ಕಳು ಖಾಸಗಿ ಶಾಲೆಗಳಲ್ಲಿ ಡೊನೇಷನ್ ಪಿಡುಗಿನಿಂದ ಶಾಲೆಗಳಲ್ಲಿ ಓದುವುದು ಅಸಾಧ್ಯವಾಗುತ್ತಿದೆ.

ಶಿಕ್ಷಣ ಹಕ್ಕು ಕಾಯ್ದೆ-1983 ಮತ್ತು 2009ರ ಆರ್.ಟಿ.ಇ ಕಾಯ್ದೆ ಜಾರಿಯಾದರೂ ಸಮರ್ಪಕವಾಗಿ ಪಾಲನೆಯಾಗುತ್ತಿಲ್ಲ. ಬಹುತೇಕ ಖಾಸಗಿ ಶಾಲೆಗಳಲ್ಲಿ ಲಕ್ಷಾಂತರ ರೂಪಾಯಿಗಳವರೆಗೂ ಹಣ ವಸೂಲಿ ಮಾಡುವುದರ ಮೂಲಕ ಹಗಲು ದರೋಡೆ ಮಾಡುತ್ತಿದ್ದಾರೆ. ಹಾಗೂ ಆಕ್ರಮವಾಗಿ ಟ್ಯೂಷನ್, ಟ್ಯೂಟರಿಯಲ್ಸ್, ಆನದೀಕೃತವಾಗಿ ಅಖಅ ಅಃಖಅ ಕೆಲವು ಪ್ರತಿಷ್ಟಿತ ಪಿ.ಯು.ಸಿ ಕಾಲೇಜುಗಳು ಎಇಇ, ಓಇಇಖ, ಅಇಖ ಹೆಸರಿನಲ್ಲಿ ಶಾಲಾ ಕಾಲೇಜುಗಳು ನಡೆಯುತ್ತಿವೆ ಶಿಕ್ಷಣ ಇಲಾಖೆಯ ಬಿಇಓ ಮತ್ತು ಡಿಡಿಪಿಐ ಅಧಿಕಾರಿಗಳು ಕಣ್ಮುಚ್ಚಿ ಕೂತಿದ್ದಾರೆ ಎಂದು ಆಕ್ರೋಶ ವ್ಯಕ್ತಿಪಡಿಸಿದರು ತಾಲೂಕ ಅಧ್ಯಕ್ಷ ನಾಗರಾಜ್ ಯು ಮಾತನಾಡಿ ಸರಕಾರ ನಿಯಮಗಳ ಪ್ರಕಾರ ಸರ್ಕಾರ ನಿಗದಿಪಡಿಸಿದಂತೆ ಅನುದಾನಿತ ಶಿಕ್ಷಣ ಸಂಸ್ಥೆಗಳು ಹಾಗೂ ಅನುದಾನರಹಿತ ಶಿಕ್ಷಣ ಸಂಸ್ಥೆಗಳು ಅಭಿವೃದ್ಧಿ ಶುಲ್ಕ (ಡೆವಲಪ್ ಮೆಂಟ್ ಫೀ) ನ್ನು ಸಂಗ್ರಹಿಸಲು ಅವಕಾಶವಿದೆ. ಈ ಹಣವನ್ನು ಒತ್ತಾಯದ ಮೂಲಕ ಸಂಗ್ರಹಿಸುವಂತಿಲ್ಲ. ಇದಕ್ಕೂ ಹೆಚ್ಚು ಸಂಗ್ರಹಿಸುವುದು ಕಾನೂನಿನ ಪ್ರಕಾರ ಅಪರಾಧ, ಖಾಸಗಿ ಶಿಕ್ಷಣ ಸಂಸ್ಥೆಗಳು ಪ್ರಾರಂಭಿಕ ತರಗತಿಗೆ ಪ್ರವೇಶ ಪರೀಕ್ಷೆಗಳನ್ನು ನಡೆಸಬಾರದು ಎಂದು ಶಿಕ್ಷಣ ಹಕ್ಕು ಕಾಯ್ದೆ 2009 ರ ಸೆಕ್ಷನ್ 13(2) (ಬಿ) ಹೇಳುತ್ತದೆ. ಪ್ರವೇಶ ಪರೀಕ್ಷೆ ನಡೆಸುವ ಶಾಲೆಗಳಿಗೆ 25 ಸಾವಿರ ರೂ ದಂಡ ಹಾಕಬೇಕೆಂದು ಹೇಳಿದೆ. ವಿದ್ಯಾರ್ಥಿಗಳ ಸಂಖ್ಯೆ, ಕಲಿಕಾ ಮಾಧ್ಯಮ, ಶುಲ್ಕದ ವಿವರ, ಕ್ರೀಡಾಂಗಣ, ಶೌಚಾಲಯ, ಶಿಕ್ಷಕರ ಸಂಖ್ಯೆ, ಮುಂತಾದ ಮಾಹಿತಿಯನ್ನು ಶಾಲಾ ಆವರಣದಲ್ಲಿ 1016 ಸೈಜಿನಲ್ಲಿ ಫ್ಲೆಕ್ಸ್ ಪ್ರಕಟಿಸಬೇಕೆಂದು ಹಾಗೂ ಇದೇ ಮಾಹಿತಿಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಬೇಕೆಂದು ಶಿಕ್ಷಣ ಇಲಾಖೆ ಆದೇಶಿಸಿದೆ. ಆದರೆ, ಇದನ್ನು ಖಾಸಗಿ ಶಿಕ್ಷಣ ಸಂಸ್ಥೆಗಳು ಜಾರಿ ಮಾಡಿಲ್ಲ. ಸರ್ಕಾರದ ಸುತ್ತೋಲೆಯಲ್ಲಿ ಡಿ.ಡಿ.ಪಿ.ಐ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಇದನ್ನು ಪರೀಶಿಲಿಸಬೇಕೆಂದು ಹೇಳಿದ್ದರೂ ಇಲಾಖಾ ಅಧಿಕಾರಿಗಳು ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಮಣಿದು ಸರಿಯಾಗಿ ಪರೀಶೀಲನೆ ಮಾಡಿರುವುದಿಲ್ಲ ಎಂದು ಆರೋಪಿಸಿದರು .ಇದರಿಂದಾಗಿ ಶಾಲೆಗಳಲ್ಲಿ ಪ್ರವೇಶ ಪರೀಕ್ಷೆ ನಡೆಸುವುದರ ಜೊತೆಗೆ ನೋಟ್‌ಬುಕ್, ಶಾಲಾ ಬ್ಯಾಗ್, ಬೂಟು, ಬಟ್ಟೆ, ಜಾಮಿಟ್ರಿ ಬಾಕ್ಸ್ ಕಡ್ಡಾಯವಾಗಿ ಆಯಾ ಶಾಲೆಗಳಲ್ಲಿ ತೆಗೆದುಕೊಳ್ಳಬೇಕೆಂದು ಪಾಲಕರಿಗೆ ಹೇಳಿ ಹೆಚ್ಚಿನ ದರದಲ್ಲಿ ಕೊಟ್ಟು ಶಾಲೆಗಳನ್ನು ಅಂಗಡಿಯಾಗಿ ಮಾರ್ಪಟ್ಟು ಮಾಡಿದ ಶಾಲೆಗಳ ವಿರುದ್ಧ ಮಾನ್ಯತೆಯನ್ನು ರದ್ದು ಮಾಡಿ ಮತ್ತು ಬಹುತೇಕ ಶಾಲೆಗಳು ಇಲಾಖೆಯ ಆದೇಶವನ್ನು ಉಲ್ಲಂಘಿಸಿದ್ದು, ಅಂತಹ ಶಾಲೆಗಳ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ಅನಧಿಕೃತ ಟ್ಯೂಷನ್ ಸೆಂಟರ್‌ಗಳನ್ನು ಮುಚ್ಚತಕ್ಕದ್ದು ಮತ್ತು ಈ ಕೂಡಲೇ ಜಿಲ್ಲಾ ಶಿಕ್ಷಣ ಶುಲ್ಕ ನಿಯಂತ್ರಣ ಪ್ರಾಧಿಕಾರ ಸಭೆ ಸೇರಿಸಬೇಕೆಂದು ಭಾರತ ವಿದ್ಯಾರ್ಥಿ ಫೆಡರೇಷನ್ (ಎಸ್.ಎಫ್.ಐ) ಗಂಗಾವತಿ ತಾಲೂಕ ಸಮಿತಿ ಒತ್ತಾಯಿಸಿ ಗಂಗಾವತಿಯ ಕ್ಷೇತ್ರ ಶಿಕ್ಷಣ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.ಮನವಿಗೆ ಸ್ಪಂದಿಸಿದ ಬಿಇಓ ಅಧಿಕಾರಿ ನಟೇಶ್ ಸರ್ ಮಾತನಾಡಿ ಡೊನೇಷನ್ ವಸೂಲಿ ಮಾಡುತ್ತಿವ ಶಾಲೆಗಳ ಮೇಲೆ ಮತ್ತು ಫೀ ಫ್ಲೆಕ್ಸ್ ಕಾರ್ಡ್ ಹಾಕದೇ ಇರುವ ಶಾಲೆಗಳ ಮೇಲೆ ಇಂದೇ ಕ್ರಮ ಕೈಗೊಳ್ಳುತ್ತೇವೇ ಎಂದು ತಿಳಿಸಿದರು ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಯದರ್ಶಿ ಬಾಲಾಜಿ ಚಳ್ಳಾರಿ, ತಾಲೂಕ ಅಧ್ಯಕ್ಷ ನಾಗರಾಜ್. ಯು, ಕೃಷಿಕೂಲಿಕಾರ ಸಂಘಟನೆಯ ಜಿಲ್ಲಾ ಜಂಟಿ ಕಾರ್ಯದರ್ಶಿ ಬಾಳಪ್ಪ ಹುಲಿಹೈದರ್, ಎಸ್ ಎಫ್ ಐ ಜಂಟಿ ಕಾರ್ಯದರ್ಶಿ ಬಸಯ್ಯ, ಸದಸ್ಯರಾದ ಶರಣಬಸವ ಬಾದ್ನಟ್ಟಿ, ದೊಡ್ಡಬಸವ, ಮುಖಂಡರಾದ ಯಂಕಣ್ಣ, ಅಲ್ತಾಫ್, ಕಾರ್ತಿಕ್ ಮತ್ತು ಪಾಲಕರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು

# ಮನೆಯಲ್ಲಿ ಹಲವು ಜ್ಞಾನ ಶಾಖೆಗಳ ಪುಸ್ತಕ ಇರಲಿ: ಡಾ. ಗವಿಸಿದ್ದಪ್ಪ ಪಾಟೀಲ

• **ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ**

ಹಲವು ಜ್ಞಾನ ಶಾಖೆಗಳ ಪುಸ್ತಕ ಹೊಂದಿರುವ ಗ್ರಂಥಾಲಯ ಮನೆಯಲ್ಲಿ ಇರಬೇಕು ಎಂದು ಕಲಬುರ್ಗಿಯ ಹಿರಿಯ ಸಾಹಿತಿ ಡಾ. ಗವಿಸಿದ್ಧಪ್ಪ ಪಾಟೀಲ ಹೇಳಿದರು.

ಇಲ್ಲಿನ ತ್ರಿಪುರಾಂತದ ಉರಿಲಿಂಗ ಪೆದ್ದಿ ಶಾಖಾ ಮಠದ ಪೂಜ್ಯ ಶ್ರೀ ಪಂಚಾಕ್ಷರಿ ಸ್ವಾಮಿಗಳ ಮನೆಯಲ್ಲಿ ಕನ್ನಡ ಪುಸ್ತಕ ಪ್ರಾಧಿಕಾರದ ಮನೆಗೊಂದು ಗ್ರಂಥಾಲಯ ಅನುಷ್ಠಾನ ಯೋಜನೆ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಮನೆಯಲ್ಲಿ ಗ್ರಂಥಾಲಯ ಇದ್ದರೆ ಸಹಜವಾಗಿಯೇ ಓದುವ ಹವ್ಯಾಸ ಬೆಳೆಯುತ್ತದೆ ರ ಎಂದರು.

ಕನ್ನಡ ಸಂಸ್ಕೃತಿ ಇಲಾಖೆ ಪುಸ್ತಕ ಯೋಜನೆಯನ್ನು ಹಾಕಿಕೊಂಡು ಬರಹಗಾರರಿಗೆ ಬರೆಯಲು ಹಚ್ಚಿ ,ಪುಸ್ತಕವನ್ನು ಖರೀದಿ ಮಾಡಿ ಸಾಹಿತಿಗಳಿಗೆ ಉತ್ತೇಜನವನ್ನು ನೀಡುತ್ತಿದ್ದಾರೆ. ಇದು ಪುಸ್ತಕ ಸಂಸ್ಕೃತಿ ಬೆಳೆಸುವ ಅನನ್ಯ ವಿಧಾನವಾಗಿದೆ ಎಂದರು.

ಜಗತ್ತಿನಲ್ಲಿ ಅತ್ತಿ ಹೆಚ್ಚು ಪುಸ್ತಕ ಓದಿದ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಮತ್ತು ಕಾರ್ಲ್ ಮಾರ್ಕ್ಸ್ . ಇವರ ಓದಿನ, ಅಧ್ಯಯನಶೀಲತೆಯ ಸ್ಮರಣಾರ್ಥ ಲಂಡನ್ ಗ್ರಂಥಾಲಯದಲ್ಲಿ ಸ್ಮಾರಕವಾಗಿಸಿದ್ದಾರೆ ಎಂದರು.ವಿಶೇಷ ಉಪನ್ಯಾಸ ನೀಡಿದ

ಬರಹಗಾರ ಡಾ. ಭೀಮಾಶಂಕರ ಬಿರಾದಾರ ಅವರು, ಮಾತನಾಡುವ ಪ್ರವೃತ್ತಿ ಹೆಚ್ಚಾಗಿ ಕೃತಿಗಳ ಓದು ಗೌಣವಾಗುತ್ತಿರುವುದು ಈ ಕಾಲದ ಬಹುದೊಡ್ಡ ಸಾಂಸ್ಕೃತಿಕ ಬಿಕ್ಕಟ್ಟಿಗೆ ಕಾರಣವಾಗಿದೆ. ಎಲ್ಲ ದೇಶ ಕಾಲದಲ್ಲಿ ಚಾರಿತ್ರಿಕವಾಗಿ,ಸಾಂಸ್ಕೃತಿಕವಾಗಿ ಪಲ್ಲಟಗಳನ್ನು ಮಾಡಲು ಸಾಧ್ಯವಾದದ್ದು ಬರಹಗಳಿಂದ ಮತ್ತು ಕೃತಿಗಳಿಂದ. ಈ ಕಾಲಘಟ್ಟದಲ್ಲಿ ಸಾಕ್ಷರತೆ ಹೆಚ್ಚಿನ ಪ್ರಮಾಣದಲ್ಲಿ ಇದ್ದರೂ, ಗಂಭೀರವಾದ ಓದು ಅಧ್ಯಯನದಲ್ಲಿ ತೊಡಗಿರುವವರ ಸಂಖ್ಯೆ ವಿರಳವಾಗಿದೆ ಎಂದರು.ಗಾಂಧಿ,ಅಂಬೇಡ್ಕರ್,ಲೋಹಿಯಾ ಮೊದಲಾದ ಚಿಂತಕರ ಬರಹಗಳು ಓದುವ ಮೂಲಕ ಲೋಕವನ್ನು ಗ್ರಹಿಸಲು ಸಾಧ್ಯ. ಒಂದು ಕೃತಿ ಲೋಕವೊಂದರ ದರ್ಶನ ಮಾಡಿಸುತ್ತಲೇ ಕೃತಿಕಾರನ ಸಾಮಾಜಿಕ, ಸಾಂಸ್ಕೃತಿಕ ಒತ್ತಡಗಳು ತಿಳಿಸುತ್ತದೆ . ಸೂಕ್ಷ್ಮ ಓದುಗನಿಗೆ ಕೃತಿಯ ತಾತ್ವಿಕತೆ ಅರಿಯಲು ಸಾಧ್ಯ ಎಂದರು.

ಸಾರ್ವಜನಿಕ ಜೀವನದಲ್ಲಿ ಇರುವವರು ಹೆಚ್ಚು ಓದುವ ಮೂಲಕ ಜನ ಸಮುದಾಯದ ಸಮಸ್ಯೆಗಳನ್ನು ಸವಾಲುಗಳಿಗೆ ಕಾಳಜಿಯಿಂದ ಸ್ಪಂದಿಸಬಹುದು. ಪಠ್ಯದ ಓದು ವ್ಯಕ್ತಿಯ ಒಳ ಮತ್ತು ಹೊರ ಜಗತ್ತನ್ನು ಬದಲಾಯಿಸುವ ಸಾಧ್ಯತೆ ಹೊಂದಿದೆ. ಪ್ರತಿಯೊಬ್ಬರು ಮನೆಯಲ್ಲಿ ಪುಸ್ತಕ ಮನೆ ಹೊಂದಿರುವ ಅಗತ್ಯವಿದೆ ಎಂದರು.ಅಧ್ಯಕ್ಷತೆ ವಹಿಸಿದ್ದ ಕಲಬುರ್ಗಿಯ ನಿವೃತ್ತ ಪ್ರಾಧ್ಯಾಪಕ ಡಾ. ರೊಳೇಕರ ನಾರಾಯಣ ಅವರು ಮಾತನಾಡಿ , ಯೋಚನೆ ಮಾಡುವ ಶಕ್ತಿಯನ್ನು ಪುಸ್ತಕ ಓದುವುದರಿಂದ ಮಾತ್ರ ಸಾಧ್ಯ . ಪುಸ್ತಕಗಳು ನಮ್ಮ ಜೀವನ ಸಂಗಾತಿಯಾಗಿ ನಮ್ಮನ್ನು ಮುನ್ನಡೆಸುತ್ತವೆ.

ಓದು-ಅಧ್ಯಯನಗಳು ಸಾಮಾಜಿಕ ಬೆಳವಣಿಗೆಗೆ ಕಾರಣವಾಗಿವೆ. ಗಾಂಧಿಜೀ ಸೇರಿದಂತೆ ಹಲವು ಚಿಂತಕರ ಶ್ರೇಷ್ಠ ವ್ಯಕ್ತಿತ್ವ ರೂಪುಗೊಂಡಿದ್ದು ಅವರವರ ಓದಿನ ಹಿನ್ನೆಲೆಯಿಂದ. ಈ ಕಾಲದ ಯುವ ಸಮುದಾಯ ಹೆಚ್ಚು ಓದುವ ಮೂಲಕ ನಮ್ಮ ಕಾಲದ ಸತ್ಯಾಸತ್ಯತೆಯನ್ನು ಅರಿಯಬೇಕು ಎಂದರು.

ಉರಿಲಿಂಗಪೆದ್ದಿ ಮಠದ ಪೀಠಾಧಿಪತಿ ಪೂಜ್ಯ ಶ್ರೀ ಪಂಚಾಕ್ಷರಿ ಸ್ವಾಮಿಗಳು ಮಾತನಾಡಿ ಜ್ಞಾನ ಪರಂಪರೆಯ ಬೆಳವಣಿಗೆಗೆ ಪುಸ್ತಕಗಳು ಮಹತ್ವ ಪಡೆಯುತ್ತವೆ. ತತ್ವಶಾಸ್ತ್ರ, ವಚನ, ತತ್ವಪದ ಯಾವುದೇ ಕೃತಿಗಳಾದರೂ ಪ್ರತಿಯೊಬ್ಬರ ಮನೆಯಲ್ಲಿ ಇರಬೇಕು. ತಂದೆ ತಾಯಿಗಳು ಮೋಬೈಲ್ ಬಿಟ್ಟು ಪುಸ್ತಕ ಹಿಡಿದರೆ ಮಕ್ಕಳಲ್ಲಿ ಓದುವ ರೂಢಿ ಕರಗತವಾಗುತ್ತದೆ. ಮನೆ, ಮಠ, ಶಾಲೆ ಕಾಲೇಜು , ಸಾರ್ವಜನಿಕ ಸ್ಥಳಗಳಲ್ಲಿ ಗ್ರಂಥಾಲಯ ಅನುಷ್ಠಾನಕ್ಕೆ ತರಬೇಕು. ನಮ್ಮೆಲ್ಲರ ಜೀವನ ಕೈಹಿಡಿದು ನಡೆಸುವ ಕೆಲಸ ಪುಸ್ತಕದಿಂದ ಸಾಧ್ಯ ಎಂದರು.

ಗ್ರಂಥಾಲಯ ಜಾಗೃತಿ ಸಮಿತಿ ಜಿಲ್ಲಾ ಸಂಚಾಲಕ ಬಾಲಾಜಿ ಕುಂಬಾರ ಮಾತನಾಡಿ, ಸಾಮಾಜಿಕ ಜಾಲತಾಣ ಎಷ್ಟೇ ಪ್ರಭಾವಶಾಲಿ ಆಗಿದ್ದರೂ, ಎಷ್ಟೇ ವೇಗವಾಗಿ ಮಾಹಿತಿ ಒದಗಿಸಿದರೂ, ಪುಸ್ತಕ ಓದಿನಿಂದ ದೊರೆಯುವ ಖುಷಿ ಅನಂತವಾದದ್ದು. ಹೊಸ ಪೀಳಿಗೆಯಲ್ಲಿ ಪುಸ್ತಕ ಓದಿನ ಅಭಿರುಚಿ ಮೂಡಿಸುವ ಉದ್ದೇಶದಿಂದ ಕನ್ನಡ ಪುಸ್ತಕ ಪ್ರಾಧಿಕಾರದ ಮನೆಗೊಂದು ಗ್ರಂಥಾಲಯ ಅನುಷ್ಠಾನ ಯೋಜನೆಯು ಪ್ರತಿಯೊಂದು ಮನೆಯಲ್ಲಿ ಪುಸ್ತಕ ಸಂಸ್ಕೃತಿ ಹಾಗೂ ಓದುವ ಸಂಸ್ಕೃತಿ ಬೆಳೆಸುವ ಉದ್ದೇಶ ಹೊಂದಿದೆ ಎಂದರು. ಈ ಸಂದರ್ಭದಲ್ಲಿ ಗುಲಬರ್ಗಾ ವಿಶ್ವವಿದ್ಯಾಲಯದಿಂದ ಪಿಎಚ್.ಡಿ. ಪದವಿ ಪಡೆದ ಡಾ. ಸಂಜುಕುಮಾರ ನಡುಕರ ಅವರಿಗೆ ಸನ್ಮಾನಿಸಲಾಯಿತು.ಸಂದೀಪ ಮುಕಿಂದೆ, ರವಿಂದ್ರ ಕೊಳಕೂರ, ಡಾ. ಸಿದ್ದಪ್ಪಾ ಹೋಸಮನಿ, ನಾಗೇಂದ್ರ ಡೊಲೆ, ನಾಗಪ್ಪ ನಿಣ್ಣೆ, ಶ್ರೀಪತಿ ಬೇಲೂರು, ಸುಮಿತ ಖೇಳಗಿ ,ಮಹಾಲಿಂಗ ದೇವರು,ರಾಮಜಿ ಸಕ್ಪಾಲ ಬೇಲೂರ, ಗುರುನಾಥ ವಾಗ್ಮೊರೆ ಮೊದಲಾದವರು ಇದ್ದರು.

ವೀರಶೆಟ್ಟಿ ಪಾಟೀಲ ಸ್ವಾಗತಿಸಿದರು.

ಡಾ. ಪೀರಪ್ಪಾ ಸಜ್ಜನ ನಿರೂಪಿಸಿ ವಂದಿಸಿದರು.

# ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕಾರ : ಅರ್ಜಿ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್**



ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ವತಿಯಿಂದ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿಯಲ್ಲಿ ಶೇ.90 ಕ್ಕಿಂತ ಅಧಿಕ ಅಂಕಗಳನ್ನು ಪಡೆದ ಸರ್ಕಾರಿ ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುತ್ತಿದ್ದು, ಇದಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತ ಹಾಗೂ ಅರ್ಹ ವಿದ್ಯಾರ್ಥಿಗಳು https://powermedia.info ಲಿಂಕ್ ಮೂಲಕ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಮೇ 25 ಕೊನೆಯ ದಿನಾಂಕವಾಗಿದ್ದು, ಅರ್ಜಿ ಸಲ್ಲಿಸುವ ವಿಧಾನ ಹಾಗೂ ಇತರ ಮಾಹಿತಿಗಾಗಿ ಕೆಎಸ್‌ಜಿಇಎ ನ್ಯೂಡ್ ಯೂಟ್ಯೂಬ್ ಚಾನೆಲ್ ವೀಕ್ಷಿಸಲು ಸೂಚಿಸಲಾಗಿದೆ.

ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು 2026ರ ಪರೀಕ್ಷೆಯಲ್ಲಿ ಪ್ರಥಮ ಪ್ರಯತ್ನದಲ್ಲೇ ಉತ್ತೀರ್ಣರಾಗಿರಬೇಕು. ಜೊತೆ-ಗೆ ವಿದ್ಯಾರ್ಥಿಯ ತಂದೆ ಅಥವಾ ತಾಯಿ ರಾಜ್ಯ ಸರ್ಕಾರದ ಯಾವುದೇ ಇಲಾಖೆಯಲ್ಲಿ ಖಾಯಂ ನೌಕರರಾಗಿರಬೇಕೆಂದು ತಿಳಿಸಲಾಗಿದೆ.

ನಿಗಮ,ಮಂಡಳಿ,ಪ್ರಾಧಿಕಾರ,ವಿಶ್ವವಿದ್ಯಾಲಯ,ಖಾಸಗಿ ಹಾಗೂ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುವ ನೌಕರರ ಮಕ್ಕಳಿಗೆ ಈ ಯೋಜನೆ ಅನ್ವಯಿಸುವುದಿಲ್ಲ ಎಂದು ಸಂಘದ ರಾಜ್ಯ ವಿಭಾಗೀಯ ಉಪಾಧ್ಯಕ್ಷರು ಹಾಗೂ ಗುರುಮಠಕಲ್ ತಾಲೂಕು ಘಟಕದ ಅಧ್ಯಕ್ಷರಾದ ಶ್ರೀ ಸಂತೋಷ ನಿರೇಟಿ ಮಾಹಿತಿ ನೀಡಿದ್ದಾರೆ.

# ಕನಸುಗಳಿಗೆ ರೆಕ್ಕೆ ನೀಡಿದ ಪ್ರತಿಭಾ ಪುರಸ್ಕಾರ




• **ಮಲ್ಲಮ್ಮ ನುಡಿ ವಾರ್ತೆ ಹುಣಸಗಿ**

ಮೇ.7: ವಿದ್ಯಾರ್ಥಿಗಳ ಪ್ರತಿಭೆ ಮತ್ತು ಪರಿಶ್ರಮಕ್ಕೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಮಾತೋಶ್ರೀ ಸುಶೀಲಮ್ಮ ಪಟ್ಟಣಶೆಟ್ಟಿ ಸ್ಮಾರಕ ಪ್ರತಿಷ್ಠಾನ ವಜ್ಜಲ್ ವತಿಯಿಂದ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿದ 95ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಪಟ್ಟಣದ ಅಮ್ಮನ ಮನೆಯಲ್ಲಿ ನಡೆದ ಕಾರ್ಯಕ್ರಮವು ವಿದ್ಯಾರ್ಥಿಗಳ ಸಂಭ್ರಮ, ಪೋಷಕರ ಹೆಮ್ಮೆ ಮತ್ತು ಶಿಕ್ಷಣಾಭಿಮಾನಿಗಳ ಮೆಚ್ಚುಗೆಗೆ ಸಾಕ್ಷಿಯಾಯಿತು.ಕಾರ್ಯಕ್ರಮವು ಸಂಸ್ಥಾನ ಹಿರೇಮಠ ದೇವಪುರದ ಸಾನಿಧ್ಯ ಶಿವಮೂರ್ತಿ ಶಿವಾಚಾರ್ಯರ ದಿವ್ಯ ಸಾನಿಧ್ಯದಲ್ಲಿ ನೆರವೇರಿತು. ಮಮತಾ ದಯಾನಂದ ಹಾಗೂ ಡಾ. ಎಸ್.ಪಿ. ದಯಾನಂದ್ ಅಧ್ಯಕ್ಷತೆ ವಹಿಸಿದ್ದರು. ಮಾಜಿ ಸಚಿವ ನರಸಿಂಹ ನಾಯಕ್ ರಾಜುಗೌಡ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ವಿದ್ಯಾರ್ಥಿಗಳು ಉತ್ತಮ ಗುರಿ ಇಟ್ಟುಕೊಂಡು ನಿರಂತರ ಪರಿಶ್ರಮದಿಂದ ಜೀವನದಲ್ಲಿ ಉನ್ನತ ಸಾಧನೆ ಮಾಡಬೇಕು ಎಂದು ಕರೆ ನೀಡಿದರು.ಅಧ್ಯಕ್ಷೀಯ ಭಾಷಣದಲ್ಲಿ ಮಮತಾ ದಯಾನಂದ ಅವರು ಮಾತನಾಡಿ, ಶಿಕ್ಷಣವೇ ಬದುಕಿನ ನಿಜವಾದ ಸಂಪತ್ತು. ವಿದ್ಯಾರ್ಥಿಗಳು ತಮ್ಮ ಸಾಧನೆಯ ಮೂಲಕ ತಂದೆ-ತಾಯಿಗಳಿಗೆ ಹಾಗೂ ಸಮಾಜಕ್ಕೆ ಗೌರವ ತರುವಂತಾಗಬೇಕು ಎಂದು ಹೇಳಿದರು. ಉಪನ್ಯಾಸ ನೀಡಿದ ಶಿಕ್ಷಕರಾದ ಕನಕಪ್ಪ ವಾಗಣಗೇರಿ ಅವರು, ಡಾ. ಎಸ್‌ಪಿ ದಯಾನಂದ ಅವರ ಶಿಕ್ಷಣ ಸೇವೆಯನ್ನು ಶ್ಲಾಘಿಸಿ, ಅವರ ಪ್ರೋತ್ಸಾಹದಿಂದ ಅನೇಕ ವಿದ್ಯಾರ್ಥಿಗಳು ಇಸ್ರೋ, ಇನ್ಫೋಸಿಸ್ ಬೆಂಗಳೂರು ಸೇರಿದಂತೆ ವಿವಿಧ ಪ್ರತಿಷ್ಠಿತ ಸಂಸ್ಥೆಗಳಲ್ಲಿ ಉದ್ಯೋಗ ಪಡೆದು ಸಾಧನೆ ಮಾಡುತ್ತಿರುವುದು ಹೆಮ್ಮೆಯ ವಿಷಯ ಎಂದರು.

ಶಾಲಾ ಶಿಕ್ಷಣ ಇಲಾಖೆಯ ಯಾದಗಿರಿ ಉಪ ನಿರ್ದೇಶಕರಾದ ಸಿ.ಎಸ್. ಮುಧೋಳ್ ಮಾತನಾಡಿ, ಶಿಕ್ಷಕರ ಕೊರತೆ ನಡುವೆಯೂ ಜಿಲ್ಲೆಯ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡುತ್ತಿರುವುದು ಸಂತಸದ ಸಂಗತಿ ಎಂದು ಹೇಳಿದರು.ಡಿ ಮ್ಯಾಕ್ಸ್ ಬೆಂಗಳೂರು

> ಡಾ.ದಯಾನಂದ ಅವರ ಸಾಧನೆ ನಮಗೆ ಸ್ಫೂರ್ತಿ ಅವರ ಮೂರ್ತಿ ಚಿಕ್ಕದಾದರೂ ಕೀರ್ತಿ ರಾಜ್ಯಕ್ಕೆ ಗೊತ್ತು ಅವರು ಯಾವತ್ತು ತಮ್ಮ ಬಗ್ಗೆ ಹೇಳಿಕೊಂಡಿಲ್ಲ ಅವರ ಸಾಧನೆ ನಮ್ಮ ಮುಂದಿನ ಯುವ ಪೀಳಿಗೆಗೆ ದಾರಿದೀಪ ಆಗಿದೆ ಎಂದು ಹೇಳಿದಳು
>
> **ಬಸವಶ್ರೀ ಎಸ್ ಬಂಡೊಳ್ಳಿ**
>
> **ಸಾಧನೆ ಮಾಡಿದ ವಿದ್ಯಾರ್ಥಿನಿ..**

ನಿರ್ದೇಶಕರಾದ ಡಾ. ಎಸ್‌ಪಿ ದಯಾನಂದ್ ಮಾತನಾಡಿ, ಯಾವುದೇ ವಿದ್ಯಾರ್ಥಿ ವಿದ್ಯಾಭ್ಯಾಸದಿಂದ ವಂಚಿತರಾಗಬಾರದು. ಗ್ರಾಮೀಣ ಭಾಗದ ಪ್ರತಿಭೆಗಳು ರಾಷ್ಟ್ರಮಟ್ಟದಲ್ಲಿ ಮಿಂಚಬೇಕು ಎಂಬುದು ನಮ್ಮ ಆಶಯ ಎಂದು ಹೇಳಿದರು.ದೇವಪುರ ಶ್ರೀಗಳು ಆಶೀರ್ವಚನ ನೀಡಿ, ವಿದ್ಯಾರ್ಥಿಗಳು ಗುರಿ ಮುಟ್ಟುವವರೆಗೆ ಮೊಬೈಲ್ ಬಳಕೆಯಿಂದ ದೂರವಿದ್ದು ಓದಿನ ಕಡೆ ಹೆಚ್ಚಿನ ಗಮನ ಹರಿಸಬೇಕು ಎಂದು ಸಲಹೆ ನೀಡಿದರು.ಈ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.100 ಫಲಿತಾಂಶ ದಾಖಲಿಸಿದ ಹುಣಸಗಿ ತಾಲೂಕಿನ 15 ಪ್ರೌಢ ಶಾಲೆಗಳ ಶಿಕ್ಷಕರನ್ನು ಸನ್ಮಾನಿಸಲಾಯಿತು. ಅಲ್ಲದೇ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಅತ್ಯುತ್ತಮ ಸಾಧನೆ ಮಾಡಿದ 95ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಪದಕ, ನೆನಪಿನ ಕಾಣಿಕೆ ಹಾಗೂ ನೋಟಬುಕ್ ವಿತರಿಸಿ ಗೌರವಿಸಲಾಯಿತು.ಕಾರ್ಯಕ್ರಮದಲ್ಲಿ ಶ್ರೀನಿವಾಸ್, ಚಂದ್ರಶೇಖರ ಪಟ್ಟಣಶೆಟ್ಟಿ, ವೀರೇಶ್ ಚಿಂಚೋಳಿ, ಚಂದ್ರಶೇಖರ್ ದಂಡಿನ್, ಸಿದ್ದನಗೌಡ ಕರಿಬಾವಿ, ಬಿಎಂ ಹಳ್ಳಿ ಕೋಟಿ, ಅಮರೇಶ್ ಬಸನಗೌಡ್ರು, ಮೇಲಪ್ಪ ಗುಳಿಗೆ, ಬಸವರಾಜ್ ಪಡಕೋಟಿ, ನಾನಗೌಡ ಪಾಟೀಲ್, ಬಸವರಾಜ್ ಮುಧೋಳ್, ಅಮರೇಶ್ ಮುಧೋಳ್, ಮೋತಿಲಾಲ್ ಚೌಹಾಣ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.ಗೌರವ ಕಾರ್ಯದರ್ಶಿ ಭೀಮಶೇನರಾವ್ ಕುಲಕರ್ಣಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮವನ್ನು ಅಮರಯ್ಯ ಜಾಲಿಬೆಂಚಿ ನಿರೂಪಿಸಿದರು.

# ಮೇ ೦೮ ರಂದು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಮೇ. 7-ಕಲಬುರಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಹಿಳಾ ಸಬಲೀಕರಣ ಘಟಕ ಕಲಬುರಗಿ ಇವುಗಳ ಸಂಯುಕ್ತಾಶ್ರಯದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಮೇ 08 ರಂದು ಶುಕ್ರವಾರ ಬೆಳಿಗ್ಗೆ 10:30 ಗಂಟೆಗೆ ನಗರದ ಡಾ.ಎಸ್. ಎಮ್. ಪಂಡಿತ್ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ.

ರಾಜ್ಯಸಭೆಯ ವಿರೋಧ ಪಕ್ಷದ ನಾಯಕರು ಹಾಗೂ ರಾಜ್ಯಸಭಾ ಸದಸ್ಯ ಡಾ. ಮಲ್ಲಿಕಾರ್ಜುನ ಖರ್ಗೆ ಅವರು ಘನ ಉಪಸ್ಥಿತಿ ವಹಿಸುವರು. ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವರಾದ ಡಾ. ಶರಣಪ್ರಕಾಶ ಪಾಟೀಲ, ಕರ್ನಾಟಕ ಸರಕಾರ ಸಚಿವರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಗೌರವ ಉಪಸ್ಥಿತಿವಹಿಸುವರು.

ಆಳಂದ ಶಾಸಕ ಹಾಗೂ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರಾದ ಬಿ.ಆರ್. ಪಾಟೀಲ, ಕರ್ನಾಟಕ ರೇಷ್ಮೆ ಉದ್ದಿಮೆಗಳ ನಿಗಮದ ನಿಯಮಿತದ ಅಧ್ಯಕ್ಷೆ ಹಾಗೂ ಉತ್ತರ ಶಾಸಕಿ ಕನೀಜ್ ಫಾತೀಮಾ, ಜೇವರ್ಗಿ ಶಾಸಕ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯಸಿಂಗ್ ಅವರು ಮುಖ್ಯ ಅತಿಥಿಗಳಾಗಿ ಆಗಮಿಸುವರು. ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ ಅವರು ಕಾರ್ಯಕ್ರಮದ ಅಧ್ಯಕ್ಷತೆವಹಿಸುವರು. ಕಲಬುರಗಿ ಲೋಕಸಭಾ ಸದಸ್ಯ ರಾಧಾಕೃಷ್ಣ ಆರ್. ದೊಡ್ಡಮನಿ, ಬೀದರ ಲೋಕಸಭಾ ಸದಸ್ಯ ಸಾಗರ ಖಂಡ್ರೆ, ಶಾಸಕರುಗಳಾದ ಎಂ.ವೈ. ಪಾಟೀಲ, ಬಸವರಾಜ ಮತ್ತಿಮಡು, ಡಾ. ಅವಿನಾಶ ಜಾಧವ, ವಿಧಾನ ಪರಿಷತ್ ಶಾಸಕರುಗಳಾದ ಶಶೀಲ ಜಿ. ನಮೋಶಿ, ಡಾ. ಬಿ.ಜಿ.ಪಾಟೀಲ, ಡಾ. ಚಂದ್ರಶೇಖರ ಪಾಟೀಲ ಹುಮನಾಬಾದ, ತಿಮ್ಮಣ್ಣಪ್ಪ ಕಮಕನೂರ, ಸುನೀಲ್ ವಲ್ಲ್ಯಾಪುರೆ, ಡಾ. ತಳವಾರ ಸಾಬಣ್ಣ, ಜಗದೇವ

ಗುತ್ತೇದಾರ್, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಅಧ್ಯಕ್ಷ ದೇವಿಂದ್ರಪ್ಪ ಮರತೂರು, ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಅಧ್ಯಕ್ಷ ಸೈಯದ್ ಮುಹಮ್ಮದ್ ಅಲಿ ಆರ್ ಹುಸೇನಿ, ಅಚ್ಚುಕಟ್ಟು ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಬ್ದುಲ್ ರಶೀದ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷ ಅರುಣಕುಮಾರ್ ಎಂ.ವೈ. ಪಾಟೀಲ, ಜೆಸ್ಕಾಂ ಅಧ್ಯಕ್ಷ ಪ್ರವೀಣ ಪಾಟೀಲ ಹರವಾಳ, ಕರ್ನಾಟಕ ರಾಜ್ಯ ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಸೈಯ್ಯದ್ ಮಹೆಬೂಬ್ ಚಿಸ್ತಿ ಸಾಹೇಬ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ್, ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್ ಹಾಗೂ ಮಹಾನಗರಪಾಲಿಕೆ ಮಹಾಪೌರ ವರ್ಷಾ ರಾಜೀವ ಜಾನೆ, ರಾಜ್ಯ ಬಾಲ ಭವನ ಸೊಸೈಟಿ ಉಪಾಧ್ಯಾಕ್ಷ ಅನಿಲಕುಮಾರ ಜಮಾದಾರ ಅವರು ಅತಿಥಿಗಳಾಗಿ ಪಾಲ್ಗೊಳ್ಳುವರು.

ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತೆ ಜಹೀರಾ ನಸೀಮ್, ಕಲಬುರಗಿ ಈಶಾನ್ಯ ವಲಯದ ಪೊಲೀಸ್ ಉಪ ಮಹಾನಿರೀಕ್ಷಕ ಶಾಂತನು ಸಿನ್ಹಾ, ಕಲಬುರಗಿ ಜೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಕೃಷ್ಣ ಭಾಜಪೇಯಿ, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಕಾರ್ಯದರ್ಶಿ ನಲಿನ್ ಅತುಲ್, ಕಲಬುರಗಿ ಕೆ.ಕೆ.ಆರ್.ಟಿ.ಸಿ. ವ್ಯವಸ್ಥಾಪಕ ನಿರ್ದೇಶಕಿ ಡಾ. ಬಿ. ಸುಶೀಲಾ, ಕಲಬುರಗಿ ವಿಭಾಗದ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತ ಪಾಂಡ್ವೆ ರಾಹುಲ್ ತುಕಾರಾಮ್ ಅವರು ವಿಶೇಷ ಆಹ್ವಾನಿತರಾಗಿ ಪಾಲ್ಗೊಳ್ಳುವರು.

# ರಾಜನಾಳದಲ್ಲಿ ಆದಿನಾಥ ಮಂದಿರ ಸ್ಥಾಪನೆ ಭಕ್ತಿಮಯ ನಾಥಷಷ್ಠಿ ಉತ್ಸವಕ್ಕೆ ಚಾಲನೆ



• **ಮಲ್ಲಮ್ಮ ನುಡಿ ವಾರ್ತೆ ಬೀದರ**

ಮೇ 07: ಇತ್ತಿಚೀಗೆ ತಾಲೂಕಿನ ರಾಜನಾಳ ಗ್ರಾಮದಲ್ಲಿ ನಾಥ ಸಂಸ್ಥಾನ ಔಸಾ (ಜಿಲ್ಲೆ ಲಾತೂರ್) ಪರಂಪರೆಯ ಆದಿನಾಥ ಮೂರ್ತಿ ಸ್ಥಾಪನೆ ಹಾಗೂ ನಾಥಷಷ್ಠಿ ಉತ್ಸವದ ಅಂಗವಾಗಿ ಭವ್ಯ ಧಾರ್ಮಿಕ ಕಾರ್ಯಕ್ರಮಗಳು ಭಕ್ತಿಭಾವದಿಂದ ನೆರವೇರಿದವು.

ನಾಥ ಸಂಸ್ಥಾನ ಔಸಾ ಪರಂಪರೆಯ ನಾಥಷಷ್ಠಿ ಉತ್ಸವವು ಸುಮಾರು 230 ವರ್ಷಗಳ ಇತಿಹಾಸ ಹೊಂದಿದ ಮಹತ್ವದ ಭಕ್ತಿ ಪರಂಪರೆಯಾಗಿದೆ. ಶ್ರೀವಿಠ್ಠಲನು ನಾಥಷಷ್ಠಿ ಉತ್ಸವದ ಪ್ರಸಾದವನ್ನು ಸದ್ಗುರು ವೀರನಾಥ ಮಹಾರಾಜ ಔಸೆಕರ ಅವರಿಗೆ ಅನುಗ್ರಹಿಸಿದ ಹಿನ್ನೆಲೆ, ಅವರ ವಂಶಸ್ಥರಿಂದಲೇ ಈ ಉತ್ಸವ ನಿರಂತರವಾಗಿ ಆಚರಿಸಲಾಗುತ್ತಿದೆ.

ಪ್ರತಿ ವರ್ಷದ ಉತ್ಸವಕ್ಕೆ ನಾಥ ಸಂಸ್ಥಾನದ ಪೀಠಾಧೀಶರಾದ ಸದ್ಗುರುಗಳು ಒಂದು ಗ್ರಾಮವನ್ನು ಆಯ್ಕೆ ಮಾಡುತ್ತಿದ್ದು, ಆ ಗ್ರಾಮದಲ್ಲಿರುವ ನಾಥ ಮಂದಿರದಲ್ಲಿ ಉತ್ಸವವನ್ನು ಆಚರಿಸಲಾಗುತ್ತದೆ. ಈ ಹಿನ್ನೆಲೆಯಲ್ಲಿ ಇದನ್ನು "ಸಂಚಾರಿ ನಾಥಷಷ್ಠಿ ಉತ್ಸವ" ಎಂದೂ ಕರೆಯಲಾಗುತ್ತದೆ. ಉತ್ಸವ ನಡೆಯುವ ಗ್ರಾಮದಲ್ಲಿ ನಾಥ ಮಂದಿರ ಸ್ಥಾಪಿಸುವ ಸಂಪ್ರದಾಯವಿದ್ದು, ಇದುವರೆಗೆ ಮಹಾರಾಷ್ಟ್ರ, ಕರ್ನಾಟಕ, ಆಂಧ್ರ ಪ್ರದೇಶ, ತೆಲಂಗಾಣ ಹಾಗೂ ಉತ್ತರ ಪ್ರದೇಶಗಳಲ್ಲಿ ನೂರಾರು ನಾಥ ಮಂದಿರಗಳು ನಿರ್ಮಾಣಗೊಂಡಿವೆ.

2027ರಲ್ಲಿ ನಡೆಯಲಿರುವ 230ನೇ ನಾಥಷಷ್ಠಿ ಉತ್ಸವವನ್ನು ತಾಲೂಕಿನ ರಾಜನಾಳ ಗ್ರಾಮದಲ್ಲಿ ಆಯೋಜಿಸಲು ನಿರ್ಧರಿಸಲಾಗಿದೆ. ಈ ಪ್ರಯುಕ್ತ ಇತ್ತಿಚೀಗೆ ಗ್ರಾಮಸ್ಥರು ಹಾಗೂ ಔಸೆಕರ ಮಹಾರಾಜರ ಸಹಕಾರದಿಂದ ಹೊಸ ದೇವಾಲಯ ನಿರ್ಮಿಸಿ, ಆದಿನಾಥರ ಆಸನ, ಶ್ರೀವಿಠ್ಠಲ-ರುಕ್ಮಿಣಿ ಮೂರ್ತಿಗಳು, ಶಿವಲಿಂಗ ಹಾಗೂ ರಾಧಾಕೃಷ್ಣ ಮೂರ್ತಿಗಳ ಪ್ರಾಣ ಪ್ರತಿಷ್ಠೆ ನೆರವೇರಿಸಲಾಯಿತು.

ಈ ಅಂಗವಾಗಿ ಮೂರು ದಿನಗಳ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದ್ದು, ವೈಶಾಖ ಪೌರ್ಣಿಮೆಯಾದ 2026ರ ಮೇ 1ರಂದು ಮುಖ್ಯ ಸಮಾರಂಭ ಭವ್ಯವಾಗಿ ಜರುಗಿತು. ಔಸಾದ ಬ್ರಹ್ಮವೃಂದವು ಪೂಜಾ ವಿಧಿಗಳನ್ನು ನೆರವೇರಿಸಿತು. ಸದ್ಗುರು ಗುರುಬಾಬಾ ಮಹಾರಾಜ, ಗೋರಖನಾಥ ಮಹಾರಾಜ, ಶ್ರೀರಂಗ ಮಹಾರಾಜ ಹಾಗೂ ಜ್ಞಾನರಾಜ ಮಹಾರಾಜ ಔಸೆಕರ ಅವರ ಸಾನ್ನಿಧ್ಯದಲ್ಲಿ ಪೂಜಾ ಕಾರ್ಯಗಳು ನಡೆದವು.

ಕಾರ್ಯಕ್ರಮಕ್ಕೆ ಮಾಜಿ ಕೇಂದ್ರ ಸಚಿವ ಭಗವಂತ ಖುಬಾ ಮುಖ್ಯ ಅತಿಥಿಯಾಗಿ ಆಗಮಿಸಿದ್ದರು. ಈ ಸಂದರ್ಭದಲ್ಲಿ ಔಸೆಕರ ಮಹಾರಾಜರು ಹಾಗೂ ರಾಜನಾಳ ಗ್ರಾಮಸ್ಥರು ಅವರ ಸನ್ಮಾನ ನೆರವೇರಿಸಿದರು.

ಶ್ರೀ ಸ್ವಾಮಿ ಮಹಾರಾಜ ಸಲಗರ್ಕರ್, ಜ್ಞಾನರಾಜ ಮಹಾರಾಜ ಔಸೆಕರ ಹಾಗೂ ಶ್ರೀರಂಗ ಮಹಾರಾಜ ಔಸೆಕರ ಅವರ ಕೀರ್ತನ ಸೇವೆಗಳು ಭಕ್ತರ ಮನಸೆಳೆಯುವಂತಿದ್ದವು.

ವಿವಿಧ ರಾಜ್ಯಗಳಿಂದ ಆಗಮಿಸಿದ ಭಕ್ತರು ಹಾಗೂ ಗ್ರಾಮಸ್ಥರ ಭಾಗವಹಿಸುವಿಕೆಯಿಂದ ಉತ್ಸವ ಭಕ್ತಿಮಯ ವಾತಾವರಣದಲ್ಲಿ ಯಶಸ್ವಿಯಾಗಿ ನೆರವೇರಿತು.

**CITATION:**
**IN THE COURT OF THE PRL, CIVIL JUDGE AND JMFC.,**
**AT HUMNABAD.**
CRL. MISC, No.2279/2026,

**Petitioners:**
1. Syed Ahmed Sab S/o Syed Hussain, Age: 60-year,
Occu: Agriculture. 2. Khaton Bee W/o late Syed Khursheed.
Age: 50-year, Occu: House hold. Both R/o Bagwan Galli
Humnabad. Dist. Bidar.

**Respondent:**
The Registrar of Birth and Death through The Chief officer TMC Humnabad.

**Sub: Petition U/Sec. 13(3) of Birth and Death Registration Act-1969**

Whereas, the above mentioned petitioners have filed the petition under section 13(3) of Birth and Death Registration Act-1969 praying this Honorable Court to issue Death Certificate of Father of Petitioner No.1 and Father in law of Petitioner No.2 by namely LATE. PASHA BEGUM W/O SYED HUSAIN D/O SHAIKH ABDUL RAHIM, she was died on 05.04.2018 at Town Humnabad. Dist. Bidar. The petitioners claiming the Death Certificate of said for transfer of property and other official purpose and home record. Therefore, it is hereby proclaimed that if any persons have got any objection in this regard, may approach to this Court on 29.05.2026 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 16-04-2026

//By order of the court//

**Chief Ministerial Officer,**
**Prl. Civil Judge & JMFC Court,**
**Humnabad.**

**CITATION:**
**IN THE COURT OF THE PRL. CIVIL JUDGE AND JMFC.,**
**AT HUMNABAD.**
**CRL. MISC. No.2280/2026.**

Petitioners:
1. Md. Qizar S/o Abdul Hameed, Age: 33-year, Occu: Private work. R/o Top Galli Humnabad.
2. Zeeshan Tarannum D/o Abdul Hameed. Age: 28-year, Occu : House hold. R/o Chitguppa. Dist. Bidar.
3. Reshma Tabassum D/o Abdul Hameed. Age : 35-year, Occu: House hold. R/o Humnabad Dist. Bidar.
4. Janofar S/o Khaleed Shaikh. Age: 58-year, Occu : House hold.
5. Rafique S/o Abdulazizmiya Shaikh. Age: 54-year, Occu : Private Work. 6. Ismail S/o Abdul Aziz Shaikh. Age: 52-year, Occu: Agriculture. Petitioner No.4 to 6 R/o Mumbai-MS
7. Ibrahim Shaikh S/o Abdul Aziz Sgaikh. Age: 41-year, Occu: Private Work. R/o Hyderabad TS.
8. Paravinnisa Begum D/o Abdul Aziz Shaikh, W/o Amjad Ali. Age: 63 year, Occu: House hold. R/o Kalaburagi.
9. Mohammad Raziya Begum D/o Abdul Aziz Shaikh. W/o Mohammad Ismail, Age: 55-year, Occu: House hold. R/o Indira Nagar Hyderabad-TS.
10. Mohammedi Begum D/o Abdul Aziz Shaikh. W/o Mohammad Aleemuddin, Age: 51-year, Occu: House hold. R/o Manna E Khelli,
11. Zaib Unnisa D/o Abdul Aziz Shaikh. W/o Mohammad Ismail, Age: 50-year, Occu: House hold. R/o Saidabad Hyderabad-TS.
12. Rahimunnisa Begum D/o Abdul Aziz Shaikh. W/o Mohammad Ismail, Age: 43-year, Occu: House hold. R/o Hallikhed-B, Tq. Humnabad.

Respondent:

**The Registrar of Birth and Death through The Chief officer TMC Humnabad.**

**Sub:- Petition U/Sec. 13(3) of Birth and Death Registration Act-1969**

Whereas, the above mentioned petitioners have filed the petition under section 13(3) of Birth and Death Registration Act-1969 praying this Honorable Court to issue Death Certificate of Grand mother of Petitioner No.1 to 3, Mother in law of Petitioner No.4 and Mother of Petitioner No.5 to 12 by namely LATE. HABIB BEE W/O ABDUL AZIZ LALAHAMAD SHAIKH, she was died on 28.07.2020 at Town Humnabad. Dist. Bidar. The petitioners claiming the Death Certificate of said for transfer of property and other official purpose and home record. Therefore, it is hereby proclaimed that if any persons have got any objection in this regard, may approach to this Court on 29.05.2026 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 16-04-2026

//By order of the court//

**Chief Ministerial Officer,**
**Prl. Civil Judge & JMFC Court,**
**Pri. Civil Ju Humnabad.**

# ಮೇ 08 ರಂದು ಕಂದಾಯ ಇಲಾಖೆಯ ಪ್ರಗತಿ ಪರ್ವ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ. 7– ಕಂದಾಯ ಇಲಾಖೆಯ ಪ್ರಗತಿ ಪರ್ವ ವಿವಿಧ ಯೋಜನೆಗಳ ಸೌಲಭ್ಯ ವಿತರಣಾ ಕಾರ್ಯಕ್ರಮವನ್ನು ಮೇ 08 ರಂದು ಶುಕ್ರವಾರ ಮಧ್ಯಾಹ್ನ 3 ಗಂಟೆಗೆ ನಗರದ ಡಾ.ಎಸ್. ಎಮ್. ಪಂಡಿತ್ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ.

ರಾಜ್ಯಸಭೆಯ ವಿರೋಧ ಪಕ್ಷದ ನಾಯಕರು ಹಾಗೂ ರಾಜ್ಯಸಭಾ ಸದಸ್ಯ ಡಾ. ಮಲ್ಲಿಕಾರ್ಜುನ ಖರ್ಗೆ ಅವರು ಘನ ಉಪಸ್ಥಿತಿ ವಹಿಸುವರು. ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು.

ರಾಜ್ಯದವೈದ್ಯಕೀಯಶಿಕ್ಷಣ,ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವರಾದ ಡಾ. ಶರಣಪ್ರಕಾಶ ಪಾಟೀಲ, ಕರ್ನಾಟಕ ಸರಕಾರ ಕಂದಾಯ ಸಚಿವ ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರು ಗೌರವ ಉಪಸ್ಥಿತಿವಹಿಸುವರು.

ಆಳಂದ ಶಾಸಕ ಹಾಗೂ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರಾದ ಬಿ.ಆರ್. ಪಾಟೀಲ, ಕರ್ನಾಟಕ ರೇಷ್ಮೆ ಉದ್ದಿಮೆಗಳ ನಿಗಮದ ನಿಯಮಿತದ ಅಧ್ಯಕ್ಷೆ ಹಾಗೂ ಉತ್ತರ ಶಾಸಕಿ ಕನೀಜ್ ಫಾತೀಮಾ, ಜೇವರ್ಗಿ ಶಾಸಕ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯಸಿಂಗ್ ಅವರು ಮುಖ್ಯ ಅತಿಥಿಗಳಾಗಿ ಆಗಮಿಸುವರು. ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ ಅವರು ಕಾರ್ಯಕ್ರಮದ ಅಧ್ಯಕ್ಷತೆವಹಿಸುವರು.

ಕಲಬುರಗಿ ಲೋಕಸಭಾ ಸದಸ್ಯ ರಾಧಾಕೃಷ್ಣ ಆರ್. ದೊಡ್ಡಮನಿ, ಬೀದರ ಲೋಕಸಭಾ ಸದಸ್ಯ ಸಾಗರ ಖಂಡ್ರೆ, ಶಾಸಕರುಗಳಾದ ಎಂ.ವೈ. ಪಾಟೀಲ, ಬಸವರಾಜ ಮತ್ತಿಮಡು, ಡಾ. ಅವಿನಾಶ ಜಾಧವ, ವಿಧಾನ ಪರಿಷತ್ ಶಾಸಕರುಗಳಾದ ಶಶೀಲ ಜಿ. ನಮೋಶಿ, ಡಾ. ಬಿ.ಜಿ.ಪಾಟೀಲ, ಡಾ. ಚಂದ್ರಶೇಖರ ಪಾಟೀಲ ಹುಮನಾಬಾದ, ತಿಮ್ಮಣ್ಣಪ್ಪ ಕಮಕನೂರ, ಸುನೀಲ್ ವಲ್ಯಾಪುರೆ, ಡಾ. ತಳವಾರ ಸಾಬಣ್ಣ, ಜಗದೇವ ಗುತ್ತೇದಾರ್, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಅಧ್ಯಕ್ಷ ದೇವಿಂದ್ರಪ್ಪ ಮರತೂರು, ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಅಧ್ಯಕ್ಷ ಸೈಯದ್ ಮುಹಮ್ಮದ್ ಅಲಿ ಅಲ್ ಹುಸೇನ, ಅಚ್ಚುಕಟ್ಟು ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಬ್ದುಲ್ ರಶೀದ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷ ಅರುಣಕುಮಾರ್ ಎಂ.ವೈ. ಪಾಟೀಲ, ಜೆಸ್ಕಾಂ ಅಧ್ಯಕ್ಷ ಪ್ರವೀಣ ಪಾಟೀಲ ಹರವಾಳ, ಕರ್ನಾಟಕ ರಾಜ್ಯ ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಸೈಯ್ಯದ್ ಮಹೆಬೂಬ್ ಚಿಸ್ತಿ ಸಾಹೇಬ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ್, ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್ ಹಾಗೂ ಮಹಾನಗರಪಾಲಿಕೆ ಮಹಾಪೌರ ವರ್ಷಾ ರಾಜೀವ ಜಾನೆ ಅವರು ಅತಿಥಿಗಳಾಗಿ ಪಾಲ್ಗೊಳ್ಳುವರು.

ಕಲಬುರಗಿ ಕಂದಾಯ ಇಲಾಖೆ ಅಪರ ಮುಖ್ಯಕಾರ್ಯದರ್ಶಿ ರಾಜೇಂದ್ರಕುಮಾರ ಕಟಾರಿಯಾ, ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿ ರಿತ್ವಿಕ್ ರಂಜನ್ ಪಾಂಡೆ, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಪಂಕಜಕುಮಾರ ಪಾಂಡೆ, ಬೆಂಗಳೂರು, ಕರ್ನಾಟಕ ಸರಕಾರ ಕಂದಾಯ ಆಯುಕ್ತಾಲಯ ಆಯುಕ್ತ ಮೀನಾ ನಾಗರಾಜ, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತೆ ಜಹೀರಾ ನಸೀಮ್, ಕಲಬುರಗಿ ಈಶಾನ್ಯ ವಲಯದ ಪೊಲೀಸ್ ಉಪ ಮಹಾನಿರೀಕ್ಷಕ ಶಾಂತನು ಸಿನ್ಹಾ, ಕಲಬುರಗಿ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್. ಡಿ, ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ, ಕಲಬುರಗಿ ಜಿಲ್ಲಾ ಪೊಲೀಸ್ ಅಧೀಕ್ಷಕರು ಅದ್ದೂರು ಶ್ರೀನಿವಾಸುಲು, ಕಲಬುರಗಿ ಮಹಾನಗರ ಪಾಲಿಕೆ ಆಯುಕ್ತರು ಅವಿನಾಶ ಶಿಂಧೆ ಅವರು ವಿಶೇಷ ಆಹ್ವಾನಿತರಾಗಿ ಪಾಲ್ಗೊಳ್ಳುವರು.

ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌ–ಜಿಯಾ ತರನ್ನುಮ್, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಕಲಬುರಗಿ ಉಪ ವಿಭಾಗ, ಹಿರಿಯ ಸಹಾಯಕ ಆಯುಕ್ತೆ ಸಾಹಿತ್ಯ ಎಮ್. ಆಲದಕಟ್ಟಿ ಹಾಗೂ ಸೇಡಂ ಉಪವಿಭಾಗ, ಸಹಾಯಕ ಆಯುಕ್ತ ಪ್ರಭು ರೆಡ್ಡಿ, ಜಿಲ್ಲೆಯ ಸಮಸ್ತ ಕಂದಾಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಭಾಗವಹಿಸುವರು.

# ಕುಡಿಯುವ ನೀರಿನ ಸಮಸ್ಯೆಗಳಿಗೆ ಪ್ರಥಮ ಆದ್ಯತೆ ನೀಡಿ

• ಮಲ್ಲಮ್ಮ ನುಡಿ ವಾರ್ತೆರಾಯಚೂರು



ಮೇ. 7: ಬೇಸಿಗೆ ಇರುವುದರಿಂದ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಗಳಿಗೆ ಪ್ರಥಮ ಆದ್ಯತೆ ನೀಡುವ ಮೂಲಕ ಜಿಲ್ಲೆಯ ಜನರಿಗೆ ಕುಡಿಯುವ ನೀರಿನ ಸಮಸ್ಯೆಗಳಾಗದಂತೆ ನೋಡಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಪೂವಿತಾ ಎಸ್. ಹೇಳಿದರು.

ಅವರು ಗುರುವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಜಿಲ್ಲೆಯ ಕುಡಿಯುವ ನೀರಿನ ಸಮಸ್ಯೆ. ಬಿಸಿಗಾಳಿ ಹಾಗೂ ಜಾನುವಾರುಗಳಿಗೆ ಮೇವಿನ ಲಭ್ಯತೆ ಕುರಿತು ಚರ್ಚಿಸಲು ಅಧಿಕಾರಿಗಳಿಗೆ ಕರೆದ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು. ರಾಯಚೂರು ಜಿಲ್ಲೆಯ ಯಾವುದೇ ತಾಲ್ಲೂಕಿನಲ್ಲಿ ನೀರಿನ ಸಮಸ್ಯೆಗಳಿರುವ ಗ್ರಾಮಗಳನ್ನು ಗುರುತಿಸಿ ಮುಂಜಾಗ್ರತೆವಹಿಸಬೇಕು. ಈ ಕುರಿತು ಮಾಹಿತಿ ಪಡೆಯಲು ಪ್ರತಿ ಸೋಮವಾರ ವಿಸಿ ಮೂಲಕ ಸಭೆ ಕರೆಯುತ್ತೇನೆ ತಾವು ಇಲ್ಲಿಗೆ ಬರುವುದು ಬೇಕಿಲ್ಲ ಆಯಾ ತಾಲ್ಲೂಕಿನ ಅಧಿಕಾರಿಗಳು ತಾವಿದ್ದ ಸ್ಥಳದಿಂದಲೇ ಮಾಹಿತಿ ಕೊಡಬೇಕು. ಕುಡಿಯುವ ನೀರಿನ ಸಹಾಯವಾಣಿಯಿಂದ ಬರುವ ಕರೆಗಳಿಗೆ ತಕ್ಷಣ ಸ್ಪಂದಿಸಬೇಕು ಎಂದರು. ನೀರಿನ ಸಮಸ್ಯೆಗಳಿರುವ ಕಡೆ ಖಾಸಗಿ ಬೋರವೆಲ್ ಮತ್ತು ಟ್ಯಾಂಕರಗಳ ಮೂಲಕ ಜನರಿಗೆ ನೀರು ಕೊಡುವ ಕೆಲಸ ಮಾಡಬೇಕು. ನೀರಿನ ಗುಣಮಟ್ಟವನ್ನು ಪರೀಕ್ಷೆ ಮಾಡಬೇಕು. ಜಿಲ್ಲೆಯ ಯಾವ–ಯಾವ ಭಾಗದಿಂದ ಸಮಸ್ಯೆಗಳು ಬರುತ್ತವೆ ಎನ್ನುವುದರ ಕುರಿತು ಪಟ್ಟಿ ಮಾಡಿ. ಕುಡಿಯುವ ನೀರಿಗೆ ಸಂಬಂಧಿಸಿದಂತೆ ಯಾವುದಾದರು ರಿಪೇರಿ ಸೇರಿದಂತೆ ಇತರೆ ಎನಾದರು ಕೆಲಸ ಇದ್ದಲ್ಲಿ ಆಯಾ ತಾಲ್ಲೂಕು ಮಟ್ಟದಲ್ಲಿ ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಪ್ರಪೋಸಲ್ ಕೊಡಿ. ಇತರೆ ಯಾವುದೇ ಸಮಸ್ಯೆಗಳಿದ್ದರೆ ನಮ್ಮ ಗಮನಕ್ಕೆ ತರಬೇಕು. ಜಾನುವಾರುಗಳಿಗೆ ಮೇವಿನ ಸಮಸ್ಯೆಗಳಾಗದಂತೆ ನೋಡಿಕೊಳ್ಳಬೇಕೆಂದು ಹೇಳಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ ಕಾಂದೂ ಮಾತನಾಡಿ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಗಳ ಕುರಿತು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಸರಿಯಾದ ಮಾಹಿತಿ ನೀಡಬೇಕು. ಗ್ರಾಮ ಮತ್ತು ನಗರ ಪ್ರದೇಶಗಳಲ್ಲಿ ನೀರಿನ ಸಮಸ್ಯೆಗಳಾಗಬಾರದು ಇದಕ್ಕೆ ಯಾವುದೇ ಅನುದಾನದ ಕೊರತೆ ಇಲ್ಲ ಈ ಕುರಿತು ಅಧಿಕಾರಿಗಳು ಹೆಚ್ಚಿನ ಗಮನಹರಿಸಬೇಕೆಂದು ಹೇಳಿದರು. ಈ ಸಭೆಯಲ್ಲಿ ಮಹಾನಗರ ಪಾಲಿಕೆ ಆಯುಕ್ತರಾದ ಜುಬಿನ್ ಮೋಹಪಾತ್ರ, ಸಹಾಯಕ ಆಯುಕ್ತರಾದ ಹಂಪಣ್ಣ ಸಜ್ಜನ. ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕರಾದ ಶರಣಬಸವರಾಜು. ರಾಯಚೂರು ತಾಲ್ಲೂಕು ತಹಶಿಲ್ದಾರ ಸುರೇಶ ವರ್ಮಾ ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ವಿವಿಧ ಇಲಾಖೆಗೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಕುಡಿಯುವ ನೀರಿನ ತೊಂದರೆ ಆಗದಂತೆ ಕ್ರಮ ಕೈಗೊಳ್ಳಿ ಶರಣಗೌಡ ಪಾಟೀಲ್ ಬಯ್ಯಾಪುರ ಸೂಚನೆ



• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ

ಪಟ್ಟಣದ ಕಾಳಾಪುರ ಹತ್ತಿರ ಪಟ್ಟಣದ ಕುಡಿಯುವ ನೀರಿನ ಕೆರೆಯನ್ನು ವಿಧಾನಪರಿಷತ್ ಸದಸ್ಯರಾದ ಸನ್ಮಾನ್ಯ ಶ್ರೀ ಶರಣಗೌಡ ಪಾಟೀಲ್ ಬಯ್ಯಾಪುರ ಸಾಹೇಬರ ವೀಕ್ಷಣೆ ಮಾಡಿದರು ಪುರಸಭೆಯ ಮುಖ್ಯ ಅಧಿಕಾರಿಗಳನ್ನು ಹಾಗೂ ಸಿಬ್ಬಂದಿಗಳನ್ನು ಕರೆಸಿ ಪಟ್ಟಣದ ಜನತೆಗೆ ಕುಡಿಯುವ ನೀರಿನ ಸಮಸ್ಯೆ ಆಗದಂತೆ ಕ್ರಮ ತೆಗೆದುಕೊಳ್ಳಬೇಕು & ಈಗಿನ ನೀರಿನ ಗುಣಮಟ್ಟ ಎಲ್ಲಿವರೆಗೂ ಸ್ಟಾಕ್ ಇದೆ ಅದನ್ನು ಮೀರಿ ನಂತರ ಮತ್ತೆ ನಾನು ಚೀಫ್ ಇಂಜಿನಿಯರ್ ಜೊತೆ ಮಾತನಾಡಿ ಡ್ಯಾಮಿನಿಂದ ನೀರು ಬಿಡಿಸಿ ಕೆರೆ ತುಂಬಿಸಿಕೊಳ್ಳುವುದಕ್ಕೆ ಸೂಚನೆ ನೀಡುತ್ತೇನೆ ಪಟ್ಟಣದ ಜನತೆಗೆ ಕುಡಿಯುವ ನೀರಿನ ಯಾವುದೇ ರೀತಿಯ ತೊಂದರೆ ಆಗದಂತೆ ಜನತೆಗೆ ನೀರನ್ನು ಪೂರೈಸಬೇಕೆಂದು ತಿಳಿಸಿದರು

ಈ ಸಂದರ್ಭದಲ್ಲಿ ನಗರ ಯೋಜನೆ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀ ಭೂಪನಗೌಡ ಕರಡಕಲ್, ಜಿಲ್ಲಾ ಗ್ಯಾರಂಟಿ ಯೋಜನೆ ಅಧ್ಯಕ್ಷರಾದ ಶ್ರೀ ಪಾಮಯ್ಯ ಮುರಾರಿ, ಖಆಅಅ ಬ್ಯಾಂಕ್ ನಿರ್ದೇಶಕರಾದ ಶ್ರೀ ಬಸವರಾಜಗೌಡ ಗಣೇಕಲ್, ಶ್ರೀ ಅಮರೇಶ ಆರ್ ನಾಡಗೌಡ್ರು, ಶ್ರೀ ಸೋಮಶೇಖರ್ ಐದನಾಳ, ಶ್ರೀ ಶರಣಬಸವ ವಾರದ, ಸದಸ್ಯರಾದ ಶ್ರೀ ಪ್ರಮೋದ್ ಕುಲಕರ್ಣಿ, ಮಾಜಿ ಪುರಸಭೆ ಅಧ್ಯಕ್ಷರಾದ ಶ್ರೀ ಅನಿಷಾ ಪಾಶ, ವಿಜಯಕುಮಾರ್ ಹೊಸಗೌಡ್ರು ಮತ್ತು ಮುಖಂಡರು ಹಾಗೂ ಅಧಿಕಾರಿಗಳ & ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು

# ಡೊನೇಷನ್ ವಸೂಲಿ ತಡೆಗೆ ಎಸ್‌ಎಫ್‌ಐ ಆಗ್ರಹ



• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ

ಮೇ 7: ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ನಡೆಯುತ್ತಿರುವ ಡೊನೇಷನ್ ಹಾವಳಿ, ಹೆಚ್ಚುವರಿ ಶುಲ್ಕ ವಸೂಲಿ ಹಾಗೂ ಶಿಕ್ಷಣದ ವ್ಯಾಪಾರೀಕರಣ ಖಂಡಿಸಿ ಭಾರತ ವಿದ್ಯಾರ್ಥಿ ಫೆಡರೇಶನ್ (ಎಸ್‌ಎಫ್‌ಐ ) ಲಿಂಗಸೂರು ತಾಲೂಕು ಸಮಿತಿಯಿಂದ ಗುರುವಾರ ಕ್ಷೇತ್ರ ಶಿಕ್ಷಣಾಧಿಕಾರಿಗಳ (ಬಿಇಓ) ಕಚೇರಿ ಎದುರು ಪ್ರತಿಭಟನೆ ನಡೆಸಿ ಕಛೇರಿ ಪತ್ರಾಂಕಿತ ವ್ಯವಸ್ಥಾಪಕ ಅಮರೇಶ ಅಳ್ಳೊಳ್ಳಿ ಇವರಿಗೆ ಮನವಿ ಸಲ್ಲಿಸಲಾಯಿತು.

ಎಸ್‌ಎಫ್‌ಐ ಕರ್ನಾಟಕ ರಾಜ್ಯ ಸಮಿತಿಯ ರಾಜ್ಯವ್ಯಾಪಿ ಹೋರಾಟದ ಭಾಗವಾಗಿ ನಡೆದ ಪ್ರತಿಭಟನೆಯಲ್ಲಿ ವಿದ್ಯಾರ್ಥಿಗಳು ಹಾಗೂ ಸಂಘಟನೆಯ ಮುಖಂಡರು ಭಾಗವಹಿಸಿ ಖಾಸಗಿ ಶಾಲೆಗಳ ಅಕ್ರಮ ಡೊನೇಷನ್ ವಸೂಲಿಗೆ ತಡೆಹಾಕುವಂತೆ ಆಗ್ರಹಿಸಿದರು.

ಪ್ರತಿಭಟನಾಕಾರರು ಮಾತನಾಡಿ, 2026–27ನೇ ಶೈಕ್ಷಣಿಕ ಸಾಲಿನ ಪ್ರವೇಶಾತಿ ಪ್ರಕ್ರಿಯೆ ಆರಂಭವಾಗಿರುವ ಹಿನ್ನೆಲೆ ಅನೇಕ ಖಾಸಗಿ ಶಿಕ್ಷಣ ಸಂಸ್ಥೆಗಳು ಪಾಲಕರಿಂದ ಡೊನೇಷನ್ ಹಾಗೂ ಹೆಚ್ಚುವರಿ ಶುಲ್ಕವನ್ನು ಮನಬಂದಂತೆ ವಸೂಲಿ ಮಾಡುತ್ತಿವೆ. ಇದರಿಂದ ಬಡ, ಮಧ್ಯಮ ವರ್ಗ, ಹಿಂದುಳಿದ, ದಲಿತ ಹಾಗೂ ಅಲ್ಪಸಂಖ್ಯಾತ ಕುಟುಂಬಗಳ ಮಕ್ಕಳಿಗೆ ಶಿಕ್ಷಣ ಪಡೆಯುವುದು ಕಷ್ಟಕರವಾಗುತ್ತಿದೆ ಎಂದು ಆರೋಪಿಸಿದರು.

ಜಿಲ್ಲಾ ಮಟ್ಟದಲ್ಲಿ 'ಜಿಲ್ಲಾ ಶಿಕ್ಷಣ ರೆಗ್ಯುಲೇಟಿಂಗ್ ಪ್ರಾಧಿಕಾರ' (ಡೇರಾ) ರಚಿಸಿ ಡೊನೇಷನ್ ಹಾವಳಿಗೆ ತಡೆಹಾಕಬೇಕು. ಅಕ್ರಮವಂತಿಗೆ ವಸೂಲಿ ಮಾಡುತ್ತಿರುವ ಶಿಕ್ಷಣ ಸಂಸ್ಥೆಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಖಾಸಗಿ ಶಾಲೆಗಳ ಶುಲ್ಕದ ವಿವರಗಳನ್ನು ಸಾರ್ವಜನಿಕವಾಗಿ ಪ್ರಕಟಿಸಬೇಕು. ಅನಧಿಕೃತ ಟ್ಯೂಷನ್ ಸೆಂಟರ್‌ಗಳನ್ನು ಮುಚ್ಚಬೇಕು ಹಾಗೂ ಸರ್ಕಾರದ ನಿಯಮ ಉಲ್ಲಂಘಿಸುವ ಶಿಕ್ಷಣ ಸಂಸ್ಥೆಗಳ ಮಾನ್ಯತೆ ರದ್ದುಪಡಿಸಬೇಕು ಎಂದು ಆಗ್ರಹಿಸಿದರು.

1983ರ ಶಿಕ್ಷಣ ಕಾಯ್ದೆ ಹಾಗೂ 2009ರ ಶಿಕ್ಷಣ ಹಕ್ಕು ಕಾಯ್ದೆ (ಆರ್‌ಟಿಇ) ಉಲ್ಲಂಘನೆಯಾಗುತ್ತಿದ್ದು, ಕೆಲವು ಶಾಲೆಗಳು ಪ್ರವೇಶ ಪರೀಕ್ಷೆ ನಡೆಸುವುದು, ಶಾಲಾ ಬ್ಯಾಗ್, ನೋಟ್‌ಬುಕ್, ಯೂನಿಫಾರ್ಮ್ ಸೇರಿದಂತೆ ವಿವಿಧ ಸಾಮಗ್ರಿಗಳನ್ನು ಕಡ್ಡಾಯವಾಗಿ ಶಾಲೆಯಲ್ಲಿಯೇ ಖರೀದಿಸುವಂತೆ ಒತ್ತಾಯಿಸುವ ಮೂಲಕ ಶಿಕ್ಷಣವನ್ನು ವ್ಯಾಪಾರವನ್ನಾಗಿ ಮಾಡಿವೆ ಎಂದು ಎಸ್‌ಎಫ್‌ಐ ಆಕ್ರೋಶ ವ್ಯಕ್ತಪಡಿಸಿದೆ.

ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಈ ವೇಳೆಯಲ್ಲಿ ಪ್ರತಿಭಟನೆಯಲ್ಲಿ ಎಸ್‌ಎಫ್‌ಐ ತಾಲೂಕು ಕಾರ್ಯದರ್ಶಿ ಚೆನ್ನಬಸವ ನಿಲೋಗಲ್, ತಾಲೂಕು ಪದಾಧಿಕಾರಿಗಳಾದ ರಮೇಶ ಜೆ, ಮೌನೇಶ ಕಡ್ಡೋಣ, ಮಹಿಬೂಬ್, ಮಹ್ಮದ್ ಅಲಿ ಇದ್ದರು.

# ಜಿಲ್ಲಾಡಳಿತದಿಂದ ಮೇ.10ರಂದು ಹೇಮರಡ್ಡಿ ಮಲ್ಲಮ್ಮ ಜಯಂತಿ

• ಮಲ್ಲಮ್ಮ ನುಡಿ ವಾರ್ತೆರಾಯಚೂರು

ಮೇ 7: ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಹೇಮರಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮವು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಮೇ.10ರ ಬೆಳಿಗ್ಗೆ 10:30ಕ್ಕೆ ಹಮ್ಮಿಕೊಳ್ಳಲಾಗಿದೆ.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟನೆ ನೆರವೇರಿಸುವರು.

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು. ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಸಿದ್ಧಾರ್ಥ ಬುದ್ಧ ವಿಹಾರ ಸಮಿತಿಯ ಅಧ್ಯಕ್ಷ ಆರ್. ರವಿಕುಮಾರ ರಾಂಪೂರು, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಸು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಬಾಗಿಯಾಗಲಿದ್ದಾರೆ. ರಾಯಚೂರು ತಾಲೂಕಿನ ಶಕ್ತಿನಗರದ ಕೆಪಿಸಿಎಲ್, ಪಂ.ಜಾತಿ/ಪಂ.ವರ್ಗದ ನೌಕರರ ಸಂಘದ ಅಧ್ಯಕ್ಷ ಗೌತಮ ಕಟ್ಟಿಮನಿ ಅವರು ಭಗವಾನ್ ಬುದ್ಧರ ಜಯಂತಿ ಕುರಿತು ಉಪನ್ಯಾಸ ನೀಡಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಲ್ಕು ವರ್ಷದ ಡಿಪ್ಲೋಮಾ ಕೋರ್ಸುಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.7– ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸರ್ಕಾರಿ ಉಪಕರಣಾಗಾರ ಮತ್ತು

ತರಬೇತಿ ಕೇಂದ್ರ (ಜಿಟಿಟಿಸಿ) ಕಲಬುರಗಿ ಕೇಂದ್ರದಲ್ಲಿ, 3+1 ವರ್ಷದ ಅವಧಿಯ, ನಾಲ್ಕು ವಿವಿಧ ಡಿಪ್ಲೊಮಾ ಕೋರ್ಸ್ಗಳಿಗೆ ಪ್ರವೇಶ ಪ್ರಕ್ರಿಯೆ ಪ್ರಾರಂಭವಾಗಿದೆ ಎಂದು ಜಿಟಿಟಿಸಿ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇದಧೇ 2026–27ನೇ ಸಾಲಿನ ಎಸ್‌ಎಸ್‌ಎಲ್ ಸಿ ಹಾಗೂ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಎ.ಐ.ಸಿ.ಟಿ.ಇ ಅನುಮೋದಿತ ಡಿಪ್ಲೊಮಾ ಇವಟೂಲ್ ಅಂಡ್ ಡೈ ಮೇಕಿಂಗ್, ಡಿಪ್ಲೋಮಾ ಇನ್ ಪ್ರಿಸಿಷನ್ ಮ್ಯಾನುಫ್ಯಾಕ್ಚರಿಂಗ, ಡಿಪ್ಲೋಮಾ ಇನ್

ಇಲೆಕ್ಟಿಕಲ್ & ಇಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ ಮತ್ತು ಡಿಪ್ಲೋಮಾ ಇನ್ ಮೆಕಾಟ್ರಾನಿಕ್ಸ್ ಕೋರ್ಸಗಳಿಗೆ ಪ್ರವೇಶಗಳು ನೀಡಲಾಗುತ್ತಿದೆ.

ಅಸಕ್ತರು ಆನ್–ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶವಿದ್ದು, ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ 10–05–2026

ಆಗಿರುತ್ತದೆ. ಇಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನದ ಜೊತೆಗೆ 100% ಪ್ಲೇಸ್ಮೆಂಟ ನೀಡಲಾಗುತ್ತದೆ. ಐಟಿಐ ಹಾಗೂ ಪಿಯುಸಿ ಪಾಸಾದ ವಿದ್ಯಾರ್ಥಿಗಳು ನೇರವಾಗಿ 2ನೇ ವರ್ಷಕ್ಕೆ ಪ್ರವೇಶ ಪಡೆಯಲು ಅರ್ಹರಾಗಿರುತ್ತಾರೆ. ಹೆಚ್ಚಿನ ಮಾಹಿತಿಗಾಗಿ ಮೊ: 7795591601, 7892942594, 9900173964. ಮತ್ತು 08472–295163. ಸಂಖ್ಯೆಯನ್ನು ಸಂಪರ್ಕಿಸುವಂತೆ ಅವರು ತಿಳಿಸಿದ್ದಾರೆ.

# ಐಟಿಐ ಪ್ರವೇಶ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ 07 : ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ಕೃಷ್ಣಾಪುರ, ಬಿಜಾಪುರ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆದಲ್ಲಿ 2026ನೇ ಸಾಲಿನ ಐಟಿಐ ಪ್ರವೇಶ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಸುರಪುರ ಸರ್ಕಾರಿ ಕೈಗಾರಿಕೆ ತರಬೇತಿ ಸಂಸ್ಥೆ ಪ್ರಾಂಶುಪಾಲರು ಅವರು ತಿಳಿಸಿದ್ದಾರೆ.

ಸಂಸ್ಥೆಯಲ್ಲಿರುವ ಲಭ್ಯವಿರುವ ವೃತ್ತಿಗಳು ಎಲೆಕ್ಟ್ರಿಷಿಯನ್ (ಎನ್‌ಸಿವಿಟಿ) 2 ವರ್ಷ ಅವಧಿ ಇದೆ. ಫೀಟರ್ (ಎನ್‌ಸಿವಿಟಿ) 2 ವರ್ಷ ಅವಧಿ ಇದೆ. ಎಲೆಕ್ಟ್ರಾನಿಕ್ಸ್ ಮೆಕ್ಯಾನಿಕ್ (ಎನ್‌ಸಿವಿಟಿ) 2 ವರ್ಷ ಅವಧಿ ಇದೆ. ಮೆಕ್ಯಾನಿಕ್ ಮೋಟಾರ್ ವಾಹನ (ಎಮ್‌ಎಮ್‌ವಿ) (ಎನ್‌ಸಿವಿಟಿ) 2 ವರ್ಷ ಅವಧಿ ಇರುತ್ತದೆ. ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಸುರಪುರ (ಕೃಷ್ಣಾಪೂರ/ಬಿಜಾಪೂರ) ದಲ್ಲಿ ಪ್ರವೇಶಕ್ಕೆ ಮೆರಿಟ್ ಕಂ ರಿಜರ್ವೇಶನ್ ಆಧಾರದ ಮೇಲೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ. ಅರ್ಹ ಇಚ್ಛೆಯುಳ್ಳ (ಎಸ್.ಎಸ್.ಎಲ್.ಸಿ ಉತ್ತೀರ್ಣರಾದ) ಅಭ್ಯರ್ಥಿಗಳು ಪ್ರವೇಶ ಪಡೆಯಲು ಆನ್‌ಲೈನ್ ತಿತಿತಿ.ಛಿಣಜ.ಇಚಿಡಿಟಿಚಿಣಚಿಇಚಿ. ರಂತ.ಬಿಟಿ ನಲ್ಲಿ 2026ರ ಮೇ 8ರ ಒಳಗೆ ಅರ್ಜಿಸಲ್ಲಿಸಬೇಕು, ಮಹಿಳೆಯರಿಗೆ ಉಚಿತ ಪ್ರವೇಶ ಇರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಮೊ.ನಂ.9900544676, 7026729493,9513066654,9019337464ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾ ಆರೋಗ್ಯ ಇಲಾಖೆ ವಿವಿಧ ಹುದ್ದೆಗೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆರಾಯಚೂರು

ಮೇ 7: ಇಲ್ಲಿನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು, ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ 2025–26 ನೇ ಸಾಲಿಗೆ ಮಂಜೂರಾಗಿ ಖಾಲಿ ಇರುವ ಹುದ್ದೆಗಳು ತಾಲೂಕಾ ಕಾರ್ಯಕ್ರಮ ವ್ಯವಸ್ಥಾಪಕರು–01ಹುದ್ದೆ, ಪಂಚಕರ್ಮ ಥೆರಪಿಸ್ಟ್–01 ಹುದ್ದೆ ಆಯುಷ್ ವಿಭಾಗ, ಎಪಿಡಾಮೊಲಿಸ್ಟ್–01 ಹುದ್ದೆ, ಕಮ್ಯೂನಿಟಿ ನರ್ಸ್–01 ಹುದ್ದೆ ಡಿ.ಎಮ್.ಹೆಚ್.ಪಿ. ಕಾರ್ಯಕ್ರಮ, ಆಪ್ತಸಮಾಲೋಚಕರು–01 ಹುದ್ದೆ ಡಿ.ಎಮ್.ಹೆಚ್.ಪಿ. ಕಾರ್ಯಕ್ರಮ, ಆಪ್ತ ಸಮಾಲೋಚಕರು–01ಹುದ್ದೆ ಎನ್.ಸಿ.ಡಿ. ವಿಭಾಗ, ಲ್ಯಾಬ್ ಟೆಕ್ನೀಷಿಯನ್–01 ಎನ್.ಟಿ.ಇ.ಪಿ. ಕಾರ್ಯಕ್ರಮ, ಆಡಿಯೋಲಾಜಿಸ್ಟ್–01 ಹುದ್ದೆ, ಆಡಿಯೋಮೆಟ್ರೀಕ್ ಅಸಿಸ್ಟೆಂಟ್–01, ಇನ್‌ಸ್ಟ್ರಕ್ಟರ್ ಫಾರ್ ಹಿಯರಿಂಗ್ ಇಂಪ್ಯಾರಿಡ್ ಚಿಲ್ಡ್ರನ್–01, ಜಿಲ್ಲಾ ಡಿ.ಇ.ಐ.ಸಿ. ವ್ಯವಸ್ಥಾಪಕರು–01 ಹುದ್ದೆ, ಒಟ್ಟು 11 ಹುದ್ದೆ ಭರ್ತಿ ಮಾಡಿಕೊಳ್ಳಲು ರಾಷ್ಟ್ರೀಯ ಆರೋಗ್ಯ ಅಭಿಯಾನದ ಮಾರ್ಗಸೂಚಿ ಹಾಗೂ ಷರತ್ತು ಮತ್ತು ನಿಬಂಧನೆಗಳಿಗೆ ಅನುಸಾರ ಗುತ್ತಿಗೆ ಆಧಾರದ ಮೇಲೆ ಮೇರಿಟ್ ಕಮ್ ರೋಷ್ಟರ್ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ದಿನಾಂಕ: 11.05.2026 ದಿಂದ 18.05.2026 ರ ವರೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು. ಸದರಿ ಹುದ್ದೆಗಳಿಗೆ ನೇರ ಸಂದರ್ಶನದ ದಿನಾಂಕವನ್ನು ತಿಳಿಸಲಾಗುವುದೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೇ 8 ರಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.7– ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗದ ವ್ಯಾಪ್ತಿಯ ಈ ಕೆಳಕಂಡ ಫೀಡರಗಳ ವ್ಯಾಪ್ತಿಯ ಪ್ರದೇಶಗಳಲ್ಲಿ ಇದೇ ಮೇ 8 ರಂದು ಬೆಳಿಗ್ಗೆ 9 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ನಿರ್ವಹಣಾ

ಕಾರ್ಯಕೈಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ಇದಕ್ಕೆ ಸಹಕರಿಸಬೇಕೆಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು(ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

11ಕೆ. ವಿ ಅಕ್ಕಮಹಾದೇವಿ ಕಾಲೋನಿ ಫೀಡರ: ಅಕ್ಕಮಹಾದೇವಿ ಕಾಲೋನಿ, ಎಲ್ ಐ ಜಿ, ಹೆಚ್.ಐ.ಜಿ. ಏರೀಯಾ, ಗ್ರೀನ್ ಪಾರ್ಕ, ಸುತ್ತ ಮುತ್ತಲಿನ ಪ್ರದೇಶಗಳು.

11ಕೆ. ವಿ ಪ್ರಶಾಂತ ನಗರ ಫೀಡರ್: ನಾಯ್ಡು ಲೇಔಟ್, ಜಿ.ಡಿ.ಎ ರಾಜಾಪೂರ ಬಂಜಾರಾ ಲೇಔಟ್, ಶಹಾಬಾದ್ ಶಕ್ತಿ ನಗರ, ಮಾತಾ ಮಾಣಿಕೇಶ್ವರಿ ಕಾಲೋನಿ, ನೃಪತುಂಗಾ ಕಾಲೋನಿ, ಕೆನ್‌ಬ್ರಿಡ್ಜ ಶಾಲೆ, ಮತ್ತು ಹಿಂದುಗಡೆ ಏರಿಯಾ, ಓಕಳಿ ಕ್ಯಾಂಪ್ ಸರಕಾರಿ ಡಿಗ್ರಿಕಾಲೇಜು, ಜಯ ನಗರ, ಪ್ರಶಾಂತ ನಗರ ಎ, ಪ್ರಶಾಂತ ನಗರ ಬಿ, ಮತ್ತು ಸುತ್ತಮುತ್ತಲಿನ ಪ್ರದೇಶಗಳು.

# ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಶುಲ್ಕ ಮರು ಪಾವತಿಗೆ ಮೇ16ಕ್ಕೆ ವಿಸ್ತರಣೆ

• ಮಲ್ಲಮ್ಮ ನುಡಿ ವಾರ್ತೆರಾಯಚೂರು

ಜಿಲ್ಲಾ ಹಿಂದುಳಿದ ವರ್ಗಗಳ ಇಲಾಖೆಯು 2026–27ನೇ ಸಾಲಿನಲ್ಲಿ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ಓದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1ರ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಂದ, ಶುಲ್ಕ ಮರು ಪಾವತಿ ಯೋಜನೆಯ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ 16–05–2026 ರವರೆಗೆ ವಿಸ್ತರಿಸಿದೆ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ಓದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1ರ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳು ಇದರ ಸದುಪಯೋಗ ಪಡಿದುಕೊಳ್ಳಬೇಕೆಂದು ಜಿಲ್ಲಾ ಹಿಂದುಳಿದ ವರ್ಗಗಳ ಕಣ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೇ 12 ರಿಂದ ಡಿ.ಇಎಲ್.ಇಡಿ ಪರೀಕ್ಷೆ : ನಿಷೇಧಾಜ್ಞೆ ಜಾರಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಜಿಲ್ಲೆಯಲ್ಲಿ ಮೇ 12 ರಿಂದ ಮೇ 18 ವರೆಗೆ ಡಿ.ಇಎಲ್.ಇಡಿ ಪರೀಕ್ಷೆಗಳು ನಡೆಯಲಿದ್ದು, ಈ ಪರೀಕ್ಷೆಗಳು ಸುಗಮ ಹಾಗೂ ಶಾಂತಿಯುತವಾಗಿ ನಡೆಯುವ ಉದ್ದೇಶದಿಂದ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿ ಪ್ರದೇಶದಲ್ಲಿ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ 2023 ರ ಕಲಂ 163 ಅನ್ವಯ ನಿಷೇಧಾಜ್ಞೆಯನ್ನು ಜಾರಿಗೊಳಿಸಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಆದೇಶ ಹೊರಡಿಸಿದ್ದಾರೆ.

ಜಿಲ್ಲೆಯ ಮುನಿರಾಬಾದ ಡಯಟ್‌ನ ಪಿ.ಎಸ್.ಟಿ.ಇ ವಿಭಾಗದ ಪರೀಕ್ಷಾ ಕೇಂದ್ರದಲ್ಲಿ ನಿಗದಿತ ದಿನಾಂಕಗಳಂದು ?ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಹಾಗೂ ಮಧ್ಯಾಹ್ನ 2 ಗಂಟೆಯಿಂದ ಸಂಜೆ 5 ಗಂಟೆವರೆಗೆ ಪರೀಕ್ಷೆಗಳು ನಡೆಯಲಿವೆ.

ನಿಷೇಧಾಜ್ಞೆ ಆದೇಶದನ್ವಯ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಎಸ್.ಟಿ.ಡಿ., ಮೊಬೈಲ್, ಪೇಜರ್, ಜರಾಕ್ಸ್, ಟೈಪಿಂಗ್ ಮುಂತಾದವುಗಳನ್ನು ನಿಷೇಧಿಸಲಾಗಿದೆ. ಪರೀಕ್ಷಾ ಕೇಂದ್ರಗಳ ಹಾಗೂ ನಿಯೋಜಿತ ಶಿಕ್ಷಕರನ್ನು, ಜಾಗೃತ ದಳದವರನ್ನು ಹೊರತುಪಡಿಸಿ ಇನ್ನುಳಿದವರಿಗೆ ಪರವಾನಿಗೆ ಇಲ್ಲದೆ ಪರೀಕ್ಷಾ ಕೇಂದ್ರಗಳಲ್ಲಿ ಪ್ರವೇಶ ಮಾಡುವುದನ್ನು ನಿಷೇಧಿಸಿದೆ. ಪರೀಕ್ಷಾ ಕೇಂದ್ರಗಳ ಸುತ್ತಲೂ ಜನರು ಮಾರಕಾಸ್ತ್ರಗಳನ್ನು ಹಿಡಿದು ತಿರುಗಾಡುವುದನ್ನು ನಿಷೇಧಿಸಿದೆ. ಈ ಆದೇಶವು ಮದುವೆ, ಶವ ಸಂಸ್ಕಾರಗಳು ಹಾಗೂ ಇನ್ನಿತರ ಧಾರ್ಮಿಕ ಕಾರ್ಯಕ್ರಮಗಳಿಗೆ ಅನ್ವಯವಾಗುವುದಿಲ್ಲ ಎಂದು ಜಿಲ್ಲಾಧಿಕಾರಿಗಳು ಆದೇಶದಲ್ಲಿ ತಿಳಿಸಿದ್ದಾರೆ.

# ಪಡಿತರ ಚೀಟಿದಾರರಿಗೆ ಮೇ ತಿಂಗಳಲ್ಲೇ ಎರಡು ತಿಂಗಳ ಅಕ್ಕಿ ವಿತರಣೆ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಕೇಂದ್ರ ಸರ್ಕಾರದ ಸೂಚನೆಯಂತೆ ಮೇ ಹಾಗೂ ಜೂನ್ ಮಾಹೆಗಳ ಎನ್.ಎಫ್.ಎಸ್.ಎ ಅಕ್ಕಿ ದಾಸ್ತಾನನ್ನು ಒಟ್ಟಿಗೆ ಮೇ ಮಾಹೆಯಲ್ಲಿ ಹಂಚಿಕೆ ಮಾಡಲು ನಿರ್ಧರಿಸಲಾಗಿದ್ದು, ಅದರಂತೆ ಜಿಲ್ಲೆಯ ಪಡಿತರ ಚೀಟಿದಾರರಿಗೆ ಎರಡು ಮಾಹೆಗಳ ಅಕ್ಕಿಯನ್ನು ಒಂದೇ ಬಾರಿಗೆ ಹಂಚಿಕೆ ಮಾಡಲಾಗುವುದು.

ಅಂತ್ಯೋದಯ ಕಾರ್ಡು ಹೊಂದಿದ ಪ್ರತಿ ಪಡಿತರ ಚೀಟಿಗೆ ಒಂದು ತಿಂಗಳಿಗೆ 35 ಕೆ.ಜಿ ಯಂತೆ ಒಟ್ಟು 70 ಕೆ.ಜಿ ಅಕ್ಕಿ ಹಾಗೂ ಬಿ.ಪಿ.ಎಲ್ ಕಾರ್ಡು ಹೊಂದಿದ ಪ್ರತಿ ಸದಸ್ಯರಿಗೆ 5 ಕೆ.ಜಿ ಯಂತೆ ಪಡಿತರ ಚೀಟಿಯಲ್ಲಿನ ಸದಸ್ಯರ ಸಂಖ್ಯೆಗೆ ಅನುಗುಣವಾಗಿ ಪ್ರತಿ ಸದಸ್ಯರಿಗೆ 10 ಕೆ.ಜಿ ಯಂತೆ ಅಕ್ಕಿ ವಿತರಣೆ ಮಾಡಲಾಗುವುದು.

ಮೇ ಹಾಗೂ ಜೂನ್ ತಿಂಗಳ ಪಡಿತರವನ್ನು ಒಟ್ಟಿಗೆ ಪಡೆಯುವ ಸಂದರ್ಭದಲ್ಲಿ, ಕಾರ್ಡುದಾರರು ತಾಂತ್ರಿಕ ದಾಖಲೀಕರಣಕ್ಕಾಗಿ ಎರಡು ಬಾರಿ ಬಯೋಮೆಟ್ರಿಕ್ (ಹೆಬ್ಬೆಟ್ಟಿನ ಗುರುತು) ನೀಡುವುದು ಕಡ್ಡಾಯವಾಗಿದೆ. ಎರಡು ಬಾರಿ ಬೆರಳು ಮುದ್ರೆ ನೀಡಿದ ನಂತರವಷ್ಟೇ ಪೂರ್ಣ ಪ್ರಮಾಣದ ಧಾನ್ಯ ಲಭ್ಯವಾಗಲಿದೆ. ಪಡಿತರ ಚೀಟಿ–ದಾರರು ಮೇ ಮಾಹೆಯಲ್ಲಿಯೇ ಎರಡು ತಿಂಗಳ ಅಕ್ಕಿಯನ್ನು ಪಡೆದುಕೊಳ್ಳಬಹುದು ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೇ ೦೯ ರಂದು 'ಕೇಳುಕಥೆ' ಸಾಹಿತ್ಯ ಸಂಭ್ರಮ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ. 7– ಸಾಹಿತ್ಯ ಅಕಾಡೆಮಿ ಮತ್ತು ಆಕಾಶವಾಣಿ ಕಲಬುರಗಿ ಸಹಯೋಗದಲ್ಲಿ ಮೇ 9ರ ಶನಿವಾರ ಬೆಳಿಗ್ಗೆ 11 ಗಂಟೆಗೆ ಆಕಾಶವಾಣಿ ಕಲಬುರ್ಗಿ ಕೇಂದ್ರದ ಸ್ಟುಡಿಯೋದಲ್ಲಿ 'ಕೇಳುಕಥೆ' ಸಾಹಿತ್ಯ ವೇದಿಕೆ ಕಾರ್ಯಕ್ರಮ ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ಸಾಹಿತಿಗಳಾದ ಎಚ್. ಟಿ. ಪೋತೆ, ಸಿದ್ಧರಾಮ ಹೊನ್ಕಲ್, ಸಂಧ್ಯಾ ಹೊನಗುಂಟಿಕರ ಮತ್ತು ಮಹಾಂತೇಶ್ ನವಲಕಲ್ 'ಕೇಳುಕಥೆ' ಪ್ರಸ್ತುತಪಡಿಸಲಿದ್ದಾರೆ. ಸಾಹಿತ್ಯ ಅಕಾಡೆಮಿಯ ಸಾಮಾನ್ಯ ಸಲಹಾ ಸಮಿತಿ ಸದಸ್ಯ ಬಸವರಾಜ ಸಾದರ ಪ್ರಾಸ್ತಾವಿಕ ಹಾಗೂ ಸಮಾರೋಪ ನುಡಿಗಳನ್ನಾಡಲಿದ್ದಾರೆ. ಆಕಾಶವಾಣಿ ಕಲಬುರ್ಗಿ ಕೇಂದ್ರದ ತಾಂತ್ರಿಕ ವಿಭಾಗದ ಮುಖ್ಯಸ್ಥ ಬಿ. ಗೋಪಾಲ ನಾಯಕ ಸ್ವಾಗತಿಸಲಿದ್ದು, ಕಾರ್ಯಕ್ರಮ ಮುಖ್ಯಸ್ಥ ಬಿ. ಸಿದ್ದಣ್ಣ ವಂದಿಸಲಿದ್ದಾರೆ. ಸಾಹಿತ್ಯಾಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಕೋರಲಾಗಿದೆ.

# ಜೆಡಿಎಸ್ ಪದಾಧಿಕಾರಿಗಳ ನೇಮಕ




• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಿಲ್ಲಾ ಜೆಡಿಎಸ್ ಕಛೇರಿಯಲ್ಲಿ ಜಿಲ್ಲಾಧ್ಯಕ್ಷ ಮೀನಳ್ಳಿ ತಾಯಣ್ಣ ನೇತೃತ್ವದಲ್ಲಿ ತಾಲ್ಲೂಕು ಅಧ್ಯಕ್ಷರುಗಳನ್ನು ನೂತನವಾಗಿ ಆಯ್ಕೆ ಮಾಡಿ ಮತ್ತು ನೇಮಕಾತಿ ಆದೇಶ ಪತ್ರವನ್ನು ವಿತರಿಸುವ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು.

ಕಂಪ್ಲಿ ವಿಧಾನಸಭಾ ಕ್ಷೇತ್ರಕ್ಕೆ ಮರು ಆಯ್ಕೆಯಾಗಿರುವ ಏಳ್ಕೆ ಮೇಘರಾಜ ರವರು, ಮತ್ತು ಸಂಡೂರು ವಿಧಾನ ಸಭಾ ಕ್ಷೇತ್ರ–ಕ್ಕೆ ನೂತನ ತಾಲ್ಲೂಕು ಅಧ್ಯಕ್ಷರನ್ನಾಗಿ ಹೊಸಿಗೇರಪ್ಪರವರು, ಸಿರುಗುಪ್ಪ ತಾಲ್ಲೂಕು ಅಧ್ಯಕ್ಷರನ್ನಾಗಿ ಶಿವನಾರಾಯಣರವರು, ಜಿಲ್ಲಾ ಉಪಾಧ್ಯಕ್ಷರನ್ನಾಗಿ ರಾಮಾಂಜೇನಿಯವರನ್ನು, ಹಾಗೂ ಕಂಪ್ಲಿ ವಿಧಾನಸಭಾ ಕ್ಷೇತ್ರದ ಯುವ ಘಟಕದ ಅಧ್ಯಕ್ಷರನ್ನಾಗಿ ಭರತ್ ಕುಮಾರ್ ರವರನ್ನು ಆಯ್ಕೆ ಮಾಡಿ ಎಲ್ಲಾರಿಗೂ ಆದೇಶ ಪತ್ರವನ್ನು ವಿತರಿಸಲಾಯಿತು, ಮತ್ತು ಮುಂದೆ ಬರುವ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣೆಗಳ ಬಗ್ಗೆ ಚರ್ಚೆ ನಡೆಸಲಾಯಿತು. ಈ ಸಂದರ್ಭದಲ್ಲಿ ರಾಜ್ಯ ಮಹಾ ಪ್ರಧಾನ ಕಾರ್ಯದರ್ಶಿ ಸೋಮಪ್ಪ ಕುರೆಕುಪ್ಪ, ಯಲ್ಲನಗೌಡ, ವಿಜಯ್ ಕುಮಾರ್ ಮಧುರೈ ಜಿಲ್ಲಾ ಕಾಯ9ಧ್ಯಕ್ಷರು, ರಾಮಾಂಜೇನಿ ಉಪಾಧ್ಯಕ್ಷರು, ಬಾಷಾ ಉಪಾಧ್ಯಕ್ಷರು, ಮಲ್ಲಿಕಾರ್ಜುನ ಉಪಾಧ್ಯಕ್ಷರು, ಮಹಿಳಾ ಘಟಕದ ಅಧ್ಯಕ್ಷರಾದ ಪುಷ್ಪಾ.ಜೆ, ಶಿವಗಂಗಾ, ವಿಜಯ, ಶಮೀಮ್ ಬಾನು, ರಮಾದೇವಿ ಮತ್ತು ಪಕ್ಷದ ಇತರ ಕಾಯ9ಕತ9ರು ಭಾಗವಹಿಸಿದ್ದರು.

# ಅಕ್ರಮ ಮದ್ಯ ಮಾರಾಟ ನಿಷೇಧ ಮಾಡುವಂತೆ ಮತ್ತು ಢಾಬಾ ಬಂದ್‌ಗೆ ಮಹಿಳೆಯರ ಮನವಿ

• ಮಲ್ಲಮ್ಮ ನುಡಿ ವಾರ್ತೆ ಕುಕನೂರು



ತಾಲೂಕಿನ ಸಿದ್ನೇಕೊಪ್ಪ ಗ್ರಾಮದಲ್ಲಿ ಅಕ್ರಮ ಮದ್ಯ ಮಾರಾಟ ನಿಷೇಧಿಸಿ ಢಾಬಾ ಬಂದ್ ಮಾಡುವಂತೆ ಆಗ್ರಹಿಸಿ ಗ್ರಾಮ ಮಹಿಳೆಯರು ಗ್ರೇಡ್–2 ತಹಸೀಲ್ದಾರ್ ಅವರಿಗೆ ಬುಧವಾರ ಮನವಿ ಪತ್ರ ಸಲ್ಲಿಸಿದರು. ಪ್ರತಿಭಟನೆ ನಡೆಸಿದ ಮಹಿಳೆಯರು, ತಹಸೀಲ್ದಾರ್ ಮುರಳೀಧರ ಕುಲಕರ್ಣಿ ಅವರ ಮೂಲಕ ಅಬಕಾರಿ ಇಲಾಖೆಗೆ ಮನವಿ ಸಲ್ಲಿಸಿ ಮಾತನಾಡಿದ ಅವರು, ಗ್ರಾಮದಲ್ಲಿ ಅಕ್ರಮ ಮದ್ಯ ಮಾರಾಟ ಹೆಚ್ಚಾಗಿದ್ದು, ಇದರಿಂದ ಕುಟುಂಬಗಳಲ್ಲಿ ಅಶಾಂತಿ ಉಂಟಾಗುತ್ತಿದೆ ಎಂದು ದೂರಿದರು. ಮದ್ಯಪಾನದ ಪರಿಣಾಮವಾಗಿ ಗೃಹಕಲಹಗಳು ಹೆಚ್ಚಾಗಿ, ಕೆಲವರು ಮನೆಯ ಆಭರಣಗಳನ್ನು ಮಾರಾಟ ಮಾಡಿ ಮದ್ಯ ಸೇವಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಯುವಕರ ಮೇಲೆ ದುಷ್ಪರಿಣಾಮ ಬೀರಿದ್ದು, ಕೆಲವು ಆತ್ಮಹತ್ಯೆ ಘಟನೆಗಳೂ ನಡೆದಿವೆ ಎಂದು ಮಹಿಳೆಯರು ಆಕ್ರೋಶ ವ್ಯಕ್ತಪಡಿಸಿದರು. ಪಕ್ಕದ ಗ್ರಾಮಗಳಲ್ಲಿ ಅಕ್ರಮ ಮದ್ಯ ಮಾರಾಟಕ್ಕೆ ತಡೆ ಹಾಕಿರುವ ಹಿನ್ನೆಲೆ, ಅಲ್ಲಿನ ಜನರು ಸಿದ್ನೇಕೊಪ್ಪಕ್ಕೆ ಬಂದು ಮದ್ಯ ಸೇವಿಸುತ್ತಿರುವುದರಿಂದ ಸಮಸ್ಯೆ ಮತ್ತಷ್ಟು ಗಂಭೀರವಾಗಿದೆ ಎಂದು ಹೇಳಿದರು.

ತಕ್ಷಣವೇ ಅಕ್ರಮ ಮದ್ಯ ಮಾರಾಟ ಸಂಪೂರ್ಣ ನಿಷೇಧಿಸಿ, ಢಾಬಾಗಳನ್ನು ಬಂದ್ ಮಾಡಿ ಗ್ರಾಮವನ್ನು ಮದ್ಯಮುಕ್ತವಾಗಿಸಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಮನವಿ ಸ್ವೀಕರಿಸಿದ ತಹಸೀಲ್ದಾರ್, ಸಂಬಂಧಿತ ಇಲಾಖೆಗೆ ವಿಷಯ ತಿಳಿಸಿ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಉಪಾಧ್ಯಕ್ಷ ಅಂದಪ್ಪ ಕೋಳೂರು, ಸುವರ್ಣ, ಸಿದ್ದಮ್ಮ, ಚೆನ್ನಮ್ಮ, , ಲಕ್ಷ್ಮಮ್ಮ, ದೇವಕ್ಕ ಸೇರಿದಂತೆ ಹಲವು ಮಹಿಳೆಯರು ಉಪಸ್ಥಿತರಿದ್ದರು.

# ಹಲವು ಬೇಡಿಕೆಗಳ ಈಡೇರಿಕೆಗೆ ಬ್ರಾಹ್ಮಣ ಮಹಾಸಭಾ ಮನವಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಸಿಇಟಿ ಪರೀಕ್ಷಾ ಕೇಂದ್ರಗಳಲ್ಲಿ ವಿದ್ಯಾರ್ಥಿಗಳ ಮೇಲಿದ್ದ ಜನಿವಾರ ತಗಿಸಿ ಕತ್ತರಿಸಿದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಹಾಗೂ ಘಟನೆ ನಡೆದ ಎರಡು ಶಿಕ್ಷಣ ಸಂಸ್ಥೆಗಳ ಅನುಮತಿ ರದ್ದು ಮಾಡಬೇಕು ಎಂದು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಜಿಲ್ಲಾ ಘಟಕ ಆಗ್ರಹಿಸಿದೆ. ಘಟಕದ ಪದಾಧಿಕಾರಿಗಳು ಗುರುವಾರ ಜಿಲ್ಲಾಧಿಕಾರಿ ಡಾ. ಸುರೇಶ ಇಟ್ನಾಳ ಅವರಿಗೆ ಮನವಿ ಸಲ್ಲಿಸಿ 'ಬ್ರಾಹ್ಮಣ ಸಮಾಜದ ಜನರ ಭಾವನೆಗಳಿಗೆ ಧಕ್ಕೆ ತಂದವರ ವಿರುದ್ಧ ಕ್ರಮ ಕೈಗೊಳ್ಳಬೇಕು. ಜಿಲ್ಲಾಕೇಂದ್ರದಲ್ಲಿ ಬ್ರಾಹ್ಮಣ ಸಮಾಜಕ್ಕೆ ಪ್ರತ್ಯೇಕ ಸ್ಮಶಾನದ ಜಾಗ ಮಂಜೂರು ಮಾಡಬೇಕು. ಗವಿಸಿದ್ಧೇಶ್ವರ ಮಠದ ಹಿಂಭಾಗದಲ್ಲಿ ಮೃತದೇಹ ಸುಡುವ ಪದ್ಧತಿಯಿರುವ ಸಮಾಜದವರ ಅಂತ್ಯಕ್ರಿಯೆ ನಡೆ–ಯುತ್ತಿದೆ. ಇದರಿಂದಾಗಿ ಬ್ರಾಹ್ಮಣ ಸಮುದಾಯದ ವಿಧಿವಿಧಾನದಂತೆ ಅಂತಿಮ ಸಂಸ್ಕಾರ ನಡೆಸಲು ಸಾಧ್ಯವಾಗುತ್ತಿಲ್ಲ. ಹಲವು ಬಾರಿ ಮೂರ್ನಾಲ್ಕು ಅಂತ್ಯಕ್ರಿಯೆಗಳು ನಡೆದಾಗ ಸರತಿಯಲ್ಲಿ ಕಾಯುವ ಪರಿಸ್ಥಿತಿ ನಿರ್ಮಾಣವಾದ ಉದಾಹರಣೆಗಳೂ ಇವೆ. ಆದ್ದರಿಂದ ಆಸಕ್ತಿ ವಹಿಸಿ ನಮ್ಮ ಸಮುದಾಯದ ಸ್ಮಶಾನಕ್ಕೆ ಒಂದು ಎಕರೆ ಭೂಮಿ ಮಂಜೂರು ಮಾಡಬೇಕು' ಎಂದು ಆಗ್ರಹಿಸಿದರು.

ಈಗಿರುವ ಸ್ಮಶಾನದ ಭೂಮಿಯ ಅಭಿವೃದ್ಧಿಗೆ ಬೇಕಾದ ಕ್ರಮ ವಹಿಸಲಾಗುವುದು. ಸಮುದಾಯದ ಜನರಿಗೆ ಅನುಕೂಲ ಮಾಡಿಕೊಡಲಾಗುತ್ತದೆ ಎಂದು ಜಿಲ್ಲಾಧಿಕಾರಿ ಭರವಸೆ ನೀಡಿದರು. ಮಹಾಸಭಾದ ಜಿಲ್ಲಾ ಚುನಾಯಿತಿ ಪ್ರತಿನಿಧಿ ಗುರುರಾಜ ಎನ್. ಜೋಶಿ, ರಾಘವೇಂದ್ರಸ್ವಾಮಿಗಳ ಇಲ್ಲಿನ ಮಠದ ವ್ಯವಸ್ಥಾಪಕ ಜಗನ್ನಾಥಚಾರ್ಯ ಹುನಗುಂದ, ಸಮುದಾಯದ ಮುಖಂಡರಾದ ಕೆ.ಜಿ. ಕುಲಕರ್ಣಿ, ವೇಣುಗೋಪಾಲ ಆಚಾರ್ ಜಹಗೀರದಾರ್, ರಾಜೇಂದ್ರ ಆಚಾರ್ ಬಿಸಿರಳ್ಳಿ, ಸುಶೀಲೇಂದ್ರ ದೇಶಪಾಂಡೆ, ವಿಶ್ವನಾಥ್ ದೀಕ್ಷಿತ್, ಶ್ರೀನಿವಾಸ ಜೋಶಿ, ರವಿ ಪುರೋಹಿತ್, ಪ್ರಲ್ಹಾದ ಬನ್ನಿಗೋಳ, ಆನಂದ್, ರಾಮಮೂರ್ತಿ ಸಿದ್ಧಾಂತಿ, ಶ್ರೀನಾಥ್ ಆಯಾಚಿತ್, ಹರಿಸರ್ವೋತ್ತಮಾಚಾರ್, ಮೈಲಾರಾವ್ ಕುಲಕರ್ಣಿ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು

# ಗೃಹ ಸಚಿವರು ಸ್ಥಳಕ್ಕೆ ಆಗಮಿಸುವವರೆಗೂ ಅನಿರ್ಧಿಷ್ಟಾವಧಿ ಧರಣಿ : ನಾಗರಾಜ ನಾಯಕ




• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಗೃಹ ಸಚಿವರ ಹೆಸರು ಹೇಳಿಕೊಂಡು ಶಾಸಕ ಸ್ಥಾನದಅಪೇಕ್ಷೆಯಿಂದಗೋಪಾಲಕೃಷ್ಣನಾಯಕಮನಸ್ಸಿಗೆ ಬಂದಂತೆಮೆರೆಯುತ್ತಿದ್ದು, ಅದಕ್ಕೆಕಡಿವಾಣ ಹಾಕಬೇಕು. ಗೃಹ ಸಚಿವರ ಪ್ರಭಾವ ನಿಲ್ಲಿಸಬೇಕು ಮತ್ತು ಗೃಹ ಸಚಿವ ಪರಮೇಶ್ವರತಾಲೂಕಿಗೆಆಗಮಿಸುವವರೆಗೆ ಅನಿರ್ಧಿಷ್ಟಾವಧಿಧರಣಿ ಮುಂದುವರೆಯುತ್ತದೆಎಂದು ನ್ಯಾಯವಾದಿ ನಾಗರಾಜ ನಾಯಕ ಹೇಳಿದರು.

ಪಟ್ಟಣದತಹಸೀಲ್ದಾರ ಕಚೇರಿಯ ಹೊರಾಂಗಣದಲ್ಲಿ ಹಮ್ಮಿಕೊಂಡಧರಣಿಯಲ್ಲಿ ಪಾಲ್ಗೊಂಡುಅವರು ಮಾತನಾಡಿದರು. ಗೃಹ ಸಚಿವರ ಆಪ್ತ ಎಂದು ಹೇಳಿಕೊಳ್ಳುತ್ತಾ ಗೃಹ ಸಚಿವರಕಚೇರಿಯಿಂದ ಫೋನ್ ಮಾಡಿಸುತ್ತಾ ಕೆಲವು ದುಷ್ಕೃತ್ಯಗಳನ್ನು ಮಾಡುತ್ತಿದ್ದಾನೆ. ಶಾಸಕನಾಗಬೇಕು ಎನ್ನುವ ಹುಚ್ಚಿನಿಂದಅಂಕೋಲಾದ ಶಾಂತ ಊರುಗಳಲ್ಲಿ ಅಶಾಂತಿಉಂಟುಮಾಡುತ್ತಿದ್ದಾನೆಎಂದರು.

ವಂದಿಗೆ ಗ್ರಾಮದಲ್ಲಿ ಬುಧವಾರರಾತ್ರಿಕಾರ್ಯಕ್ರಮ ನಡೆಯುವಾಗಗೋಪಾಲಕೃಷ್ಣನಾಯಕಚಿತಾವಣೆಯಿಂದ ಕೆಲವುಯುವಕರುನಾನುಮಾತನಾಡುತ್ತಿರುವಾಗಅವಾಚ್ಯ ಶಬ್ದಗಳಿಂದ ನಿಂದಿಸಿ ಅಪಹಾಸ್ಯಮಾಡಿದ್ದಾರೆ. ಅದರ ವಿರುದ್ಧದೂರು ನೀಡಲು ಬಂದಾಗನಮ್ಮೊಂದಿಗೆ ಬಂದ ಕೆಲವು ಅಮಾಯಕರ ಮೇಲು ಗೋಪಾಲಕೃಷ್ಣ ನಾಯಕದೂರು ನೀಡಿದ್ದಾನೆಎಂದು ನಾಗರಾಜ ನಾಯಕ ವಿವರಿಸಿದರು. ಶಾಸಕ ದಿನಕರ ಶೆಟ್ಟಿ ಮಾತನಾಡಿ, ಅಂಕೋಲಾ ಪೊಲೀಸ್‌ಠಾಣೆಯಲ್ಲಿ ಬುಧವಾರ ನ್ಯಾಯವಾದಿ ನಾಗರಾಜ ನಾಯಕರ ವಿರುದ್ಧಎಫ್‌ಐಆರ್‌ದಾಖಲೆ ಮಾಡಿದ್ದಾರೆ. ಅವರು ನಮ್ಮ ಪಕ್ಷದ ಹಿರಿಯ ನಾಯಕರು ಹೌದು. ಅವರ ಪರವಾಗಿ ನಾನು ನಿಲ್ಲುತ್ತೇನೆ. ಕಾಂಗ್ರೆಸ್ ಸರಕಾರಎಂದರೆ ಪೊಲೀಸರಿಗೆ ಭಯವಿದೆ. ಅನ್ಯಾಯಕಂಡುಬಂದಲ್ಲಿ ನ್ಯಾಯಕೊಡುಸುವಲ್ಲಿ ಪೊಲೀಸರು ಹಿನ್ನಡೆಂ ಮಾಗಿದ್ದಾರೆಎಂದರು. ಪ್ರತಿಭಟನೆ ಸ್ಥಳಕ್ಕೆ ಎಸ್ಪಿ ದೀಪನ್‌ಎಂ.ಎನ್, ಡಿವೈಎಸ್ಪಿ ಗಿರೀಶ, ಪಿಐ ಚಂದ್ರಶೇಖರ ಮಠಪತಿ, ಪಿಎಸ್‌ಐಗಳಾದಗುರುನಾಥ ಹಾದಿಮನೆ, ಲಲಿತಾರಜಪೂತ ಭೇಟಿ ನೀಡಿದರು. ಈ ಸಂದರ್ಭದಲ್ಲಿ ವಕೀಲರಾದಅನಂತತಲಗೇರಿ, ರಾಜು ಹರಿಕಂತ್ರ, ಪ್ರಮುಖರಾದ ಸಂಜಯ ನಾಯ್ಕ ಭಾವಿಕೇರಿ, ಮಂಜುನಾಥ ನಾಯಕಅ–ಡ್ಲೂರು, ರಾಮಚಂದ್ರ ಹೆಗಡೆ, ಬಿಂದೇಶ ನಾಯಕ ಹಿಚ್ಕಡ, ನಿತ್ಯಾನಂದಗಾಂವಕರ, ಗೋಪು ಅಡ್ಲೂರು, ಉದಯ ವಾಮನ ನಾಯಕ, ಹರೀಶ ನಾಯಕ ಸೇರಿದಂತೆಅನೇಕರು ಉಪಸ್ಥಿತರಿದ್ದರು.

# ಶ್ರೀಧರಗಡ್ಡೆಯಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ




ಶ್ರೀಧರಗಡ್ಡೆಯ ಬಸವೇಶ್ವರ ದೇವಸ್ಥಾನದ ಆವರಣದಲ್ಲಿ, ಎರ್ರಿಸ್ವಾಮಿ ತೊಗಲುಗೊಂಬೆ ಕಲಾ ಮೇಳಟ್ರಸ್ಟ್(ರಿ)ಬಳ್ಳಾರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಬೆಂಗಳೂರು ಇವರ ವಿಶೇಷ ಘಟಕ ಯೋಜನೆ ಅಡಿಯಲ್ಲಿ "ಜಾನಪದ ಸಂಭ್ರಮ" ಎನ್ನುವ ಶೀರ್ಷಿಕೆಮಾಲಿಕೆಯ ಸಾಂಸ್ಕೃತಿಕ ಕಾರ್ಯಕ್ರಮಗಳುಜರುಗಿದವು. ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಉದ್ಘಾಟಿಸಿದ ಪರಮಪೂಜ್ಯ ಶ್ರೀಮರಿ ಕೊಟ್ಟೂರು ದೇಶಿಕರು, ನಿಯೋಜಿತ ಉತ್ತರಾಧಿಕಾರಿಗಳು ಶ್ರೀ ಜಗದ್ಗುರು ಕೊಟ್ಟೂರು ಸ್ವಾಮಿ ಸಂಸ್ಥಾನ ಮಠ ಶ್ರೀಧರಗಡ್ಡೆ ಇವರು ತಮ್ಮ ಆಶೀರ್ವಚನವನ್ನು ನೀಡುತ್ತಾ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ತುಂಬಾ ಉತ್ತಮವಾದ ಕೆಲಸವನ್ನು ಮಾಡುತ್ತಿದೆ ಈ ತರಹದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಳ್ಳಿಗಳಲ್ಲಿ ಹಮ್ಮಿಕೊಳ್ಳುತ್ತಿರುವುದು ತುಂಬಾ ಸ್ವಾಗತಾರ್ಹ, ಈಗಿನ ಜನರು ಪಾಶ್ಚಾತ್ಯ ಸಂಸ್ಕೃತಿಗೆ ಮಾರುವಾಗದೆ ನಮ್ಮ ಹಳ್ಳಿಗಾಡಿನ ಕಲೆಗಳಾದ ತೊಗಲುಗೊಂಬೆ, ಜನಪದ, ಬಯಲಾಟ ಈ ತರಹದ ಕಲೆಗಳನ್ನು ಮಕ್ಕಳಿಗೆ ಕಲಿಸಲುಹೆಚ್ಚು ಪ್ರೋತ್ಸಾಹಿಸಬೇಕು ಎಂದು ತಿಳಿಸಿದರು ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಬಿ. ನಾಗರಾಜ್ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಮಾತನಾಡುತ್ತಾ ಶ್ರೀಧರಗಡ್ಡೆಯು ಕಲೆಗಳ ತವರೂರು ಈ ಊರಿನಲ್ಲಿ ಪ್ರಸಿದ್ಧ ಕಲಾವಿದರು ಕಲಾ ಪೋಷಕರು ಇರುವುದು ತುಂಬಾ ಸಂತೋಷದಸಂಗತಿ ಎಂದು ತಿಳಿಸಿದರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ನಂದೀಶ್ ಮುಖಂಡರು ಶ್ರೀಧರ್ ಗಡ್ಡೆ. ನಮ್ಮ ಗ್ರಾಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಯಾವುದೇ ಕಾರ್ಯಕ್ರಮಗಳನ್ನು ಆಯೋಜಿಸಿದರುನಾವು ತನು, ಮನ, ಧನಗಳಿಂದ ಪ್ರೋತ್ಸಾಹಿಸುತ್ತೇವೆ ಎಂದು ತಮ್ಮ ಅಧ್ಯಕ್ಷತೆನುಡಿಗಳನ ್ನಆಡಿದರುವೇದಿಕೆಯ ಮೇಲೆ ದೊಡ್ಡಬಸಪ್ಪಯಾಟಿ ಗೌರಿಹಳ್ಳಿಮನೆಮಾಲೀಕರುಬಳ್ಳಾರಿ, ಎಸ್.ಡಿ.ವೀರನಗೌಡ ಉದ್ಯಮಿಗಳು ಶ್ರೀಧರಗಡ್ಡೆ, ಎ ಜಂಬನಗೌಡ ಬಸವೇಶ್ವರ ಯುವಕ ಸಂಘ ಶ್ರೀಧರಗಡ್ಡೆ, ನಾಗೇಂದ್ರಪ್ಪ ಅಧ್ಯಕ್ಷರು ಬಸವೇಶ್ವರ ಟ್ರಸ್ಟ್ ಕಮಿಟಿ ಶ್ರೀಧರಗಡ್ಡೆ, ಪಿ. ನಿರಂಜನ್ ಮುಖಂಡರು ಶ್ರೀಧರಗಡ್ಡೆ, ಬಿ. ಬಸವರಾಜ್ ಉಪಾಧ್ಯಕ್ಷರು ಶ್ರೀ ಬಸವೇಶ್ವರ ಭಜನಾ ಮಂಡಳಿ ಶ್ರೀಧರ ಗಡ್ಡೆ, ಇನ್ನು ಮುಂತಾದವರು ಪಾಲ್ಗೊಂಡಿದ್ದರು. ವೇದಿಕೆಯ ಕಾರ್ಯಕ್ರಮದ ನಂತರ ಸಾಂಸ್ಕೃತಿಕ ಕಾರ್ಯಕ್ರಮಗಳ ಮಾಲಿಕೆಯಲ್ಲಿ ತೊಗಲಗೊಂಬೆ ಪ್ರದರ್ಶನ –ಶ್ರೀಮತಿ ಹುಲಿಗೆಮ್ಮ ಮತ್ತು ತಂಡ ಬಳ್ಳಾರಿ, ಸುಗಮ ಸಂಗೀತ ಕು. ಸಹನಾ ಮತ್ತು ತಂಡ ಕಂಪ್ಲಿ, ಜಾನಪದ ನೃತ್ಯಕು. ಬಾನವತ ಮಾಯುಖ ಮತ್ತು ತಂಡ ಬಳ್ಳಾರಿ ಹಾಗೂ ಕೀಬೋರ್ಡ್–ಶಿವಕುಮಾರ್ ಬಂಡಿಹಟ್ಟಿ ತಬಲಾ–ಯೋಗೇಶ್ ಸಂಗನಕಲ್ಲು. ಈ ಕಾರ್ಯಕ್ರಮಗಳು ಸುಮಾರು ಮೂರು ತಾಸಿಗೂ ಹೆಚ್ಚು ನಡೆದವು ಈ ಕಾರ್ಯಕ್ರಮದಲ್ಲಿ ಕಿಕ್ಕಿರಿದು ತುಂಬಿದ್ದ ಜನಸ್ತೋಮವು ಚಪ್ಪಾಳೆಗಳಿಂದ ಕಲಾವಿದರನ್ನು ಹುರಿದುಂಬಿಸಿದರು. ಜಡೇಶ ಎಮ್ಮಿಗನೂರು ಕಾರ್ಯಕ್ರಮ ನಿರೂಪಣೆ ಮಾಡಿದರು. ಎರ್ರಿಸ್ವಾಮಿ ತೊಗಲುಗೊಂಬೆ ಕಲಾ ಮೇಳ ಟ್ರಸ್ಟ್‌ನ ಅಧ್ಯಕ್ಷರಾದ ಪ್ರಭುರವರು ಪ್ರಾಸ್ತವಿಕ ಮಾತನಾಡಿದರು. ಟ್ರಸ್ಟ್ ಕಾರ್ಯದರ್ಶಿ ಶ್ರೀಮತಿ ಪಿ. ರೇಖಾ ರವರು ವಂದಿಸಿದರು.

# ಕಂದಕೂರು ಕಾಲೇಜಿಗೆ ಹೈಟೆಕ್ ವ್ಯವಸ್ಥೆ ಇರಲಿ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಗುರಮಠಕಲ್ ಕ್ಷೇತ್ರದ ಕಂದಕೂರ ಗ್ರಾಮಕ್ಕೆ ಸರ್ಕಾರ ನೂತನವಾಗಿ ಪಿಯುಸಿ ಕಾಲೇಜು ಮಂಜೂರು ಮಾಡಿದ್ದು, ಪ್ರಸಕ್ತ ಸಾಲಿನಿಂದಲೇ ವಿದ್ಯಾರ್ಥಿಗಳ ದಾಖಲಾತಿಗೆ ಸತತ ಪ್ರಯತ್ನ ಮಾಡುವಂತೆ ಶಾಸಕ ಶರಣಗೌಡ ಕಂದಕೂರ ಪದವಿ ಪೂರ್ವ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು. ಗುರುವಾರ ಗ್ರಾಮದ ಸರ್ಕಾರಿ ಪ್ರೌಢಶಾಲೆಗೆ ಭೇಟಿ ನೀಡಿ, ಉನ್ನತೀಕರಿಸಿದ ಪದವಿ ಪೂರ್ವ ಕಾಲೇಜಿಗೆ ಬೇಕಾದ ಸೌಲಭ್ಯಗಳ ಬಗ್ಗೆ ಪರಿಶೀಲನೆ ಮಾಡಿ ಅಧಿಕಾರಿಗಳ ಜತೆ ಔಪಚಾರಿಕ ಸಭೆ ನಡೆಸಿದ ಅವರು, ಇದು ನನ್ನ ಸ್ವಂತ ಊರು. ಕಂದಕೂರಿನಲ್ಲಿ ಪಿಯುಸಿ ಕಾಲೇಜು ಸ್ಥಾಪನೆಯಾಗಬೇಕು ಎಂಬುದು ನಮ್ಮ ತಂದೆ, ಮಾಜಿ ಶಾಸಕರಾದ ದಿ.ನಾಗನಗೌಡ ಅವರ ಬಹುದಿನಗಳ ಕನಸಾಗಿತ್ತು ಎಂದರು. ಅವರು ಶಾಸಕರಾಗಿದ್ದಾಗಲೇ ಇಲ್ಲಿ ಕಾಲೇಜು ಸ್ಥಾಪನೆಗೆ ಸಾಕಷ್ಟು ಪ್ರಯತ್ನ ಮಾಡಿದ್ದರು. ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರ ಮೇಲೆ ನಾನು ಹಲವು ಬಾರಿ ಮನವಿ ಮಾಡಿ ಒತ್ತಡ ಹಾಕಿದ ಮೇಲೆ ಈ ವರ್ಷದಿಂದ ಸರ್ಕಾರ ಕಂದಕೂರಿನಲ್ಲಿ ನೂತನ ಕಾಲೇಜು ಆರಂಭಿಸಿದೆ. ಪ್ರಸಕ್ತ ವರ್ಷದಿಂದಲೇ ಹೆಚ್ಚಿನ ಪ್ರಮಾಣದಲ್ಲಿ ವಿದ್ಯಾರ್ಥಿಗಳ ದಾಖಲಾತಿಗೆ ವಿಶೇಷಗಮನ ಹರಿಸುವಂತೆ ನಿರ್ದೇಶನ ನೀಡಿದರು. ಕಲಾ ವಿಭಾಗಕ್ಕಿಂತ ವಾಣಿಜ್ಯ ವಿಭಾಗದ ಕೋರ್ಸ್‌ಗಳಿಗೆ ಹೆಚ್ಚಿನ ಅವಕಾಶಗಳಿವೆ. ಬಿಕಾಂ, ಎಂಬಿಎ ಪಧವಿ ಮಾಡಿದರೆ ಕಾರ್ಖಾನೆ, ದೊಡ್ಡದೊಡ್ಡ ಖಾಸಗಿ ಉದ್ಯಮಗಳಲ್ಲಿ ಸಾವಿರಾರು ಉದ್ಯೋಗ ಅವಕಾಶಗಳಿವೆ. ಹೀಗಾಗಿ ಕಾಮರ್ಸ್ ಕೋರ್ಸ್ ಆಯ್ಕೆ ಮಾಡಿಕೊಳ್ಳುವಂತೆ ವಿದ್ಯಾರ್ಥಿಗಳಿಗೆ ಉಪನ್ಯಾಸಕರು ಜಾಗೃತಿ ಮೂಡಿಸಲು ತಿಳಿಸಿದರು. ಸಭೆ ನಂತರ ಗ್ರಾಮಸ್ಥರೊಡನೆ ಮಾತನಾಡಿ, ನಮ್ಮೂರಿನ ಮಕ್ಕಳು ಕಾಲೇಜಿಗೆ ದೂರದ ಪಟ್ಟಣಗಳಿಗೆ ಅಲೆಯುವುದು ಬೇಡ ಎಂಬ ಕಾರಣಕ್ಕಾಗಿ ಸ್ಥಳೀಯವಾಗಿ ಕಾಲೇಜು ಮಂಜೂರು ಮಾಡಿಸಲಾಗಿದೆ. ಗ್ರಾಮಸ್ಥರು ತಮ್ಮ ಮಕ್ಕಳಿಗೆ ಹೊಸ ಕಾಲೇಜಿಗೆ ದಾಖಲಾತಿ ಮಾಡಿಸಿ ಎಂದು ಶಾಸಕರು ಸಲಹೆ ನೀಡಿದರು. ಈ ವೇಳೆ ಡಿಡಿಪಿಯು ಪಂಡಿತರಾವ್ ಪವಾರ, ಬಿಇಒ ವೀರಣ್ಣ ಕನ್ನಳ್ಳಿ, ಶರಣಗೌಡ ಆಶನಾಳ, ಎಸ್‌ಡಿಎಂಸಿ ಅಧ್ಯಕ್ಷ ವೆಂಕಟರಡ್ಡಿ ಮತ್ತು ಗ್ರಾಮಸ್ಥರು ಇದ್ದರು.

> ಹೊಸ ಕಾಲೇಜಿಗೆ ಬೇಕಾದ ಪೀಠೋಪಕರಣ ಒದಗಿಸಲು ನನ್ನ ಶಾಸಕರ ಅನುದಾನದಲ್ಲಿ ಹಣ ಒದಗಿಸಲಾಗುವುದು. ಕಾಲೇಜಿಗೆ ಉಪನ್ಯಾಸಕರು ಸೇರಿದಂತೆ ಒಟ್ಟಾರೆ ಹೈಟೆಕ್ ಕಾಲೇಜು ಸ್ಥಾಪನೆಯಾಗಬೇಕು.
> – ಶರಣಗೌಡ ಕಂದಕೂರ
> ಗುರಮಠಕಲ್ ಶಾಸಕ

> ಸಧ್ಯ ಹೊಸ ಕಾಲೇಜಿನಲ್ಲಿ ವಾಣಿಜ್ಯ ವಿಭಾಗ ಮಾತ್ರ ಆರಂಭಿಸಲು ಇಲಾಖೆ ಅನುಮತಿ ನೀಡಿದೆ. ಆದರೆ, ಈ ಭಾಗದಲ್ಲಿ ಕಲಾ ವಿಭಾಗಕ್ಕೆ ಹೆಚ್ಚಿನ ಬೇಡಿಕೆ ಇದೆ ಎಂದು ಅಧಿಕಾರಿಗಳು ಶಾಸಕರ ಗಮನಕ್ಕೆ ತಂದರು. ತಕ್ಷಣ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರಿಗೆ ಕರೆ ಮಾಡಿದ ಶಾಸಕರು, ಕಲಾ ವಿಭಾಗ ಆರಂಭಿಸಲು ಅವಕಾಶ ಕೊಡುವಂತೆ ಕೋರಿದರು. ಅದಕ್ಕೆ ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿದರು. ನಂತರ ಇಲಾಖೆ ಪ್ರಧಾನ ಕಾರ್ಯದರ್ಶಿ ರಶ್ಮಿ ಅವರಿಗೆ ಕರೆ ಮಾಡಿ ಕಾಲೇಜಿಗೆ ಬೇಕಾದ ಸೌಲಭ್ಯಗಳನ್ನು ಇಲಾಖೆಯಿಂದ ಒದಗಿಸುವಂತೆ ಮನವಿ ಮಾಡಿದರು.

# ಮೇ ೯ಕ್ಕೆ ಚಿತ್ರದುರ್ಗದಲ್ಲಿ ಬಿಎಸ್‌ವೈ ಅಭಿಮಾನೋತ್ಸವ

• ಮಲ್ಲಮ್ಮ ನುಡಿ ವಾರ್ತೆ ಕುಕನೂರ



ತಾಲೂಕಿನ ಮಸಬಹಂಚಿನಾಳ ಗ್ರಾಮದ ಹೊರ ಹೊಲದಲ್ಲಿ ಇರುವ ಬಿಜೆಪಿ ಪಕ್ಷದ ಕಾರ್ಯಾಲಯದಲ್ಲಿ ಗುರುವಾರ ನಡೆದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಮಾಜಿ ಸಚಿವ ಹಾಲಪ್ಪ ಆಚಾರ್ ಅವರು ಯಲಬುರ್ಗಾ ವಿಧಾನಸಭಾ ಕ್ಷೇತ್ರದಿಂದ 5 ರಿಂದ 6 ಸಾವಿರಕ್ಕೂ ಹೆಚ್ಚು ಬಿಎಸ್‌ವೈ ಅಭಿಮಾನಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ 50 ವರ್ಷದ ಸುವರ್ಣ ರಾಜಕೀಯ ಪಯಣದ ಅಂಗವಾಗಿ ಮೇ 9ರಂದು ಚಿತ್ರದುರ್ಗದಲ್ಲಿ ಅದ್ದೂರಿ ಅಭಿಮಾನೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ದಕ್ಷಿಣ ಭಾರತದಲ್ಲಿ ಬಿಜೆಪಿಗೆ ಬಲವಾದ ನೆಲೆ ಒದಗಿಸುವಲ್ಲಿ ಹಾಗೂ ರಾಜ್ಯದಲ್ಲಿ ಪಕ್ಷವನ್ನು ಅಧಿಕಾರಕ್ಕೆ ತರಿಸುವಲ್ಲಿ ಯಡಿಯೂರಪ್ಪ ಅವರ ಪಾತ್ರ ತುಂಬಾ ಮುಖ್ಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಮತ್ತು ರಾಜ್ಯ ನಾಯಕರು, ಮಾಜಿ ಶಾಸಕರು, ಸಚಿವರು ಹಾಗೂ ಜನಪ್ರತಿನಿಧಿಗಳು, ಅಭಿಮಾನಿಗಳು ಭಾಗವಹಿಸಲಿದ್ದಾರೆ. ರಾಜ್ಯದ ವಿವಿಧ ಭಾಗಗಳಿಂದ ಒಟ್ಟು 10 ಲಕ್ಷಕ್ಕೂ ಹೆಚ್ಚು ಜನರು ಸೇರುವ ನಿರೀಕ್ಷೆಯಿದೆ. 1000ಕ್ಕೂ ಹೆಚ್ಚು ಮಠಾಧೀಶರು ಭಾಗವಹಿಸಲಿದ್ದು, ಅವರಿಗಾಗಿ ವಿಶೇಷ ವೇದಿಕೆ ಕೂಡ ವ್ಯವಸ್ಥೆ ಮಾಡಲಾಗಿದೆ ಎಂದರು.

ಪ್ರತಿ ಗ್ರಾಮ ಪಂಚಾಯಿತಿಯಿಂದ ಬಸ್ ಹಾಗೂ ಟ್ರ್ಯಾಕ್ಸ್ ವ್ಯವಸ್ಥೆ ಮಾಡಲಾಗಿದ್ದು, ಜಿಲ್ಲಾವಾರು ವಾಹನ ನಿಲುಗಡೆಗೆ ಪಾರ್ಕಿಂಗ್ ಸೇರಿದಂತೆ ಅಗತ್ಯ ಮೂಲಸೌಕರ್ಯ ಕಲ್ಪಿಸಲಾಗಿದೆ ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ಮುಖಂಡರಾದ ಶಿವಕುಮಾರ್ ನಾಗಲಪುರಮಠ, ಶರಣಪ್ಪ ಬಣ್ಣದಬಾವಿ, ಸಿದ್ದಲಿಂಗಯ್ಯ ಉಳ್ಳಾಗಡ್ಡಿ, ಮಾರುತಿ ಹೊಸಮನಿ, ಬಾಲರಾಜ್ ಗಾಳಿ, ಮಾಂತೇಶ್ ಹೂಗಾರ್, ಮಂಜುನಾಥ್ ನಾಡಗೌಡ್, ಮಂಜುನಾಥ್ ಮಾಲಗಿತ್ತಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಕರಾಟೆ ಪಂದ್ಯಾವಳಿಗೆ ಜಿಂದಾಲ್ ಶಾಲೆಯ ವಿದ್ಯಾರ್ಥಿಗಳು ಆಯ್ಕೆ



**ಬಳ್ಳಾರಿ:** ಟ್ರೆಡಿಷನಲ್ ಶೊಟೋಕಾನ್ ಕರಾಟೆ ಅಕಾಡೆಮಿ ಕರ್ನಾಟಕದ* ಕರಾಟೆ ವಿದ್ಯಾರ್ಥಿಗಳು ಅಸ್ಸಾಂ ರಾಜ್ಯದ ಗುಹಾಟಿಯಲ್ಲಿ ಮೇ 16 ಮತ್ತು 17 ರಂದು ನಡೆಯಲಿರುವ 24ನೇ ಅಖಿಲ ಭಾರತ ಕರಾಟೆ ಪಂದ್ಯಾವಳಿಯಲ್ಲಿ ಬಳ್ಳಾರಿಯ ತೋರಣಗಲ್ಲು ಜಿಂದಾಲ್ ಶಾಲೆಯ ಕರಾಟೆ ಪಟುಗಳು, ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಯ ಕರಾಟೆ ಪಟುಗಳು ಕಟಾ ಮತ್ತು ಕುಮಿತೆ ವಿಭಾಗಗಳಲ್ಲಿ ತೂಕ ಮತ್ತು ವಯೋಮಿತಿಯಲ್ಲಿ 10 ಬಾಲಕರು, 3 ಬಾಲಕಿಯರು, 4 ತರಬೇತುದಾರರು ಭಾಗವಹಿಸಲಿದ್ದಾರೆ ಎಂದು ಕರಾಟೆ ಅಕಾಡೆಮಿಯ ಹಿರಿಯ ಕರಾಟೆ ತರಬೇತುದಾರರಾದ ಕಟ್ಟೆ ಸ್ವಾಮಿ ತಿಳಿಸಿದ್ದಾರೆ.

# ಕಾಮಗಾರಿ ಕಳಪೆ, ಬಾಗಿಲು ಬಿರುಕು






**ಪಿರಿಯಾಪಟ್ಟಣ:** ನಿರ್ಮಿತಿ ಕೇಂದ್ರದ ಅಧಿಕಾರಿಗಳಿಂದ ನಿರ್ಮಾಣವಾದ ಬಹು ಉದ್ದೇಶಿತ ಕಟ್ಟಡ ಕಾಮಗಾರಿ ಕಳಪೆ ಆದ ಪರಿಣಾಮ ಬಾಗಿಲುಗಳು ಬಿರುಕು ಬಿಟ್ಟು ಉಪಯೋಗಕ್ಕೆ ಬಾರದಂತಾಗಿದೆ ಎಂದು ಆದಿವಾಸಿಗಳ ಮುಖಂಡ ಜೆಡಿ ಜಯಪ್ಪ ಆರೋಪಿಸಿದ್ದಾರೆ.

ತಾಲೂಕಿನ ಗಡಿ ಭಾಗದಲ್ಲಿರುವ ಕೊಪ್ಪ ಗ್ರಾ ಪಂ ವ್ಯಾಪ್ತಿಗೆ ಸೇರಿದ ರಾಣಿ ಗೇಟ್ ಕಾಲೋನಿಯಲ್ಲಿರುವ 75ಕ್ಕೂ ಹೆಚ್ಚು ಕುಟುಂಬ ಹಾಗೂ 350ಕ್ಕೂ ಹೆಚ್ಚು ಜನಸಂಖ್ಯೆ ಇರುವ ಆದಿವಾಸಿಗಳಿಗಾಗಿ ಕಳೆದ ಆರು ತಿಂಗಳುಗಳ ಹಿಂದಷ್ಟೇ ಬಹು ಉಪಯೋಗಕ್ಕಾಗಿ ಕಟ್ಟಡ ನಿರ್ಮಿಸಲಾಗಿದೆ.

ಈ ಕಟ್ಟಡವನ್ನು ಕೇಂದ್ರ ಬುಡಕಟ್ಟು ವ್ಯವಹಾರಗಳ ಮಂತ್ರಾಲಯ ಭಾರತ ಸರ್ಕಾರ ನವ ದೆಹಲಿ ಜಿಲ್ಲಾ ಆಡಳಿತ ಜಿಲ್ಲಾ ಪಂಚಾಯತ್. ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಇವರುಗಳ ಸಂಯುಕ್ತ ಆಶ್ರಯದಲ್ಲಿ ಪಿಎಂ ಜನ್ ಮಾನ್ 2024ರ ಯೋಜನೆ ಅಡಿ 60 ಲಕ್ಷ ರೂ ವೆಚ್ಚದಲ್ಲಿ 2025 ನೇ ಸಾಲಿನ ನ 15 ರಂದು ಕಳೆದ ಆರು ತಿಂಗಳ ಹಿಂದಷ್ಟೇ ವಿವಿಧ ಉದ್ದೇಶ ಕೇಂದ್ರ ಉದ್ಘಾಟನೆಗೊಂಡಿದೆ.

ಆದರೆ ಈ ಕಟ್ಟಡದಲ್ಲಿ ಪುರುಷರು ಮತ್ತು ಮಹಿಳೆಯರ ತಲಾ ಎರಡು ಶೌಚಾಲಯ ಮತ್ತು ಶಾಲಾ ಕೊಠಡಿ. ಅಂಗನವಾಡಿ ಕೇಂದ್ರ. ಸಭಂಗಣ. ಕಚೇರಿ. ಎ ಎನ್ ಎಂ ಸೇರಿದಂತೆ 7 ಕೊಠಡಿ ಸೌಲಭ್ಯ ಹೊಂದಿರುವ ಈ ಕಟ್ಟಡಕ್ಕೆ ಕಾಂಪೌಂಡ್ ಸೌಲಭ್ಯ ಇಲ್ಲವಾಗಿದ್ದು ಬಾಗಿಲುಗಳು ಬಿರುಕು ಬಿಟ್ಟು ಅವ್ಯವಸ್ಥೆ ಆಗಿರುವುದರಿಂದ ಯಾವುದೇ ಭದ್ರತೆ ಇಲ್ಲದಂತಾಗಿದೆ ಎಂದು ಅವರು ದೂರಿದ್ದಾರೆ.

ಆಗಿರುವ ಅವ್ಯವಸ್ಥೆಯ ಬಗ್ಗೆ ನಿರ್ಮಿತಿ ಕೇಂದ್ರದ ಹಿರಿಯ ಅಧಿಕಾರಿಗಳ ಹಾಗೂ ಜಿಲ್ಲಾ ಗಿರಿಜನ ಸಮನ್ವಯ ಅಭಿವೃದ್ಧಿ ಅಧಿಕಾರಿ ಮತ್ತು ತಾಲೂಕು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಿಗೆ ಅನೇಕ ಬಾರಿ ಗಮನಕ್ಕೆ ತರಲಾಗಿದ್ದು ಹಾಗೂ ತಾಲೂಕು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಹಿತ ರಕ್ಷಣಾ ಸಮಿತಿ ಸಭೆಯಲ್ಲೂ ಸಹ ಚರ್ಚಿಸಲಾಗಿದೆ ಆದರೂ ಸಹ ಯಾವುದೇ ಪ್ರಯೋಜನವಾಗಿಲ್ಲ ಎಂದು ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಗಳ ಹಿತ ರಕ್ಷಣಾ ಸಮಿತಿಯ ಸದಸ್ಯರಾಗಿರುವ ಜೆಡಿ ಜಯಪ್ಪ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಆದಿವಾಸಿಗಳಿಗಾಗಿ ಅರಣ್ಯದಲ್ಲಿ ಸಿಗುವ ಕಿರು ಉತ್ಪನ್ನಗಳನ್ನು ಮಾರಾಟ ಮಾಡಿಕೊಂಡು ತಮ್ಮ ಆರ್ಥಿಕ ಅಭಿವೃದ್ಧಿ ಹೊಂದುವ ದೃಷ್ಟಿಯಿಂದ ಪಿರಿಯಾಪಟ್ಟಣ ತಾಲೂಕಿನಲ್ಲಿ ರಾಣಿ ಗೇಟ್ ಮತ್ತು ಮುತ್ತೂರು ಹಾಗೂ ಅಬ್ಬಳತಿ ಆದಿವಾಸಿಗಳ ಕಾಲೋನಿಯಲ್ಲಿ ಈ ಯೋಜನೆ ಅಡಿಯಲ್ಲಿ ಹಣ ಮಂಜೂರು ಮಾಡಿ ಕಟ್ಟಡ ನಿರ್ಮಾಣ ಮಾಡಲಾಗುತ್ತಿದೆ.

ಆದರೆ ರಾಣಿಗೇಟ್ನಲ್ಲಿ ಉದ್ಘಾಟನೆಗೊಂಡಿದ್ದು ಮುತ್ತೂರು ಹಾಗೂ ಅಬ್ಬಳತಿ ಕಾಲೋನಿಯಲ್ಲಿ ಕಾಮಗಾರಿ ಪ್ರಗತಿಯಲ್ಲಿ ಇರುವುದರಿಂದ ಅಲ್ಲಾದರೂ ಸರಿಯಾದ ರೀತಿಯಲ್ಲಿ ಗುಣಮಟ್ಟದ ಕಟ್ಟಡಗಳನ್ನು ನಿರ್ಮಾಣ ಮಾಡಬೇಕೆಂದು ಜೆಡಿ ಜಯಪ್ಪ ಒತ್ತಾಯಿಸಿದ್ದಾರೆ.

ಹಿರಿಯ ಅಧಿಕಾರಿಗಳ ಗಮನಕ್ಕೆ ತರಲಾಗಿದೆ : ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಹಿತ ರಕ್ಷಣಾ ಸಮಿತಿ ಸಭೆಯಲ್ಲಿ ಕಟ್ಟಡದ ವ್ಯವಸ್ಥೆಯ ಬಗ್ಗೆ ಪ್ರಸ್ತಾಪಗೊಂಡ ಹಿನ್ನೆಲೆಯಲ್ಲಿ ಸರಿಪಡಿಸಲು ಹಿರಿಯ ಅಧಿಕಾರಿಗಳಿಗೆ ಪತ್ರ ವ್ಯವಹಾರ ನಡೆಸಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಎನ್‌ಬಿ ಚಂದ್ರಶೇಖರ್ ತಿಳಿಸಿದ್ದಾರೆ.

ಸೂಚಿಸಲಾಗಿತ್ತು: ಉದ್ಘಾಟನೆ ಸಂದರ್ಭದಲ್ಲಿ ಬಾಗಿಲು ಅವ್ಯವಸ್ಥೆಯನ್ನು ಸರಿಪಡಿಸುವಂತೆ ನಿರ್ಮಿತಿ ಕೇಂದ್ರದ ಅಧಿಕಾರಿಗಳಿಗೆ ತಿಳಿಸಲಾಗಿತ್ತು ಆದರೂ ಸಹ ಇಲ್ಲಿವರೆಗೂ ಸರಿಪಡಿಸಿಲ್ಲ ಸದ್ಯದಲ್ಲಿ ಸರಿಪಡಿಸಲು ಮುನ್ನೆಚ್ಚರಿಕೆ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಗಿರಿಜನ ಅಭಿವೃದ್ಧಿ ಸಮನ್ವಯ ಅಧಿಕಾರಿ ಮಲ್ಲೇಶ್ ತಿಳಿಸಿದ್ದಾರೆ.

ಸರಿಪಡಿಸುತ್ತೇವೆ : ಆದಷ್ಟು ಬೇಗ ಕಟ್ಟಡದಲ್ಲಿರುವ ಎಲ್ಲ ಸಮಸ್ಯೆಗಳನ್ನು ಪರಿಹರಿಸುವುದಾಗಿ ನಿರ್ಮಿತಿ ಕೇಂದ್ರದ ಸಹಾಯಕ ಇಂಜಿನಿಯರ್ ಲವ ಸ್ಪಷ್ಟಪಡಿಸಿದ್ದಾರೆ.

# ಆಧ್ಯಾತ್ಮ ಸಂಪತ್ತಿನಿಂದ ಶಾಂತಿ ಪ್ರಾಪ್ತಿ: ಶ್ರೀಗಳು

• ಮಲ್ಲಮ್ಮ ನುಡಿ ವಾರ್ತೆ ಲಕ್ಷ್ಮೇಶ್ವರ



ಸಿರಿತನ ಬಂದಾಗ ಹಿಗ್ಗದೇ ಬಡತನ ಬಂದಾಗ ಕುಗ್ಗದೇ ಕ್ರಿಯಾಶೀಲನಾಗಿ ಬಾಳುವುದೇ ಜೀವನದ ಗುರಿಯಾಗಬೇಕಾಗಿದೆ. ಹೊರಗಿನ ಶ್ರೀಮಂತಿಕೆ ಹೆಚ್ಚಿಸಿಕೊಳ್ಳುವುದರ ಜೊತೆಗೆ ಒಳಗಿರುವ ಆಧ್ಯಾತ್ಮ ಸಂಪತ್ತನ್ನು ಹೆಚ್ಚಿಸಿಕೊಳ್ಳಬೇಕಾಗಿದೆ. ಆಧ್ಯಾತ್ಮ ಸಂಪತ್ತಿನಿಂದ ಜೀವನದಲ್ಲಿ ಸುಖ ಶಾಂತಿ ಪ್ರಾಪ್ತವಾಗುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ಹಾಲೇವಾಡಿಮಠದ ಶ್ರೀ ಜಗದ್ಗುರು ರೇಣುಕಾಚಾರ್ಯ ಮಂದಿರದ ರಜತ ಮಹೋತ್ಸವ-ಜಯಂತ್ಯುತ್ಸವ ಹಾಗೂ ಮಾತಾ ಪಿತೃಗಳ ಪುಣ್ಯ ಸ್ಮರಣೆ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸತ್ಯಶುದ್ಧವಾದ ಜೀವನಕ್ಕೆ ಆದರ್ಶ ಮೌಲ್ಯಗಳ ಪರಿಪಾಲನೆಯ ಅಗತ್ಯವಿದೆ. ಧರ್ಮದ ವೃಕ್ಷ ಬರಿ ವೃಕ್ಷವಲ್ಲ. ಅದೊಂದು ಅದ್ಭುತ ಅಶ್ವತ್ಥ ವೃಕ್ಷ. ಸಮೃದ್ಧಿ ಶಾಂತಿಯ ತಂಗಾಳಿ ನೀಡುವ ಹೆಮ್ಮರ. ಆಚಾರ್ಯರು ಋಷಿ ಮುನಿಗಳು ಸಾಧು ಸಂತ ಮಹಾಂತರು ಜ್ಞಾನ ಸುಧೆಯನ್ನು ಹಂಚುವುದರ ಮೂಲಕ ಇತರರ ಬಾಳು ಬೆಳಗಿಸುತ್ತಾರೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಯುಗಪುರುಷರಾಗಿ ಜಾತಿ ಮತ ಪಂಥಗಳೆನ್ನದೇ ಸಕಲರ ಏಳಿಗೆಗೆ ಶ್ರಮಿಸಿದ್ದಾರೆ. ಅವರು ಕೊಟ್ಟ ಸಂದೇಶ ತೋರಿದ ದಾರಿ ನಮ್ಮೆಲ್ಲರ ಬಾಳಿಗೆ ಬೆಳಕು ತೋರಿವೆ. ಹಾಲೇವಾಡಿಮಠ ಸಹೋದರರು ಸುಂದರ ಮಂದಿರ ನಿರ್ಮಿಸಿ 25 ವರುಷ ತುಂಬಿದ ಸಂದರ್ಭದಲ್ಲಿ ರಜತ ಮಹೋತ್ಸವ ಆಚರಿಸುತ್ತಿರುವುದು ತಮಗೆ ಸಂತಸ ತಂದಿದೆ ಎಂದರು.

ಸಮಾರಂಭ ಉದ್ಘಾಟಿಸಿದ ಆನಂದ ಮೆಕ್ಕಿ ಮಾತನಾಡಿ ಭೌತಿಕ ಬದುಕಿಗೆ ಸಂಪತ್ತಷ್ಟೇ ಮುಖ್ಯವಲ್ಲ. ಅದರೊಂದಿಗೆ ಧರ್ಮ ಶ್ರದ್ಧೆ ಮತ್ತು ಸದಾಚಾರ ಬೆಳೆದು ಬರಬೇಕಾಗಿದೆ. ಈ ದಿಶೆಯಲ್ಲಿ ಹಾಲೇವಾಡಿಮಠ ಸಹೋದರರ ಕಾರ್ಯ ಸ್ತುತ್ಯವಾದುದೆಂದರು. ಚಂಬಣ್ಣ ಬಾಳಿಕಾಯಿ ಅವರು ಭಾವಚಿತ್ರ ಬಿಡುಗಡೆ ಮಾಡಿ ಮಾತನಾಡಿ ಹಾಲೆವಾಡಿಮಠ ಬಂಧುಗಳು ಕೈಗೊಂಡಿರುವ ಧಾರ್ಮಿಕ ಕಾರ್ಯಗಳು ಇತರರಿಗೆ ಸ್ಫೂರ್ತಿದಾಯಕವಾಗಿವೆ ಎಂದರು. ಗದಗ ಸರ್ಕಾರಿ ಮಹಿಳಾ ಕಾಲೇಜಿನ ಡಾ॥ ಸಿದ್ಧಲಿಂಗೇಶ ಸಜ್ಜನಶೆಟ್ರ ಉಪನ್ಯಾಸ ನೀಡಿದರು. ವೀರೇಶ ಕೂಗು, ವಿಜಯ ಮಹಾಂತಶೆಟ್ಟರ, ಕುಬೇರಪ್ಪ ಮಹಾಂತಶೆಟ್ಟರ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ನೇತೃತ್ವವಹಿಸಿದ ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ದುಡಿಮೆಯ ಬದುಕಿನಿಂದ ಉತ್ಕರ್ಷ ಸಾಧ್ಯ. ನಡೆಯುವ ಕಾಲು ದುಡಿಯುವ ಕೈಗಳು ಇರದಿದ್ದರೆ ಏನೂ ಮಾಡಲಾಗದು. ಅರಮನೆ ಇರಲಿ ಗುಡಿಸಲೇ ಇರಲಿ. ದುಡಿಯುವುದರಲ್ಲಿ ಉತ್ಸಾಹ ಇದ್ದರೆ ಬದುಕು ಬಲಗೊಳ್ಳುತ್ತದೆ ಎಂದರು. ಮೈಸೂರು-ಬನ್ನಿಕೊಪ್ಪದ ಡಾ॥ ಮುಮ್ಮಡಿ ಚಂದ್ರಶೇಖರ ಶಿವಾಚಾರ್ಯರು, ಗಂಜೀಗಟ್ಟಿ ಡಾ॥ ವೈಜನಾಥ ಶಿವಾಚಾರ್ಯರು, ಸಿದ್ಧರಬೆಟ್ಟ ಕ್ಷೇತ್ರದ ವೀರಭದ್ರ ಶಿವಾಚಾರ್ಯರು, ಕರೇವಾಡಿಮಠ ಮಳೆಮಲ್ಲಿಕಾರ್ಜುನ ಶಿವಾಚಾರ್ಯರು ಪಾಲ್ಗೊಂಡು ಉಪದೇಶಾಮೃತವನ್ನಿತ್ತರು. ಶಿವಲಿಂಗಯ್ಯ ಹಾಲೆವಾಡಿಮಠ ಕಾರ್ಯಕ್ರಮವನ್ನು ಸಂಯೋಜನೆಗೊಳಿಸಿದ್ದರು. ಡಾ. ಎಸ್.ಜಿ.ಹಾಲೆವಾಡಿಮಠ ಸ್ವಾಗತಿಸಿದರು. ಡಾ.ಪ್ರಭುಸ್ವಾಮಿ ಜಿ. ಹಾಲೆವಾಡಿಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲ ಸಾಧಕರಿಂದ ವೇದಘೋಷ ನಡೆಯಿತು. ಪಾರ್ವತಿ ಕಳ್ಳಿಮಠ ಪ್ರಾರ್ಥನೆ ಸಲ್ಲಿಸಿದರು. ಹೊನ್ನತ್ತಿಯ ಬಸವರಾಜ ಹಿರೇಮಠ ಭಕ್ತಿಗೀತೆ ಹಾಡಿದರು. ಸವಣೂರಿನ ಡಾ॥ ಗುರುಪಾದಯ್ಯ ಸಾಲಿಮಠ ನಿರೂಪಿಸಿದರು. ಸಮಾರಂಭದ ನಂತರ ಅನ್ನದಾಸೋಹ ಜರುಗಿತು.

ಗುರುವಾರ ಸಂಜೆ ಮಾಜಿ ಮುಖ್ಯ ಮಂತ್ರಿ ಸಂಸದ ಬಸವರಾಜ ಬೊಮ್ಮಾಯಿಯವರು ಮುಕ್ತಿಮಂದಿರ ಕ್ಷೇತ್ರಕ್ಕೆ ಭೇಟಿ ನೀಡಿ ಲಿಂ. ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳವರ ಗದ್ದುಗೆ ದರ್ಶನ ಮಾಡಿ ಪ್ರಸ್ತುತ ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳವರ ಆಶೀರ್ವಾದ ಪಡೆದರು.

# ಉದ್ಯೋಗ ನೇಮಕಾತಿ ವಿಳಂಬ: ಹೋರಾಟ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ರಾಜ್ಯದಲ್ಲಿ ಸರ್ಕಾರಿ ಉದ್ಯೋಗ ನೇಮಕಾತಿ ಮಾಡುವುದನ್ನು ಬಿಳಂಬ ಮಾಡುತ್ತಿರುವುದರ ವಿರುದ್ಧ ಇಂದು ಹೊಸ ಜಿಲ್ಲಾಧಿಕಾರಿ ಕಚೇರಿ ಎದುರುಗಡೆ ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿಯಿಂದ ಪ್ರತಿಭಟನೆ ಮಾಡಿ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಸಮಿತಿಯ ಸಂಚಾಲಕ ಜಗದೀಶ್ ನೇಮಕಲ್ ಈ ವೇಳೆ ಮಾತನಾಡುತ್ತಾ, ಕಳೆದ ವರ್ಷ ಸೆಪ್ಟೆಂಬರ್ ತಿಂಗಳಿನಿಂದಲೂ ನಿರಂತರ ಉದ್ಯೋಗಾಕಾಂಕ್ಷಿಗಳು ಹಲವಾರು ಮನವಿ ಪತ್ರ ಕೊಟ್ಟು ಹೋರಾಟ ನಡೆಸುತ್ತಾ ಬಂದರೂ ಸಹ ನೇಮಕಾತಿ ಪ್ರಕ್ರಿಯೆ ಒಂದಲ್ಲಾ ಒಂದು ನೆಪ ಹೇಳಿ ಮುಂದೂಡುತ್ತಾ ರಾಜ್ಯ ಸರ್ಕಾರ ಕಾಲಹರಣ ಮಾಡುತ್ತಿದೆ.

ಉದ್ಯೋಗದ ಭರವಸೆ ಹೊತ್ತು ಕಾಯುತ್ತಿರುವ ಯುವಕರನ್ನು ನಿರಾಶೆಗೊಳಿಸುತ್ತಲೇ ಇದೆ. ಅತೀ ಶೀಘ್ರದಲ್ಲಿ ಅಂತ ಹೇಳುತ್ತಾ ಇನ್ನೂ ಈ ವರ್ಷ ಮೇ ತಿಂಗಳು ಬಂದರೂ ನೇಮಕಾತಿ ಪ್ರಕ್ರಿಯೆ ಪ್ರಾರಂಭ ಮಾಡುತ್ತಿಲ್ಲ ಎಂಸರು.

ಕೂಡಲೇ ಪಿ.ಸಿ. ಹೋರಾಟ ಸಮಿತಿಯ ಶಿಫಾರಸನ್ನು ಜಾರಿಗೊಳಿಸಬೇಕು, ಆರ್ಥಿಕ ಇಲಾಖೆ ಅನುಮೋದನೆ ಕೊಟ್ಟಿರುವ 56,432 ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಕೂಡಲೇ ಪ್ರಾರಂಭಿಸಬೇಕು ಮತ್ತು ಕೆ.ಪಿ.ಎಸ್.ಸಿ ಭ್ರಷ್ಟಾಚಾರ ಮುಕ್ತಗೊಳಿಸಬೇಕೆಂಬ ಬೇಡಿಕೆಗಳ ಮನವಿ ಪತ್ರ ಸಲ್ಲಿಸಲಾಯಿತು. ಈ ವೇಳೆ ಉದ್ಯೋಗಾಕಾಂಕ್ಷಿಗಳಾದ ಪಂಪಾಪತಿ, ಗಾದಿಲಿಂಗ ವೆಂಕಟೇಶ್, ದಾದು ಇನ್ನಿತರರು ಇದ್ದರು.

# ಸಂಗಂ ಸಾಹಿತ್ಯ ಪುರಸ್ಕಾರ ಸಮಾರಂಭ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ನಗರದ ಹೊರ ವಲಯದಲ್ಲಿರುವ ಜ್ಞಾನಾಮೃತ ಕಾಲೇಜಿನಲ್ಲಿ ಮೇ.9 ಮತ್ತು 10 ರಂದು ಎರೆಡು ದಿನಗಳ ಕಾಲ 2025 ರ ಸಂಗಂ ಸಾಹಿತ್ಯ ಪುರಸ್ಕಾರ ಪ್ರದಾನ ಸಮಾರಂಭ ನಡೆಯಲಿದೆ. ಪ್ರಶಸ್ತಿಯು 25 ಸಾವಿರ ರೂ ನಗದು ಹೊಂದಿದೆ.

ಸಂಗಂ ಟ್ರಸ್ಟ್ ಅಧ್ಯಕ್ಷ ಡಾ.ವೈ.ಸಿ.ಯೋಗಾನಂದರೆಡ್ಡಿ, ಕಾರ್ಯದರ್ಶಿ ಡಾ.ಕೆ.ಶಿವಲಿಂಗಪ್ಪ ಹಂದಿಹಾಳು ಹೇಳಿದ್ದಾರೆ. ಅವರು ಇಂದು ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಈ ವಿಷಯ ತಿಳಿಸಿದರು. ರಾಜ್ಯದ ಮತ್ತು ನೆರೆಯ ರಾಜ್ಯಗಳಿಂದ 103 ಜನ ಸಾಹಿತ್ಯಾಸಕ್ತರು ಆಗಮಿಸಲು ನೋಂದಣಿ ಮಾಡಿಕೊಂಡಿದ್ದಾರೆ. ಪ್ರಶಸ್ತಿ ಪುರಸ್ಕಾರದ ಜೊತೆಗೆ ಸಾಹಿತ್ಯಕ್ಕೆ ಸಂಬಂಧಿಸಿದ ಹಲವಾರು ವಿಷಯಗಳ ಕುರಿತು ಚರ್ಚಾಗೋಷ್ಠಿ, ವಿಚಾರ ಸಂಕಿರಣ ನಡೆಯಲಿವೆ.

ಕಾರ್ಯಕ್ರಮವನ್ನು ಓ ಎಲ್ ನಾಗಭೂಷಣ ಸ್ವಾಮಿ ಉದ್ಘಾಟಿಸಲಿದ್ದಾರೆ. ಡಾ. ಅರವಿಂದ ಪಟೇಲ್ ಅಧ್ಯಕ್ಷತೆ ವಹಿಸಲಿದ್ದಾರೆ. ನ್ಯಾಷನಲ್ ಬುಕ್ ಟ್ರಸ್ಟ್ ನ ಅಧಿಕಾರಿಗಳಾದ ಡಾ.ಪತ್ತಿಪಾಕ ಮೋಹನ್ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಕಾವ್ಯ ಸಂವಾದದಲ್ಲಿ ಚಿದಾನಂದ ಸಾಲಿ, ರವಿ ಕುಮಾರ್ ಟೆಲೆಕ್ಸ್, ಭುವನಾ ಹಿರೇಮಠ ಹಾಗೂ ನಾಗಣ್ಣ ಕಿಲಾರಿ (ಕನ್ನಡ ) ತಗುಳ ಗೋಪಾಲ, ಕಲ್ಯಾಣ ಕುಂಜು,ಬಾಲ ಸುಧಾಕರ ಮೌಳಿ ( ತೆಲುಗು) ಭಾಗವಹಿಸಲಿದ್ದಾರೆ.

# ಕುಡಿಯುವ ನೀರು ಪೂರೈಕೆಗೆ ಮೊದಲ ಆದ್ಯತೆ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ




ಜಿಲ್ಲೆಯಲ್ಲಿ ಕುಡಿಯುವ ನೀರು ಪೂರೈಕೆಗೆ ಮೊದಲ ಆದ್ಯತೆ ನೀಡಬೇಕು ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ವರ್ಣಿತ್ ನೇಗಿ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ ಸ್ಥಾಯಿ ಸಮಿತಿ ಕೊಠಡಿ ಸಭಾಂಗಣದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಜಿಲ್ಲಾ ನೀರು ಮತ್ತು ನೈರ್ಮಲ್ಯ ಮಿಷನ್ (ಡಿ.ಡಬ್ಲ್ಯೂ.ಎಸ್.ಎಂ) ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕುಡಿಯುವ ನೀರಿಗೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ನಡೆಯುತ್ತಿರುವ ಎಲ್ಲಾ ಕಾಮಗಾರಿಗಳನ್ನು ಮೊಲದ ಆದ್ಯತೆ ಮೇರೆಗೆ ತ್ವರಿತವಾಗಿ ಪೂರ್ಣಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕು. ಪ್ರಸ್ತುತ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವ ಗ್ರಾಮಗಳಲ್ಲಿ ಬಾಡಿಗೆ ಆಧಾರದ ಮೇಲೆ ಖಾಸಗಿ ಕೊಳವೆ ಬಾವಿಗಳನ್ನು ತೆಗೆದುಕೊಂಡು ವಿವಿಧ ಗ್ರಾಮಗಳಿಗೆ ನೀರು ಸರಬರಾಜು ಮಾಡಲಾಗುತ್ತಿದೆ. ಈ ಎಲ್ಲಾ ಕೊಳವೆ ಬಾವಿಗಳ ನೀರನ್ನು ಕಡ್ಡಾಯವಾಗಿ ಪರೀಕ್ಷಿಸಿದ ಬಳಿಕವೇ ನೀರು ಪೂರೈಸಬೇಕು. ಈಗಾಗಲೇ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ನೀರಿನ ಪರೀಕ್ಷಾ ಕಿಟ್‌ಗಳನ್ನು ನೀಡಲಾಗಿದೆ. ಅಗತ್ಯವಿದ್ದಲ್ಲಿ ನಿಯಮಾನುಸಾರ ಪ್ರಸ್ತಾವನೆ ಸಲ್ಲಿಸಿ. ಪರೀಕ್ಷೆಯಲ್ಲಿ ನೀರು ಕುಡಿಯಲು ಯೋಗ್ಯವಿಲ್ಲವೆಂದು ಕಂಡುಬಂದಲ್ಲಿ ತಕ್ಷಣ ಅಂತಹ ನೀರನ್ನು ಬಳಕೆ ಮಾಡದಂತೆ ತ್ವರಿತ ಕ್ರಮವಹಿಸಬೇಕು. ಕುಡಿಯಲು ಯೋಗ್ಯವಿಲ್ಲದ ಬೋರ್‌ವೆಲ್ ಗಳನ್ನು ಸ್ಥಗಿತಗೊಳಿಸಬೇಕು. ಅಂತಹ ಗ್ರಾಮಗಳಿಗೆ ಟ್ಯಾಂಕರ್ ಮುಖಾಂತರವೇ ನಿರಂತರ ನೀರು ಸರಬರಾಜು ಮಾಡಲು ಕ್ರಮ ಕೈಗೊಳ್ಳಬೇಕು ಎಂದರು.

ಜಿಲ್ಲೆಯ ಯಾವುದೇ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆಗಳು ಉಲ್ಬಣಗೊಂಡರೆ, ಇದರ ಬಗ್ಗೆ ಪ್ರತಿ ವಾರಕ್ಕೊಮ್ಮೆ ಸಭೆ ನಡೆಸಿ ಆಯಾ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳ ಹಂತದಲ್ಲಿಯೇ ಕ್ರಮ ಕೈಗೊಳ್ಳಬೇಕು. ಎಲ್ಲಾ ಗ್ರಾಮಗಳಲ್ಲಿರುವ ಓ.ಹೆಚ್.ಟಿ ಟ್ಯಾಂಕನ್ನು ಪ್ರತಿ ತಿಂಗಳು ಸ್ವಚ್ಛ ಮಾಡಬೇಕು. ಗ್ರಾಮಗಳಲ್ಲಿ ಈಗಾಗಲೇ ಸರಬರಾಜು ಮಾಡುತ್ತಿರುವ ನೀರಿನ ಪೈಪಲೈನ್‌ಗಳಲ್ಲಿ ಯಾವುದೇ ರೀತಿಯ ಸೋರಿಕೆ ಕಂಡುಬಂದಲ್ಲಿ 24 ಗಂಟೆಗಳಲ್ಲಿ ದುರಸ್ಥಿಗೊಳಿಸಿ ನೀರು ಪೂರೈಕೆಯಾಗುವಂತೆ ಸಂಬಂಧಪಟ್ಟ ಅಧಿಕಾರಿಗಳು ನೋಡಿಕೊಳ್ಳಬೇಕು. ಖಾಸಗಿ ಬೋರ್‌ವೆಲ್ ಹಾಗೂ ಟ್ಯಾಂಕರ್ ನೀರಿಗೆ ಸರ್ಕಾರದ ನಿಯಮಾನುಸಾರ ದರ ನಿಗದಿಪಡಿಸಬೇಕು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿಗಳಾದ ಟಿ.ಕೃಷ್ಣಮೂರ್ತಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕೊಪ್ಪಳ ವಿಭಾಗದ ಕಾರ್ಯಪಾಲಕ ಅಭಿಯಂತರರಾದ ಮಹೇಶ ಶಾಸ್ತ್ರಿ ಸೇರಿದಂತೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ವಿವಿಧ ವಿಭಾಗಗಳ ಎಇಇಗಳು, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ನೀರು ಮತ್ತು ನೈರ್ಮಲ್ಯ ಮಿಷನ್ (ಡಿ.ಡಬ್ಲ್ಯೂ.ಎಸ್.ಎಂ) ಸಮಿತಿಯ ಸದಸ್ಯರು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ಪ್ರತ್ಯೇಕ ಜಿಲ್ಲೆ ಯಾದಗಿರಿ, ಕೀರ್ತಿ ಬಿಎಸ್‌ವೈಗೆ ಸಲ್ಲುತ್ತದೆ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಯಾದಗಿರಿಯನ್ನು ಆಡಳಿತಾತ್ಮಕ ದೃಷ್ಟಿಯಿಂದ ಮತ್ತು ಸಮಗ್ರ ಅಭಿವೃದ್ಧಿಯ ಹಿತದೃಷ್ಟಿಯಿಂದ ಪ್ರತ್ಯೇಕ ಜಿಲ್ಲೆಯನ್ನಾಗಿ ಘೋಷಿಸಿದ ಕೀರ್ತಿ ಮಾಜಿ ಮುಖ್ಯಮಂತ್ರಿಗಳಾದ ಸನ್ಮಾನ್ಯ ಶ್ರೀ ಬಿ.ಎಸ್. ಯಡಿಯೂರಪ್ಪನವರಿಗೆ ಸಲ್ಲುತ್ತದೆ.

ದಶಕಗಳ ಕಾಲದ ಜನರ ಬೇಡಿಕೆಯನ್ನು ಅರಿತು, 2009ರಲ್ಲಿ ಕಲಬುರಗಿ ಜಿಲ್ಲೆಯಿಂದ ಯಾದಗಿರಿಯನ್ನು ವಿಭಜಿಸಿ ಕರ್ನಾಟಕದ 30ನೇ ಜಿಲ್ಲೆಯನ್ನಾಗಿ ಮಾಡಿದ ಸಾಹಸ ಸನ್ಮಾನ್ಯ ಯಡಿಯೂರಪ್ಪನವರದ್ದಾಗಿದೆ, ಎಂದು ಮಾಜಿ ಬಿಜೆಪಿ ಜಿಲ್ಲಾಧ್ಯಕ್ಷ ಡಾ. ಶರಣಭೂಪಾಲರೆಡ್ಡಿ ಅವರು ತಿಳಿಸಿದ್ದಾರೆ. ನಾನು ಎರಡು ಬಾರಿ ಬಿಜೆಪಿ ಜಿಲ್ಲಾಧ್ಯಕ್ಷನಾಗಿ ಹಾಗೂ ರಾಜ್ಯ ಕಾರ್ಯಕಾರಿಣಿ ಸದಸ್ಯನಾಗಿ ನೀಡಿದ ಜವಾಬ್ದಾರಿಗಳನ್ನು ನಿಷ್ಠೆಯಿಂದ ಸೇವೆ ಸಲ್ಲಿಸಿದ್ದೇನೆ ಮತ್ತು ಪಕ್ಷದ ಬೆಳವಣಿಗೆಗೆ ಪ್ರಾಮಾಣಿಕವಾಗಿ ಶ್ರಮಿಸಿದ್ದೇನೆ. ಮುಂದಿನ ದಿನಮಾನಗಳಲ್ಲಿ ನಗರ ಸಭೆ ಮತ್ತು ರಾಜ್ಯದಲ್ಲಿ ಬಿಜೆಪಿ ಸರ್ಕಾರ ಆಡಳಿತಕ್ಕೆ ಬಂದರೆ ಯಾದಗಿರಿ ನಗರದ ಮುಖ್ಯ ರಸ್ತೆಯೊಂದಕ್ಕೆ ಸನ್ಮಾನ್ಯ ಶ್ರೀ ಬಿಎಸ್ ಯಡಿಯೂರಪ್ಪನವರ ರಸ್ತೆ ಎಂದು ಹೆಸರನ್ನು ಇಡಲು ಸಂಕಲ್ಪ ಮಾಡುತ್ತೇವೆ.

ದೂರದ ಕಲಬುರಗಿಗೆ ಅಲೆಯುತ್ತಿದ್ದ ಈ ಭಾಗದ ಜನರಿಗೆ ಆಡಳಿತವನ್ನು ಹತ್ತಿರವಾಗಿಸಿ, ಕಂದಾಯ ಮತ್ತು ಅಭಿವೃದ್ಧಿ ಕೆಲಸಗಳು ವೇಗವಾಗಿ ನಡೆಯಲು ಈ ನಿರ್ಧಾರ ಕಾರಣವಾಯಿತು. ಜಿಲ್ಲೆಯಾದ ನಂತರ ಯಾದಗಿರಿಯಲ್ಲಿ ಮೂಲಸೌಕರ್ಯ, ಜಿಲ್ಲಾ ಕೇಂದ್ರದ ಸಂಕೀರ್ಣಗಳು ಮತ್ತು ಶೈಕ್ಷಣಿಕ ಸಂಸ್ಥೆಗಳ ಸ್ಥಾಪನೆಗೆ ಹೆಚ್ಚಿನ ಒತ್ತು ನೀಡಿ, ಇದು ಈ ಭಾಗದ ಜನರ ಆರ್ಥಿಕ ಮತ್ತು ಸಾಮಾಜಿಕ ಪ್ರಗತಿಗೆ ನಾಂದಿ ಹಾಡಿದರು.

ರಾಜ್ಯದಲ್ಲಿ ಬಿಜೆಪಿಗೆ ಯಾವುದೇ ಅಸ್ತಿತ್ವವಿಲ್ಲದ ಕಾಲಘಟ್ಟದಲ್ಲಿ, ಸೈಕಲ್ ಏರಿ ಹಳ್ಳಿ-ಹಳ್ಳಿಗಳನ್ನು ಸುತ್ತಿ ಪಕ್ಷವನ್ನು ಕಟ್ಟಿ ಬೆಳೆಸಿದ ಧೀಮಂತ ಶಕ್ತಿ. ರೈತ ಸುಖವಾಗಿದ್ದರೆ ದೇಶ ಸುಭಿಕ್ಷ ಎನ್ನುವ ಮಾತಿಗೆ ಜೀವ ನೀಡಿದವರು. ಅನ್ನದಾತನ ಬದುಕಿಗೆ ಹೊಸ ಆಯಾಮ ನೀಡಿ ದೇಶದ ಇತಿಹಾಸದಲ್ಲೇ ಮೊಟ್ಟಮೊದಲ ಬಾರಿಗೆ 'ಪ್ರತ್ಯೇಕ ಕೃಷಿ ಬಜೆಟ್' ಮಂಡಿಸಿ, ಕೃಷಿ ಕ್ಷೇತ್ರಕ್ಕೆ ರಾಜಗೌರವ ತಂದುಕೊಟ್ಟ ರೈತಬಂಧು. ರೈತನೊಬ್ಬ ಆರ್ಥಿಕವಾಗಿ ಸಶಕ್ತನಾಗಬೇಕೆಂಬ ಹಂಬಲದಿಂದ ಸಾಲ ಮನ್ನಾ ಮಾಡಿ, ಕೋಟ್ಯಂತರ ಕುಟುಂಬಗಳ ಪಾಲಿನ ಸಂಜೀವಿ. ಬಗರ್ ಹುಕುಂ ಸಾಗುವಳಿದಾರರ ಹಕ್ಕುಗಳಿಗಾಗಿ ಅವರು ನಡೆಸಿದ ಹೋರಾಟ ಮತ್ತು ರೈತ ಸಮುದಾಯದ ಪರವಾಗಿ ಸದಾ ಧ್ವನಿ ಎತ್ತಿದ ಅವರ ಕಾಳಜಿ ಇಂದಿಗೂ ನಮಗೆಲ್ಲ ಪ್ರೇರಣೆ. ಅಧಿಕಾರಕ್ಕೋಸ್ಕರ ಅಲ್ಲ, ರೈತರ ಉದ್ಧಾರಕ್ಕಾಗಿ ಶ್ರಮಿಸಿದ ರೈತಬಂಧು ನಮ್ಮ ಬಿಎಸ್‌ವೈ. ದಕ್ಷಿಣ ಭಾರತದಲ್ಲಿ ಮೊಟ್ಟಮೊದಲ ಬಾರಿಗೆ ಕಮಲ ಅರಳಿಸಿದ ಕೀರ್ತಿ ನಮ್ಮ ಬಿಎಸ್‌ವೈ ಅವರಿಗೆ ಸಲ್ಲುತ್ತದೆ.

ಐದು ದಶಕಗಳಿಂದಲೂ ಅವಿರತವಾಗಿ ಜನಸೇವೆ ಸಲ್ಲಿಸುತ್ತಾ, ಸಂಘಟನೆಯೇ ಉಸಿರೆಂದು ಬದುಕುತ್ತಿರುವ ಕರ್ನಾಟಕ ಬಿಜೆಪಿಯ ಭೀಷ್ಮ, ದಣಿವರಿಯದ ಧೀಮಂತ ಜನನಾಯಕನ 50 ವರ್ಷಗಳ ಸುದೀರ್ಘ ಹಾಗೂ ಸಾರ್ಥಕ ರಾಜಕೀಯ ಜನಸೇವೆಯ ಅಂಗವಾಗಿ, ಮೇ 9 ರಂದು ಕೋಟೆನಾಡು ಚಿತ್ರದುರ್ಗದಲ್ಲಿ ಅಭೂತಪೂರ್ವ "ಬಿಎಸ್‌ವೈ ಅಭಿಮಾನೋತ್ಸವ" ಈ ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾಗುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಸನ್ಮಾನ್ಯ ಯಡಿಯೂರಪ್ಪನವರ ಈ ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾಗಲು ರಾಜ್ಯದ ಮೂಲೆ ಮೂಲೆಗಳಿಂದ ಅಭಿಮಾನಿಗಳು, ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಅತಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲಿದ್ದಾರೆ.

ಆ ಜನನಾಯಕನ ಅಭಿಮಾನೋತ್ಸವಕ್ಕೆ ಯಾದಗಿರಿ ಮತಕ್ಷೇತ್ರದಿಂದ ಸಾವಿರಕ್ಕಿಂತಲೂ ಹೆಚ್ಚು ಪಕ್ಷದ ಕಾರ್ಯಕರ್ತರು, ಹಿರಿಯ ಮುಖಂಡರು, ಅಭಿಮಾನಿಗಳು, ಸಾರ್ವಜನಿಕರು, ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳೋಣ ಎಂದರು. ಈ ಪತ್ರಿಕಾಗೋಷ್ಠಿಯಲ್ಲಿ ಮಾಜಿ ಎಪಿಎಂಸಿ ಅಧ್ಯಕ್ಷರಾದ ಶ್ರೀ ಭೀಮನಗೌಡ ಖ್ಯಾತನಾಳ, ಮಾಜಿ ತಾಲೂಕು ಪಂಚಾಯತ ಸದಸ್ಯರಾದ ಶ್ರೀ ಶರಣಭೂಪಾಲರೆಡ್ಡಿ ಗುರುಸುಣಗಿ, ಜಿಲ್ಲಾ ವಕ್ತಾರರಾದ ಶ್ರೀ ಹಣಮಂತ ಇಟಗಿ, ಮಹಿಳಾ ಮೋರ್ಚ ರಾಜಕಾರಣಿ ಸದಸ್ಯರಾದ ಶ್ರೀಮತಿ ವೀಣಾ ಮೋದಿ, ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷರಾದ ಶ್ರೀಮತಿ ಸುನಿತಾ ಚೌಹಾಣ್, ಮಾಜಿ ಜಿಲ್ಲಾ ಕಾರ್ಯಕಾರಿಣಿ ಸದಸ್ಯರಾದ ಶ್ರೀ ಭೀಮರೆಡ್ಡಿಗೌಡ ಚಟ್ನಳ್ಳಿ, ಜಿಲ್ಲಾ ಪ್ರಕೋಷ್ಠಗಳ ಸಂಚಾಲಕರಾದ ಶ್ರೀ ಮಲ್ಲನಗೌಡ ಬಿಳ್ಹಾರ, ಶ್ರೀ ಶಿವರಾಜ ಪಾಟೀಲ್, ಸಹ ಸಂಚಾಲಕರಾದ ಶ್ರೀ ಉದಯ ರಾಯಕೋಟಿ, ಜಿಲ್ಲಾ ಮಾಧ್ಯಮ ವಕ್ತಾರರಾದ ಶ್ರೀ ವಿರೂಪಾಕ್ಷಯ್ಯ ಸ್ವಾಮಿ ಹೆಡಗಿಮದ್ರ, ಸಹ ವಕ್ತಾರರಾದ ಶ್ರೀ ಚಂದ್ರಶೇಖರ್ ಕಡೆಸೂರ್, ಯುವ ಮೋರ್ಚಾ ಜಿಲ್ಲಾ ಉಪಾಧ್ಯಕ್ಷರಾದ ಶ್ರೀ ಮಲ್ಲು ಕೋಲಿವಾಡ ಇದ್ದರು.

# ವಿದ್ಯಾರ್ಥಿಗಳಿಗೆ ಶುಭಹಾರೈಕೆ



**ಕೆಂಭಾವಿ:** ಪಟ್ಟಣದ ಹೇಮರೆಡ್ಡಿ ಮಲ್ಲಮ್ಮನ ಜಾತ್ರೋತ್ಸವ ಹಾಗೂ ರಥೋತ್ಸವ ಅಂಗವಾಗಿ ಹಮ್ಮಿಕೊಂಡ ಪುರಾಣ ಪ್ರವಚನ ಕಾರ್ಯಕ್ರಮದಲ್ಲಿ 2025–26 ನೇ ಸಾಲಿನಲ್ಲಿ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಡಿಸ್ಟಿಂಕ್ಷನ್,( 85% ರಿಂದ 95,% ) ಪಡೆದ. ಶ್ರೀ ಮಹಾ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಆಂಗ್ಲ ಮಾಧ್ಯಮ ಪ್ರೌಢ ಶಾಲೆಯ ಶಿಕ್ಷಕರಾದ, ವೀರಣ್ಣ ಚರಂತಿಮಠ, ಗುತ್ತನಗೌಡ ಬಿರಾದಾರ, ವಾಸಿಂ ಪಟೇಲ್, ಸದ್ದಾಂ ಬೋನಾಳ, ಭಾರತಿ ಮೇಡಂ ಮತ್ತು ಡಿಸ್ಟಿಂಕ್ಷನ್ ಪಡೆದ 12 ಜನ ವಿದ್ಯಾರ್ಥಿಗಳು ಬಿ ಬಿ ಹಜ್ರಾ 95.52%, ಸೋಪಾನ್ ಬಿ 95.36%, ಆಕಾಂಕ್ಷಾ 93.76%, ಶ್ರೇಯಾ 92.80%, ಮಂಜುಳಾ 92.80, ಭವಾನಿ 92.32%, ಸಿದ್ಧಾರ್ಥ್ ಎಂ ಆರ್ 92.16%, ಅಂಬಮ್ಮ 90.56%, ಮೇಘಾ 88.32%, ಅನಿಸ್ 88.16%, ಶೈಲಜಾ 88.16%, ಸೋಮನಗೌಡ 85.60%, ಇವರುಗಳಿಗೆ ವಿಶೇಷವಾಗಿ ಸನ್ಮಾನಿಸಿ ಗೌರವಿಸಿ ಶುಭಹಾರೈಸಿದ ಗಣ್ಯರು.

ಸಂಸ್ಥೆಯ ಸಂಚಾಲಕ ಮೋಹನರೆಡ್ಡಿ ಡಿಗ್ಗಾವಿ ಮಾತನಾಡಿ ಸಾಧನೆಯ ಹಾದಿಯಲ್ಲಿ ಸಾಗುತ್ತಿರುವ ಶಿಕ್ಷಣ ಸಂಸ್ಥೆ ಪ್ರತಿ ವರ್ಷವೂ ತನ್ನದೇ ಆದಂತಹ ವಿಶಿಷ್ಟ ಛಾಪು ಮೂಡಿಸುತ್ತಾ ಬಂದಿದೆ ಈ ಬಾರಿ ಒಟ್ಟು 36 ವಿದ್ಯಾರ್ಥಿಗಳು ಪ್ರವೇಶ ಪಡೆಯುವ ಮೂಲಕ ಒಬ್ಬ ವಿದ್ಯಾರ್ಥಿ ಪರೀಕ್ಷೆಗೆ ಗೈರು ಹಾಜರಾದರೆ, 35 ವಿದ್ಯಾರ್ಥಿಗಳು ಉತ್ತಮ ಅಂಕಗಳನ್ನು ಪಡೆಯುವ ಮೂಲಕ ತೇರ್ಗಡೆ ಹೊಂದಿದ್ದಾರೆ, ಫಲಿತಾಂಶ ಹೆಚ್ಚಿಸುವಲ್ಲಿ ಶಿಕ್ಷಕರು ಬಹಳಷ್ಟು ಶ್ರಮವಹಿಸಿದ್ದಾರೆ.

ಶಾಲಾ ಆಡಳಿತ ಮಂಡಳಿಯ ಸಹಕಾರಕ್ಕೆ ಮೆಚ್ಚುಗೆ ವ್ಯಕ್ತಪಡಿಸುತ್ತಾ, 12 ಜನ ವಿದ್ಯಾರ್ಥಿಗಳು ಜೀವನ ಉಜ್ವಲವಾಗಿ ಉನ್ನತ ವ್ಯಕ್ತಿತ್ವ ಅವರದ್ದಾಗಲಿ ಎಂದರು.

ಇದೇ ವೇಳೆ ಪುರಾಣಿಕ ಕಾಳಹಸ್ತೇಂದ್ರ ಮಹಾಸ್ವಾಮಿಗಳು ಸರಸ್ವತಿ ಪೀಠ ಏಕದಂಡಿಗಿ ಮಠ ಶಹಾಪುರ, ಶ್ರೀಧರ ಸ್ವಾಮಿ ಹಿರೇಮಠ, ಅಧ್ಯಕ್ಷ ಶಾಂತಗೌಡ ಎಂ ಬಿರಾದಾರ, ಉಪಾಧ್ಯಕ್ಷ ಶರಣಬಸವ ಡಿಗ್ಗಾವಿ, ಆಡಳಿತ ಮಂಡಳಿ ಸದಸ್ಯರಾದ ಅಮ್ಮಣ್ಣ ಧರಿ, ರಾಮನಗೌಡ ವಂದಗನೂರು ಯಾಳಗಿ, ಕನಕಪ್ಪ ವಂದಗನೂರು, ಕಲಾವಿದರಾದ ಬಸವರಾಜ ಬಂಟನೂರ, ಯಮನೇಶ ಯಾಳಗಿ, ಸಿದ್ದಣ್ಣ ಆಲ್ದಾಳ, ಸೇರಿದಂತೆ ಪಾಲಕ ಪೋಷಕರು, ಸದ್ಭಕ್ತರು, ಮಹಿಳೆಯರು ಮಕ್ಕಳು ಉಪಸ್ಥಿತರಿದ್ದರು.

# ಗುರುಕುಲ ವಿದ್ಯಾರ್ಥಿಗಳ ಸಾಧನೆ



**ಭಾಲ್ಕಿ:** ತಾಲ್ಲೂಕಿನ ಕರಡ್ಯಾಳದ ಶ್ರೀ ಚನ್ನಬಸವೇಶ್ವರ ಗುರುಕುಲ ವಿಜ್ಞಾನ ಪಿಯು ಕಾಲೇಜಿನ ವಿದ್ಯಾರ್ಥಿ ಶ್ರವ ಶಿವಶಂಕರ ಬ್ಯಾಚುಲರ್ ಆಫ್ ಆರ್ಕಿಟೆಕ್ಚರ್ ಮತ್ತು ಪ್ಲ್ಯಾನಿಂಗ್ ನ ಪರೀಕ್ಷೆಯಲ್ಲಿ ರಾಷ್ಟ್ರಮಟ್ಟದಲ್ಲಿ 71ನೇ ರ್‍ಯಾಂಕ್ ಪಡೆದು ಮಹೋನ್ನತ ಸಾಧನೆಗೈದಿದ್ದಾನೆ ಎಂದು ಪ್ರಾಚಾರ್ಯ ಬಸವರಾಜ ಮೊಳಕೀರೆ ತಿಳಿಸಿದ್ದಾರೆ.

ರಾಮಕೃಷ್ಣ ನಾಗನಾಥ 134, ನಿಶಾ ಮಠಪತಿ 336, ವಿಜೇತ ವಸಂತರಾವ್ 398, ಶ್ರೀವತ್ಸ ಗುರುಬಸಪ್ಪ 904, ಕೃಷ್ಣ ಗೋವಿಂದ 1071ನೇ ರ್‍ಯಾಂಕ್ ಪಡೆದು ದೇಶದ ಪ್ರತಿಷ್ಠಿತ ಎನ್ ಐಟಿ ಕಾಲೇಜುಗಳಲ್ಲಿ ಪ್ರವೇಶ ಪಡೆಯಲು ಅರ್ಹತೆ ಗಿಟ್ಟಿಸಿದ್ದಾರೆ.

ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಬಸವಲಿಂಗ ಪಟ್ಟದ್ದೇವರು, ಪೀಠಾಧಿಪತಿ ಗುರುಬಸವ ಪಟ್ಟದ್ದೇವರು, ಕಾರ್ಯದರ್ಶಿ ಮಹಾಲಿಂಗ ಸ್ವಾಮೀಜಿ, ಆಡಳಿತಾಧಿಕಾರಿ ಮೋಹನರೆಡ್ಡಿ, ಪ್ರಾಚಾರ್ಯ ಬಸವರಾಜ ಮೊಳಕೀರೆ, ಉಪ ಪ್ರಾಚಾರ್ಯ ಸಿದ್ರಾಮ ಗೊಗ್ಗಾ ಸಂತಸ ವ್ಯಕ್ತಪಡಿಸಿದ್ದಾರೆ.

# ಯೋಜನಾಬದ್ಧ ನಗರ ನಿರ್ಮಾಣವೇ ಮೂಲ ಉದ್ದೇಶ




**ಹುಣಸೂರು:** ಒಂದು ಯೋಜನಾಬದ್ಧ ನಗರವನ್ನು ನಿರ್ಮಿಸುವುದು ನಗರಾಭಿವೃದ್ಧಿ ಇಲಾಖೆಯ ಮೂಲ ಉದ್ದೇಶ. ಜನಪ್ರತಿನಿಧಿಗಳ ದೂರದೃಷ್ಟಿ ಮತ್ತು ಅಧಿಕಾರಿಗಳ ಪಾರದರ್ಶಕ ಕೆಲಸದ ಮೂಲಕ ಸಾರ್ವಜನಿಕರಿಗೆ ಸುಸಜ್ಜಿತ ಸೌಲಭ್ಯಗಳನ್ನು ಒದಗಿಸಲು ಅಭಿವೃದ್ಧಿ ಪ್ರಾಧಿಕಾರಗಳನ್ನು ಸ್ಥಾಪಿಸಲಾಗಿದೆ. ಆದರೆ, ಹುಣಸೂರು ನಗರಾಭಿವೃದ್ಧಿ ಪ್ರಾಧಿಕಾರ (ಹೂಡಾ) ಈ ಉದ್ದೇಶವನ್ನೇ ಬುಡಮೇಲಾಗಿಸಿದೆ.

ಸರಕಾರ ಹುಣಸೂರು ಪುರಸಭೆಯನ್ನು ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸದ ನಂತರ ನಗರದ ಯೋಜನಾಬದ್ಧ ಅಭಿವೃದ್ಧಿಗಾಗಿ ಹುಣಸೂರು ಅಭಿವೃದ್ಧಿ ಪ್ರಾಧಿಕಾರವನ್ನು ಸ್ಥಾಪಿಸಿ. ಅಧ್ಯಕ್ಷರು, ಸದಸ್ಯರು ಸೇರಿದಂತೆ ದೈನಂದಿನ ಕರ್ತವ್ಯ ನಿರ್ವಹಣೆಗಾಗಿ ಅಧಿಕಾರಿ ಹಾಗೂ ಸಿಬ್ಬಂದಿಗಳನ್ನು ನೇಮಿಸಿದೆ. ಆದರೆ ಹುಡಾದ ಸಹಾಯಕ ನಿರ್ದೇಶಕಿ ರೇಣುಕಾ ಅವರ ಆಡಳಿತಶಾಯಿ ದರ್ಪ ಮತ್ತು ಭ್ರಷ್ಟಾಚಾರದ ಆರೋಪಗಳು ಸುಂದರ ನಗರದ ಕಲ್ಪನೆಯನ್ನೇ ಚಿವುಟಿ ಹಾಕುತ್ತಿವೆ ಎಂದು ಸಾರ್ವಜನಿಕ ವಲಯದಲ್ಲಿ ಭಾರಿ ಚರ್ಚೆಗೆಗ್ರಾಸವಾಗಿದೆ.

**ಅಧಿಕಾರ ಶಾಹಿ ದರ್ಪ, ನಾಗರಿಕರ ಹಿಡಿಶಾಪ:** ಕಚೇರಿಗೆ ಆಗಮಿಸುವ ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸುವುದು ಒಬ್ಬ ಅಧಿಕಾರಿಯ ಕನಿಷ್ಠ ಕರ್ತವ್ಯ. ಆದರೆ, ರೇಣುಕಾ ಅವರು ಅಧಿಕಾರ ಶಾಹಿ ದರ್ಪದಿಂದ ವರ್ತಿಸುತ್ತಿದ್ದಾರೆ ಎಂಬ ದೂರುಗಳು ವ್ಯಾಪಕವಾಗಿವೆ. ನ್ಯಾಯಯುತ ಕೆಲಸಗಳಿಗಾಗಿ ಬರುವ ಜನರು ಅಧಿಕಾರಿಯ ಉದ್ಧಟತನದ ವರ್ತನೆಯಿಂದ ಬೇಸತ್ತು ಹಿಡಿಶಾಪ ಹಾಕುತ್ತಾ ಮರಳುತ್ತಿದ್ದಾರೆ. ಸಾರ್ವಜನಿಕ ಸೇವಕನೆಂಬುದನ್ನು ಮರೆತು ತಾನೇ ಸರ್ವಾಧಿಕಾರಿ ಎಂಬಂತೆ ನಡೆದುಕೊಳ್ಳುವುದು ಆಡಳಿತ ಯಂತ್ರದ ಪತನದ ಮುನ್ಸೂಚನೆಯಾಗಿದೆ.

**ಸಮನ್ವಯ ಕೊರತೆ:** ಹುಡಾ ಕಚೇರಿಯಲ್ಲಿ ಅಧಿಕಾರಿ ಹಾಗೂ ಸಿಬ್ಬಂದಿಗಳು ಸಾರ್ವಜನಿಕರ ಎದುರು ಒಬ್ಬರ ಮೇಲೊಬ್ಬರು ಆರೋಪ ಪ್ರತ್ಯಾರೋಪಗಳನ್ನು ಮಾಡಿಕೊಳ್ಳುತ್ತಾರೆ. ಅಲ್ಲದೇ ಸಾರ್ವಜನಿಕರ ಎದುರು ಏರುಧ್ವನಿಯಲ್ಲಿ ಕೂಗಾಡುವ ಮೂಲಕ ಸಾರ್ವಜನಿಕರಿಗೆ ಇದು ಸರಕಾರಿ ಕಚೇರಿನಾ ಅಥವಾ ವಾಗ್ಯುದ್ಧದ ಅಖಾಡನ ಎಂದು ಕೇಳಿಕೊಳ್ಳುವಂತಾಗಿದೆ.

# ಹದಗೆಟ್ಟ ಆರಾಳ ರಾಜ್ಯ ಹೆದ್ದಾರಿ..!

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ತಾಲೂಕಿನ ಗಂಗಾವತಿ–ಆರಾಳ ಗ್ರಾಮದಲ್ಲಿ ಹಾಯ್ದು ಹೋಗುವ ರಾಜ್ಯ ಹೆದ್ದಾರಿ ಕಳೆದ ಮೂರು ವರ್ಷಗಳಿಂದ ನಿರ್ವಹಣೆ ಇಲ್ಲದೆ ಹದಗೆಟ್ಟಿದ್ದು ವಾಹನಗಳು, ಬೈಕ್ ಹಾಗೂ ಜನ ಸಂಚಾರಕ್ಕೆ ಅಯೋಗ್ಯವಾಗಿದೆ. ಆರಾಳ, ಮಲಕನಮರಡಿ, ಉಡುಮಕಲ್ ಸೇರಿ ಸುತ್ತಲಿನ ಈ ರಸ್ತೆಗಳಲ್ಲಿ ಓಡಾಡುವ ಗ್ರಾಮಗಳ ಜನರು ಅಧಿಕಾರಿಗಳು ಹಾಗೂ ಸರಕಾರಕ್ಕೆ ಹಿಡಿ ಶಾಪ ಹಾಕುತ್ತಿದ್ದಾರೆ.

ವಡ್ಡರಹಟ್ಟಿಯಿಂದ ಕನಕಗಿರಿ ರಸ್ತೆಯನ್ನು ಸಂಪರ್ಕಿಸುವ ಈ ರಸ್ತೆ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಯಲ್ಲಿ ಇದ್ದು ಈಗಾಗಲೇ ವಿವಿಧ ಅನುದಾನದಲ್ಲಿ ದುರಸ್ತಿ ಮಾಡಲಾಗಿದೆ ಎಂದು ಬಿಲ್ ಎತ್ತುವಳಿ ಮಾಡಲಾಗಿದೆ ಎಂದು ಆರಾಳ ಗ್ರಾಮಸ್ಥರು ಆರೋಪಿಸಿದ್ದಾರೆ.

ಸಾರ್ವಜನಿಕರ ವಾಹನಗಳ ಜತೆ ಆರಾಳ, ಮಲಕನಮರಡಿ ಸೇರಿ ಸುತ್ತಲಿನ ಗ್ರಾಮಗಳ ರೈತರು ಬೆಳೆಯುವ ಭತ್ತ ಸೇರಿದಂತೆ ಇತ–ರೆ ಬೆಳೆಗಳನ್ನು ಇದೇ ಮಾರ್ಗದ ಮೂಲಕ ಗಂಗಾವತಿ ತಂದು ಮಾರಾಟ ಮಾಡಬೇಕಿದೆ. ಜತೆಗೆ ಶಾಲಾ, ಕಾಲೇಜುಗಳಿಗೆ ವಿದ್ಯಾರ್ಥಿಗಳು ಇದೇ ಮಾರ್ಗದಲ್ಲಿ ತೆರಳಬೇಕಿದೆ. ಆಸ್ಪತ್ರೆಗೆ ಹೋಗುವವರ ಗೋಳು ಕೇಳುವವರು ಇಲ್ಲವಾಗಿದೆ.

ತುಂಗಭದ್ರಾ ಎಡದಂಡೆಯ ಕಾಲುವೆ ಆರಾಳ ಗ್ರಾಮದ ಪಕ್ಕದಲ್ಲಿ ಹರಿಯುತ್ತಿದ್ದು ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ಸೇತುವೆ ಅವೈಜ್ಞಾನಿಕವಾಗಿದ್ದು ಪುನರ್ ನಿರ್ಮಾಣದ ಜತೆಗೆ ವಡ್ಡರಹಟ್ಟಿಯಿಂದ ಕನಕಗಿರಿ ರಸ್ತೆಯ ವರೆಗಿನ ರಸ್ತೆಯನ್ನು ದುರಸ್ತಿ ಮಾಡಲು ಅನೇಕ ವರ್ಷಗಳಿಂದ ಮನವಿ ಮಾಡಿದರೂ ಜನಪ್ರತಿನಿಧಿಗಳು ಮತ್ತು ಜನಪ್ರತಿನಿಧಿಗಳು ನಿರ್ಲಕ್ಷ್ಯ ವಹಿಸಿದ್ದು ರಸ್ತೆ ಕಾಮಗಾರಿ ಆರಂಭವಾಗದಿದ್ದಾರೆ ವಡ್ಡರಹಟ್ಟಿ ಕನಕಗಿರಿ ರಸ್ತೆ ತಡೆದು ಉಗ್ರ ಪ್ರತಿಭಟನೆ ನಡೆಸಲಾಗುತ್ತದೆ ಆರಾಳ ಗ್ರಾಮಸ್ಥರು ತಿಳಿಸಿದ್ದಾರೆ.



ಈ ಸಂದರ್ಭದಲ್ಲಿ ಆರಾಳ ಗ್ರಾಮದ ರೈತರಾದ ಹನುಮಂತಪ್ಪ ಡಂಬರ್, ಈಶಪ್ಪ ಕೋರಿ, ಬೆಟ್ಟಪ್ಪ ಇಳಿಗೇರ್, ಮಡಿವಾಳಪ್ಪ, ಶರಣಪ್ಪ, ರುದ್ರಗೌಡ, ಗವಿ ಸಿದ್ದಪ್ಪ, ಪಂಪಾಪತಿ, ವೆಂಕಟೇಶ ತಬಾಲಿ, ಫಕೀರಪ್ಪ ಹರಿಜನ, ವಿರೇಶಪ್ಪ ಡ್ಯಾಗಿ, ಉಮೇಶ, ಪಂಪಾಪತಿ ಎಚ್, ಹನುಮಂತಪ್ಪ ನಾಯಕ, ಬಾಲಪ್ಪ ಭಜಂತ್ರಿ, ದುರುಗೇಶ, ಹನುಮಂತಪ್ಪ ಉಪ್ಪಾರ, ಬಸವಣ್ಣ ಮ್ಯಾಗೇರಿ ಸೇರಿ ಅನೇಕರಿದ್ದರು.

> ಗಂಗಾವತಿ ಆರ್ ಆರ್ ರಸ್ತೆ ದುರಸ್ತೆ ಕುರಿತಂತೆ ಈ ವರ್ಷದ ಯೋಜನೆಯಲ್ಲೇ ಸೇರಿಸಲಾಗಿದೆ ಲೋಕೋಪಯೋಗಿ ಇಲಾಖೆಯ 50–54 ಯೋಜನೆ ಇಡೀ ಕಾಮಗಾರಿ ಕೈಗೊಳ್ಳಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಕೈಗೊಳ್ಳಲಾಗಿದೆ ಶೀಘ್ರದಲ್ಲಿ ಸರ್ಕಾರದಿಂದ ಕಾಮಗಾರಿ ಮಾಡುವಂತೆ ಟೆಂಡರ್ ಸೇರಿದಂತೆ ಅಗತ್ಯ ಹಣಕಾಸು ನಿಗದಿಯಾಗಲಿದೆ.
>
> –ವಿಶ್ವನಾಥ, ಎಇಇ ಲೋಕೋಪಯೋಗಿ ಇಲಾಖೆ

> ಆರಾಳ ಗ್ರಾಮಸ್ಥರು ತಮ್ಮನ್ನು ಭೇಟಿಯಾಗಿ ಮನವಿ ಪತ್ರ ನೀಡಿದ್ದು ವಡ್ಡರಹಟ್ಟಿಯಿಂದ ಆರಾಳ ಗ್ರಾಮದವರೆಗೂ ರಸ್ತೆ ದುರಸ್ತಿ ಕಾರ್ಯ ಮಾಡುವಂತೆ ಮನವಿ ಸಲ್ಲಿಸಿದ್ದಾರೆ. ಈಗಾಗಲೇ ಲೋಕೋಪಯೋಗಿ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದು ರಸ್ತೆ ಮತ್ತು ಎಡದಂಡೆ ಕಾಲುವೆಗೆ ಇರುವ ಬೃಹತ್ ಗಾತ್ರದ ಸೇತುವೆ ಮತ್ತು ಸಣ್ಣಪುಟ್ಟ ಸೇತುವೆಗಳ ನಿರ್ಮಾಣ ಮಾಡಲು 10 ಕೋಟಿ ರೂಪಾಯಿ ಡಿಪಿಆರ್ ತಯಾರಿಸಲಾಗಿದೆ. ಸರಕಾರದಿಂದ ಅನುದಾನ ಬಂದ ತಕ್ಷಣ ಟೆಂಡರ್ ಕರೆದು ಕಾಮಗಾರಿ ಆರಂಭಿಸಲಾಗುತ್ತದೆ.
>
> –ಗಾಲಿ ಜನಾರ್ದನ ರೆಡ್ಡಿ, ಶಾಸಕ

# ಪ್ರಹ್ಲಾದ ಕುಳಲಿ ಅವರ ನಿಧನಕ್ಕೆ ಸಂತಾಪ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಸಂಯುಕ್ತ ಕರ್ನಾಟಕ ಪತ್ರಿಕೆಯಲ್ಲಿ ಸುಧೀರ್ಘ ಅವಧಿಗೆ ಸೇವೆ ಸಲ್ಲಿಸಿದ್ದ ಹಾಗೂ ಮಾಜಿ ಮುಖ್ಯಮಂತ್ರಿ ಆರ್ ಗುಂಡೂರಾವ್ ಅವರ ಮಾಧ್ಯಮ ಕಾರ್ಯದರ್ಶಿಯಾಗಿ ಸೇವೆಸಲ್ಲಿಸಿದ್ದ ಪ್ರಹ್ಲಾದ್ ಕುಳಿಲಿ ಅವರು, ಕೆಂಗೇರಿಯ ಅವರ ನಿವಾಸದಲ್ಲಿ ಕೊನೆಯುಸಿರೆಳೆದಿದ್ದಾರೆ.

ಹಿರಿಯ ಪತ್ರಕರ್ತರಾದ ಪ್ರಹ್ಲಾದ ಕುಳಲಿ ಅವರ ನಿಧಕ್ಕೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘವು (ಕೆಯುಡಬ್ಲ್ಯೂಜೆ) ಸಂತಾಪ ವ್ಯಕ್ತಪಡಿಸಿದೆ.

ಕ್ರೀಯಾಶೀಲ ಪತ್ರಕರ್ತರಾಗಿದ್ದ ಅವರು, ವರದಿಗಾರರ ಕೂಟ ಕಟ್ಟುವಲ್ಲಿಯೂ ಕ್ರೀಯಾಶೀಲವಾಗಿ ಕೆಲಸ ಮಾಡಿದ್ದರು. ಹಿರಿಯ ಪತ್ರಕರ್ತ ಕುಳಲಿ ಅವರನ್ನು ಕೆಯುಡಬ್ಲ್ಯೂಜೆ ಮನೆಯಂಗಳದಲ್ಲಿ ಕಾರ್ಯಕ್ರಮದಲ್ಲಿ ಸನ್ಮಾನಿಸಲಾಗಿತ್ತು ಎಂದು ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಸ್ಮರಿಸಿದ್ದಾರೆ.



ಮೃತರ ಆತ್ಮಕ್ಕೆ ದೇವರು ಚಿರಶಾಂತಿ ಕರುಣಿಸಲಿ. ಕುಟುಂಬದ ಸದಸ್ಯರಿಗೆ ದುಃಖ ಭರಿಸುವ ಶಕ್ತಿ ನೀಡಲಿ ಎಂದು ತಗಡೂರು ಪ್ರಾರ್ಥಿಸಿದ್ದಾರೆ.

# ತುಂಗಭದ್ರ ಡ್ಯಾಂ ಹೂಳು ತೆರವಿಗೆ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ತುಂಗಭದ್ರ ಜಲಾಶಯದಲ್ಲಿ ದಿನದಿಂದ ದಿನಕ್ಕೆ ಹೂಳು ಹೆಚ್ಚುತ್ತಿರುವುದರಿಂದ ನೀರು ಸಂಗ್ರಹ ಸಾಮರ್ಥ್ಯ ಕುಸಿಯುತ್ತಿದ್ದು, ಸರ್ಕಾರ ತಕ್ಷಣವೇ ಹೂಳು ತೆರವು ಕಾರ್ಯ ಕೈಗೊಳ್ಳಬೇಕು. ಇಲ್ಲವಾದರೆ ತುಂಗಭದ್ರ ಡ್ಯಾಂ ಮುಂಭಾಗದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ತುಂಗಭದ್ರ ರೈತ ಸಂಘದ ರಾಜ್ಯಾಧ್ಯಕ್ಷ ಜಿ. ಪುರುಷೋತ್ತಮ ಗೌಡ ಎಚ್ಚರಿಕೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿರುವ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತುಂಗಭದ್ರ ಡ್ಯಾಂನ ಇಂದಿನ ದುಸ್ಥಿತಿಯ ಬಗ್ಗೆ ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು ಎಂದು ಆಗ್ರಹಿಸಿದರು. ಟಿಬಿ ಬೋರ್ಡ್‌ನ ಸಂಪೂರ್ಣ ಮಾಹಿತಿ ಹೊಂದಿರುವ ನಿವೃತ್ತ ಅಧಿಕಾರಿ ಬಿ.ಎಸ್. ಹದ್ಯಾಳ್ ಕೂಡ ಸುದ್ದಿಗೋಷ್ಠಿಯಲ್ಲಿ ಭಾಗವಹಿಸಿ, ಜಲಾಶಯದಲ್ಲಿ ಹೆಚ್ಚುತ್ತಿರುವ ಹೂಳು ನೀರು ಸಂಗ್ರಹ ಸಾಮರ್ಥ್ಯವನ್ನು ಹಾಳು ಮಾಡುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು.



2017ರಲ್ಲಿಯೇ ವಿಧಾನಸಭೆ ಹಾಗೂ ವಿಧಾನ ಪರಿಷತ್‌ನಲ್ಲಿ ಈ ವಿಚಾರವನ್ನು ಪ್ರಸ್ತಾಪಿಸಿ "ಹೂಳಿನ ಜಾತ್ರೆ" ಮೂಲಕ ಸರ್ಕಾರವನ್ನು ಎಚ್ಚರಿಸಲಾಗಿತ್ತು. ಆದರೆ ಇದುವರೆಗೆ ಸಮರ್ಪಕ ಕ್ರಮ ಕೈಗೊಳ್ಳದ ಪರಿಣಾಮ ಇಂದು ಡ್ಯಾಂ ನೀರಿನ ಮಟ್ಟ ಕುಸಿಯುವ ಸ್ಥಿತಿ ನಿರ್ಮಾಣವಾಗಿದೆ ಎಂದು ಅವರು ದೂರಿದರು.

ಟಿಬಿ ಬೋರ್ಡ್‌ನಲ್ಲಿ ಒಂದು ಅಡಿ ಎತ್ತರದ ಗೇಟ್ ನಿರ್ಮಾಣ ಮಾಡಿದರೂ ಜಲಾಶಯದ ನೀರು ಸಂಗ್ರಹ ಮಟ್ಟ ಹೆಚ್ಚಾಗಿಲ್ಲ. ಪ್ರಸ್ತುತ ಡ್ಯಾಂನ ನೀರು ಸಂಗ್ರಹ ಸಾಮರ್ಥ್ಯ ಕೇವಲ 102 ಅಡಿ ಮಟ್ಟಕ್ಕೆ ಸೀಮಿತವಾಗಿರುವುದು ಆತಂಕಕಾರಿ ಬೆಳವಣಿಗೆ ಎಂದು ಹೇಳಿದರು. ಹೀಗಾಗಿ ತುರ್ತಾಗಿ ಹೂಳು ತೆರವು ಕಾರ್ಯ ಕೈಗೊಂಡು ಡ್ಯಾಂನ ಮೂಲ ಸಾಮರ್ಥ್ಯವನ್ನು ಉಳಿಸಬೇಕು ಎಂದು ಒತ್ತಾಯಿಸಿದರು.

# ಶ್ರೀಗಂಧ ಕಳವು ತಡೆಗೆ ಕೆಎಸ್‌ಡಿಎಲ್ ಉಪಕ್ರಮ: ಪರಿಹಾರಗಳಿಗೆ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯದ ಹೆಮ್ಮೆಯ ಮೈಸೂರು ಸ್ಯಾಂಡಲ್ ಸೋಪ್ ತಯಾರಿಕೆಗೆ ಶ್ರೀಗಂಧವು ಪ್ರಮುಖ ಕಚ್ಚಾ ವಸ್ತುವಾಗಿದ್ದು, ಅದರ ಬೆಳೆಯನ್ನು ಉತ್ತೇಜಿಸುವ ನಿಟ್ಟಿನಲ್ಲಿ ಕರ್ನಾಟಕ ಸಾಬೂನು ಮತ್ತು ಮಾರ್ಜಕಗಳ ನಿಯಮಿತ (ಕೆಎಸ್ಡಿಎಲ್) ಮಹತ್ವದ ಉಪಕ್ರಮವೊಂದನ್ನು ರೂಪಿಸಿದೆ. ಜತೆಗೆ ಶ್ರೀಗಂಧದ ಮರ/ಗಿಡಗಳ ಕಳ್ಳತನ ತಡೆಯುವುದು ಕೂಡ ದೊಡ್ಡ ಸವಾಲಾಗಿದ್ದು, ಇದರ ತಡೆಗೆ ಯಾರೇ ತಂತ್ರಜ್ಞಾನದ ನೆರವು ನೀಡಿದರೂ ಅದನ್ನು ಸ್ವೀಕರಿಸಲು ಸಂಸ್ಥೆ ಸಿದ್ಧ ಎಂದು ಬೃಹತ್ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ ಹೇಳಿದ್ದಾರೆ.

ಈ ಉಪಕ್ರಮದ ಭಾಗವಾಗಿ, ಶ್ರೀಗಂಧ ಕಳ್ಳತನ ತಡೆಗೆ ಸಂಬಂಧಿಸಿದ ಸುಧಾರಿತ ಉಪಕರಣಗಳು ಅಥವಾ ಆಧುನಿಕ ತಂಜ್ಞಾನಗಳ ಮಾಹಿತಿ ಹೊಂದಿರುವ ರೈತರು,



ವಿಜ್ಞಾನಿಗಳು ಹಾಗೂ ಸಂಸ್ಥೆಗಳಿಗೆ ಕೆಎಸ್ಡಿಎಲ್ ಅನ್ನು ಸಂಪರ್ಕಿಸಿ ಮಾಹಿತಿ ಹಂಚಿಕೊಳ್ಳುವಂತೆ ಕೋರಲಾಗಿದೆ. ಸಂಸ್ಥೆಯ ಮುಂದೆ ಇಂತಹ ತಂತ್ರಜ್ಞಾನಗಳ ಪ್ರಾತ್ಯಕ್ಷಿಕೆ ನೀಡಲು ಅವಕಾಶ ಕಲ್ಪಿಸಲಾಗುವುದು. ಪ್ರಸ್ತಾಪಿತ ಪರಿಹಾರಗಳು ಸೂಕ್ತ ಹಾಗೂ ಪರಿಣಾಮಕಾರಿ ಎಂದು ಕಂಡುಬಂದರೆ, ಅವುಗಳನ್ನು ಪರಿಗಣಿಸಿ ಅನುಷ್ಠಾನಗೊಳಿಸಲಾಗುವುದು. ಆಯ್ಕೆಯಾಗುವ ಯಾವುದೇ ತಂತ್ರಜ್ಞಾನದ ಅನುಷ್ಠಾನಕ್ಕೆ ಬೇಕಾಗುವ ವೆಚ್ಚವನ್ನು ಕೆಎಸ್ಡಿಎಲ್ ಭರಿಸಲಿದೆ ಎಂದು ಪಾಟೀಲ ಹೇಳಿಕೆಯಲ್ಲಿ ವಿವರಿಸಿದ್ದಾರೆ.

ಇನ್ನು, ಶ್ರೀಗಂಧ ಬೆಳೆ ಉತ್ತೇಜಿಸುವ ಉದ್ದೇಶದಿಂದ ಕೆಎಸ್ ಡಿಎಲ್ ಗೆ ಅತಿ ಹೆಚ್ಚು ಪ್ರಮಾಣದಲ್ಲಿ ಶ್ರೀಗಂಧ ಪೂರೈಸಿದ ನಾಲ್ವರು ರೈತರನ್ನು ಜೂನ್ 4ರಂದು ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಜನ್ಮ ದಿನಾಚರಣೆಯ ಸಂದರ್ಭದಲ್ಲಿ ಪ್ರಶಸ್ತಿ ನೀಡಿ ಸನ್ಮಾನಿಸಲಾಗುವುದು. ಇದೇ ವೇಳೆ, ಶ್ರೀಗಂಧ ಚೋರರನ್ನು ಬಂಧಿಸುವಲ್ಲಿ ಹಾಗೂ ಪ್ರಕರಣ ದಾಖಲಿಸುವಲ್ಲಿ ಗಮನಾರ್ಹ ಸಾಧನೆ ಮಾಡಿರುವ ಪೊಲೀಸ್ ಸಿಬ್ಬಂದಿ, ಅರಣ್ಯ ಇಲಾಖೆ ಅಧಿಕಾರಿಗಳು ಹಾಗೂ ಈ ಸಂಬಂಧ ಮಹತ್ವದ ಮಾಹಿತಿ ನೀಡಿದ ಸಾರ್ವಜನಿಕರನ್ನು ಪುರಸ್ಕರಿಸಲಾಗುವುದು ಎಂದು ಸಚಿವರು ತಿಳಿಸಿದ್ದಾರೆ.

ತಮ್ಮ ಜಮೀನುಗಳಲ್ಲಿ ಶ್ರೀಗಂಧ ಬೆಳೆಸುತ್ತಿರುವ ರೈತರು ಇತ್ತೀಚಿನ ವರ್ಷಗಳಲ್ಲಿ ಹೆಚ್ಚಾಗಿ ಕಳ್ಳತನದ ಭೀತಿ ಎದುರಿಸುತ್ತಿದ್ದಾರೆ.. ಶ್ರೀಗಂಧ ಮರಗಳ ಅಕ್ರಮ ಕಟಾವು ಮತ್ತು ಕಳವು ದಶಕಗಳಿಂದ ಮುಂದುವರಿದಿದ್ದು, ಇಂತಹ ಕೃತ್ಯಗಳನ್ನು ತಡೆಯಲು ಕಠಿಣ ಕಾನೂನುಗಳಿದ್ದರೂ ಶಿಕ್ಷೆಯಲ್ಲಿ ಕೊನೆಯಾಗುತ್ತಿರುವ ಪ್ರಕರಣಗಳ ಸಂಖ್ಯೆ ತುಂಬಾ ಕಡಿಮೆ ಇದೆ. ಈ ಹಿನ್ನೆಲೆಯಲ್ಲಿ ರೈತರಿಗೆ ಕಾನೂನು ಮತ್ತು ತಾಂತ್ರಿಕ ನೆರವು ನೀಡುವ ಜೊತೆಗೆ ಹೆಚ್ಚಿನ ಪ್ರಮಾಣದಲ್ಲಿ ಶ್ರೀಗಂಧ ಬೆಳೆ ಬೆಳೆಯಲು ಉತ್ತೇಜಿಸುವುದು ಸಂಸ್ಥೆಯ ಹೊಣೆಗಾರಿಕೆಯಾಗಿದೆ" ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

# ಭಕ್ತಿಯ ಭಜನೆ ಮತ್ತು ಅನುಭೂತಿಯ ಖವ್ವಾಲಿ



**ಧರ್ಮ–ಮರ್ಮ**

● ಡಾ.ಎಂ.ಮಹ್ಮದ್ ಬಾಷ ಗೂಳ್ಯಂ

ಪ್ರಧಾನ ಸಂಪಾದಕ, ಬೆಂಗಳೂರು

**ಕಳೆದ ಸಂಚಿಕೆಯಿಂದ...**

ಭಗವಂತನನ್ನು ಒಲಿಸಿಕೊಳ್ಳುವುದಕ್ಕೆ ಶ್ರೇಷ್ಠಭಕ್ತನು ಭಜನೆ ಮಾರ್ಗ ಅನುಸರಿವುದು ಭಾರತೀಯರ ಪರಂಪರೆಯ ವೈಶಿಷ್ಟ್ಯಗಳಲ್ಲಿ ಒಂದು. ರಾವಣನು ತನ್ನ ಅಸೀಮ ಭಕ್ತಿಯಯಿಂದ ಶಿವನನ್ನೊಲಿಸಿಕೊಂಡ ಪ್ರಸಂಗ, ಹನುಮ–ರಾಮನ ಪ್ರಸಂಗ, ನಾರದನು ಹಾಡಿ ನಾರಾಯಣನನ್ನು ಸಂತೈಸಿದ ಸಂಗತಿ ಪೌರಾಣಿಕ ಮೂಲಗಳಿಂದ ಸ್ಪಷ್ಟವಾಗುತ್ತದೆ. ಬೌದ್ಧರು, ಜೈನರು ಆಳ್ವಾರರು, ಶಂಕರ, ರಾಮಾನುಜರೆಲ್ಲಾ ಭಗವಂತನ ಆರಾಧನೆಗಾಗಿ ಧರ್ಮ ಪ್ರಚಾರ ಕಾರ್ಯಗಳಿಗಾಗಿ, ಸಂಗೀತವನ್ನು ಬಳಸಿಕೊಂಡರೆ, ಶಿವಶರಣರೂ ಸಂಗೀತಕ್ಕೆ ಮನ್ನಣೆ ನೀಡಿರುವುದು ವಿಶೇಷ. ಇದಕ್ಕಾಗಿ ತತ್ತ್ವಪದಗಳನ್ನೂ, ಅನುಭಾವ ಪದಗಳನ್ನು ರಚಿಸಿಹಾಡಿದ್ದಾರೆ. ಕೇವಲ ವಚನಗಳಷ್ಟೇ ಅಲ್ಲ ಸಂಗೀತಕ್ಕೆ ಹೊಂದಿಕೊಳ್ಳುವ, ಸ್ವರ ವಚನಗಳನ್ನು ತತ್ವಪದಗಳನ್ನೂ ರಚಿಸಿದ್ದಾರೆ. ಅಂಥವರಲ್ಲಿ ಅಕ್ಕಮಹಾದೇವಿ, ಅಲ್ಲಮಪ್ರಭು, ನಿಜಗುಣ ಶಿವಯೋಗಿ, ಷಣ್ಮುಖ ಶಿವಯೋಗಿಗಳು ಮತ್ತು ಕಡಕೋಳ ಮಡಿವಾಳಪ್ಪನಂಥವರಲ್ಲಿ ಸ್ಮರಿಸಬಹುದಾಗಿದೆ.

ತಾಳ ತಂಬುರಿ, ಡಪ್ಪು ಮದ್ದಳೆಗಳೊಡನೆ ಭಕ್ತಿಯಿಂದ ಪುಳಕಿತರಾಗಿ ಹಾಡುವುದನ್ನು ಇಂದಿಗೂ



ಹಳ್ಳಿಗಳಲ್ಲಿ ಕಾಣಬಹುದು. ಶಿವಶರಣರು ಧಾರ್ಮಿಕ ಮೌಲ್ಯ ಪ್ರಸಾರ ಕಾರ್ಯಗಳನ್ನು ವಚನಗಳ ಮೂಲಕ ಅನುಭಾವ ಪದಗಳ ಮೂಲಕ ಸಾರಿದರೆ, ಸೂಫಿಗಳು ಮಸ್ನವಿ (ಕಥನ ಕಾವ್ಯ), ಗಜಲ್ ಹಾಗೂ ಖವ್ವಾಲಿಗಳ ಮೂಲಕ ಇಸ್ಲಾಮೀ ಶ್ರೇಷ್ಠ ಮೌಲ್ಯಗಳನ್ನು ಪ್ರತಿಪಾದಿಸಿದ್ದಾರೆ. ಸಕಲ ಸೃಷ್ಟಿಗೆ ಕಾರಣಕರ್ತನಾದ ಅಲ್ಲಾಹ್‌ನ ಸೇವೆಯನ್ನು ಸಂಗೀತ; ಗಾನ ಕೈಂಕರ್ಯದಿಂದ ಆನಂದಿಸುವುದೇ ಸೂಫಿಗಳ ಗುರಿ. ಇವರ ತಸವ್ವುಫ್(ಅನುಭಾವ) ವಲಯಕ್ಕೆ ಸೇರಿದ ಅನೇಕ ಪಾರಿಭಾಷಿಕ ಪದಗಳಿವೆ. ಅವುಗಳಲ್ಲಿ ಸಮಾವೆಂಬ ಪದವೂ ಒಂದು. ಸಂಗೀತ ಆಲಿಸುವುದನ್ನು ಸಮಾ ಎಂದು ಕರೆಯುತ್ತಾರೆ. ಇದು ಸೂಫಿಗಳ ಭಕ್ತಿಯ ಒಂದು ಅಂಶವೂ ಹೌದು. ಇದನ್ನೇ ಇತ್ತೀಚಿಗೆ ಖವ್ವಾಲಿ ಎಂದು ಕರೆಯುವುದು ರೂಢಿಗತವಾಗಿದೆ.

ಇಲ್ಲಿ ಗಮನಿಸಬೇಕಾದ ಒಂದು ಚರ್ಚೆ. ಇಸ್ಲಾಂ ಧರ್ಮದಲ್ಲಿ ಸಂಗೀತವನ್ನು ಕುರಿತು ದೀರ್ಘಕಾಲದಿಂದ ವಾದ ವಿವಾದಗಳೂ ನಡೆದಿವೆ. ವಿದ್ವಾಂಸ ಎಚ.ಜಿ. ಫಾರ್ಮರ್‌ನು,' ಇಸ್ಲಾಂ ಧರ್ಮವು ಸಂಗೀತಕ್ಕೆ ಮನ್ನಣೆ ನೀಡಿದೆ. ಆದರೆ ನೇರವಾಗಿ ಸಮ್ಮತಿಸಿಲ್ಲ,' ಎಂದಿರುವನು. ಇನ್ನೊಬ್ಬ ಪಾಶ್ಚಿಮಾತ್ಯ ಪ್ರಸಿದ್ಧ ವಿದ್ವಾಂಸ ಜಿ.ರಾಬರ್ಟ್‌ನು,'ಸಂಗೀತವು ಸುರಾಪಾನದಂಥ ದುಃಶ್ಚಟಗಳಿಗೆ ಅವಕಾಶ ಮಾಡಿಕೊಡುವ ಸಂಭವವಿದೆ. ಆದುದರಿಂದ ಇಸ್ಲಾಂ ಧರ್ಮವು ಇದನ್ನು ಸಂಪೂರ್ಣ ನಿಷೇಧಿಸಿದೆ' ಎನ್ನುತಾನೆ. ಇಂತಹ ಚರ್ಚೆಗಳು ಕೇವಲ ವಿದ್ವಾಂಸರಲ್ಲೂ ಹಾಗೂ ಕಟ್ಟರ್‌ಪಂಥೀಯರಲ್ಲೂ ಉಂಟು. ಇದಕ್ಕೆ ಹೊರತಾಗಿ ಸೂಫಿಗಳು ಒಂದು ರಂಜನೆಗಾಗಿ, ವಿಲಾಸಕ್ಕಾಗಿ ಸಂಗೀತ ಬಳಿಸಿಕೊಳ್ಳುವುದು ಧರ್ಮ ಬಾಹಿರವಾದುದೆಂದೂ, ಭಕ್ತಿಯ ಆವೇಶದಲ್ಲಿ ಸಂಗೀತದ ಮೂಲಕ ಪ್ರಾರ್ಥಿಸುವುದು, ದೈವಾನುಗ್ರಹವನ್ನು ಬಯಸಿ ಮೈ ಮರೆತು ಹಾಡುವದು ಅಲ್ಲಾಹ್‌ನ ಒಲುಮೆಗೆ ಸರ್ವಶ್ರೇಷ್ಠ ಅಂತ ಸಾರಿದ್ದರು. ಭಕ್ತಿಪರಂಪರೆಯವರು ತಮ್ಮ ಆಧ್ಯಾತ್ಮ ಸಾಧನೆಗೆ ಮೈಮರೆತು ಖವ್ವಾಲಿ ಹಾಡಿದರೆ, ಪ್ರಾರಂಭದಲ್ಲಿ ಕಟ್ಟರ್‌ಪಂಥೀಯರು ಪ್ರಬಲವಾಗಿ ವಿರೋಧಿಸಿದ್ದರು. ಆದರೂ ಚಿಶ್ತಿ ಪರಂಪರೆಯ ಸೂಫಿಗಳು ಸಂಗೀತವನ್ನು ತಮ್ಮ ಆಧ್ಯಾತ್ಮ ಸಾಧನೆಗೆ ಅಸ್ತ್ರವನ್ನಾಗಿ ಮಾಡಿಕೊಂಡರು. ಧ್ಯಾನದಲ್ಲಿ ಪರಮಾನಂದದ ಮೇರು ಶಿಖರವನ್ನು ತಲುಪುವ ದಿವ್ಯಶಕ್ತಿ ಸಂಗೀತಕ್ಕಿದೆ ಎಂಬುದನ್ನು ಸಾಬಿತು ಪಡಿಸಿದರು. ಖ್ವಾನಖಾನಗಳಲ್ಲಿ ಸಂಗೀತ ಸಭೆಗಳಿಂದ ರಂಜಿಸುವುದು, ಭಕ್ತಿಯಲಿ ಹಾಡುತ್ತ ಕೇಳುತ್ತಾ ಉನ್ಮಾದದಲ್ಲಿ ಕುಣಿದಾಡುವುದು, ಅಲ್ಲಾಹ್‌ನದರ್ಶನದಿಂದ ಉಂಟಾದ ಪರಮಾನಂದದ ಸ್ಥಿತಿ ಎಂದು ಗಣನೆಗೆ ತೆಗೆದುಕೊಳ್ಳುವ ಪರಿಪಾಠವೂ ಇದೆ. ಪ್ರಾರ್ಥನೆ, ನೀತಿ, ಬೋಧೆ ಪರಮಾತ್ಮನ ಸಂಕೇತ ಮತ್ತು ಆಧ್ಯಾತ್ಮಿಕ ವಿಚಾರಗಳು ಖವ್ವಾಲಿ, ನಜಮು, ಗಝಲು, ಷಾಯೆರಿಗಳ ಆತ್ಮವಾಗಿರಬೇಕು. ಪ್ರಾರ್ಥನೆ, ತಸವ್ವುಫ್‌ನಿಂದ ತುಳುಕುವ ಗಝಲಗಳಿಗೆ ಇಲ್ಲಿ ಹೆಚ್ಚಿನ ಆದ್ಯತೆ. ಸಮಾ ಧಾರ್ಮಿಕ ಸಂಗೀತ ಸಭೆಗಳಿಗೆ ಅನೇಕ ಕಟ್ಟುಪಾಡುಗಳನ್ನು ಹಾಕಿರುವುದುಂಟು.

ಹಜರತ್‌ಶೇಖ್ ಮೊಯಿನೋದ್ದಿನ್ ಚಿಶ್ತಿ (ಕ್ರಿ.ಶ. 1236) ಭಾರತಕ್ಕೆ ಬಂದು ನೆಲಸಿದ ಬಳಿಕ ಧಾರ್ಮಿಕ ಸಂಗೀತ ಸಭೆ (ಸಮಾ)ಗಳಿಗೆ ಹೆಚ್ಚಿನ ಮನ್ನಣೆ ದೊರಕಿತು. ಚಿಶ್ತಿ ಸಂಪ್ರದಾಯವು ಸಹಿಷ್ಣುಭಾವ ಹೊಂದಿದ್ದು, ಇವರ ಸಂಗೀತ ಸಭೆಗಳಲ್ಲಿ ಯಾರು ಬೇಕಾದರೂ ಭಾಗವಹಿಸಬಹುದು. ಸಕಲ ಜಾತಿ ಮತದ ಜನರಿಗೆ ಧಾರಾಳವಾಗಿ ಅವಕಾಶ ಮಾಡಿಕೊಟ್ಟಿದ್ದು ಉಲ್ಲೇಖನೀಯ.

**ಮುಂದುವರೆಯುವುದು...**

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)